ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೨೦

**ಪಟ್ಟಿ – ೦೭**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತ ಐದನೇ ಅಧಿವೇಶನ**

**ಗುರುವಾರ, ದಿನಾಂಕ : ೧೩ನೇ ಮಾರ್ಚ್, ೨೦೨೫**

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಉಪ ಮುಖ್ಯಮಂತ್ರಿಗಳು

೩. ಗೃಹ ಸಚಿವರು

೪. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

೫. ಅಬಕಾರಿ ಸಚಿವರು

೬. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

---

## ಪೊಲೀಸ್ ಇಲಾಖೆಯಲ್ಲಿನ ಹುದ್ದೆಗಳಿಗೆ ಮುಂಬಡ್ತಿ ನೀಡುವ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೨ (೮೦೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಎಎಸ್ಐ ಹುದ್ದೆಯಿಂದ ಪಿಎಸ್ಐ ಹುದ್ದೆಗೆ ಮುಂಬಡ್ತಿ ನೀಡಲು ಬಾಕಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಬೇರೆ ಬೇರೆ ಸರ್ಕಾರಿ ಇಲಾಖೆಯಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಹುದ್ದೆಗಳು ಶೇಕಡ ೫೦/೫೦ ರಷ್ಟು ಇದ್ದು ಪೊಲೀಸ್ ಇಲಾಖೆಯಲ್ಲಿ ಮಾತ್ರ ೭೦/೩೦ ರಷ್ಟಿದ್ದು, ಈ ತಾರತಮ್ಯವನ್ನು ಸರಿಪಡಿಸುವಲ್ಲಿ ಸರ್ಕಾರವು ಯಾವ ಕ್ರಮ ಕೈಗೊಳ್ಳಲಾಗಿದೆ ; ಯಾವ ಕಾಲಮಿತಿಯೊಳಗೆ ಈ ತಾರತಮ್ಯವನ್ನು ಸರಿಪಡಿಸಲಾಗುವುದು ;

(ಇ) ಅಗ್ನಿಶಾಮಕ ಮತ್ತು ಕಾರಾಗೃಹ ಇಲಾಖೆಯಲ್ಲಿ ಎಎಸ್ಐ ಮತ್ತು ಪಿಎಸ್ಐ ವಾರ್ಷಿಕ ಗೆಜೆಟೆಡ್ ೩೦ ದಿನಗಳ ವೇತನವನ್ನು ಪಡೆಯುತ್ತಿದ್ದು ಪೊಲೀಸ್ ಇಲಾಖೆಯಲ್ಲಿ ಎಎಸ್ಐ ಮತ್ತು ಪಿಎಸ್ಐ ಗೆಜೆಟೆಡ್ ೧೫ ದಿನಗಳ ವೇತನವನ್ನು ಪಡೆಯುತ್ತಿದ್ದು, ಸಾರ್ವಜನಿಕರಿಗೆ ಹೆಚ್ಚು ಹತ್ತಿರವಾಗಿ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಇಲಾಖೆ ಗೆಜೆಟೆಡ್ ೩೦ ದಿನಗಳ ವೇತನವನ್ನು ನೀಡಲು ಸರ್ಕಾರ ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಹೊಸ ಪೊಲೀಸ್ ಠಾಣೆಯನ್ನು ತೆರೆಯುವ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೩ (೮೦೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಒಂದು ತಾಲ್ಲೂಕಿನಲ್ಲಿ ಅಥವಾ ಹೋಬಳಿಗಳಲ್ಲಿ, ಹೊಸ ಪೊಲೀಸ್ ಠಾಣೆಯನ್ನು ತೆರೆಯಲು ಇರುವ ಮಾನದಂಡಗಳೇನು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಕೋಲಾರ ಜಿಲ್ಲೆಯಲ್ಲಿ ಹೊಸ ಪೊಲೀಸ್ ಠಾಣೆಯನ್ನು ತೆರೆಯಲು ಸರ್ಕಾರದ ಮುಂದೆ ಯಾವುದಾದರೂ ಪ್ರಸ್ತಾವನೆ ಇದೆಯೇ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಕೋಲಾರ ಜಿಲ್ಲೆ ನರಸಾಪುರ ಕೈಗಾರಿಕಾ ಪ್ರದೇಶಗಳಲ್ಲಿ ಸುಮಾರು ೧೫ ಸಾವಿರದಿಂದ ೨೦ ಸಾವಿರ ಜನಗಳ ಓಡಾಟವಿದ್ದು, ಈ ಪ್ರದೇಶಗಳಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಠಾಣೆಯ ಅಗತ್ಯವಿದ್ದು, ಈ ಜಾಗದಲ್ಲಿ ಪೊಲೀಸ್ ಠಾಣೆಯನ್ನು ತೆರೆಯಲು ಸರ್ಕಾರದ ಚಿಂತಿಸಿದೆಯೇ ; ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಪೊಲೀಸ್ ಠಾಣೆಯನ್ನು ತೆರೆಯಲಾಗುವುದು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ರಾಜ್ಯದ ನಿಗಮಗಳಲ್ಲಿ ಅಕ್ರಮದ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೪ (೮೫೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನೀರಾವರಿ ನಿಗಮ ನಿಯಮಿತ ಪ್ರಾರಂಭವಾದಾಗಿನಿಂದಲೂ, ನಿಯಮ ಬಾಹಿರ/ಅಕ್ರಮ ನೇಮಕಾತಿ ಮತ್ತು ಮುಂಬಡ್ತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಜ್ಯದಲ್ಲಿ ೧೫೦ ನಿಗಮ ಮಂಡಳಿಗಳಿದ್ದು, ಈ ನಿಗಮಗಳಲ್ಲಿ ¨ ÀÃð ª ÀÄq ÉÀ(GPA) ಹುದ್ದೆಗಳನ್ನು K.N.N ನಿಗಮದಲ್ಲಿ ಇರುವುದು ನಿಯಮ ಪ್ರಕಾರವಾಗಿದೆಯೇ ; (ವಿವರ ನೀಡುವುದು)

(ಇ) ವಿದ್ಯಾರ್ಹತೆ ಪ್ರಮಾಣ ಪತ್ರಗಳ ಬಗ್ಗೆ ತಪ್ಪು ಮಾಹಿತಿ ನೀಡಿ ನೇಮಕಾತಿ, ವೇತನ ಮುಂಬಡ್ತಿ ಮತ್ತು ಇತರೆ ಸವಲತ್ತುಗಳನ್ನು ಪಡೆಯುತ್ತಿರುವುದರ ಬಗ್ಗೆ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಸದರಿ ನಿಗಮಗಳಲ್ಲಿ ನೊಂದ ನೌಕರರು ಲೋಕಾಯುಕ್ತ ಮತ್ತು ಸರ್ಕಾರದ ಎಲ್ಲಾ ಕಛೇರಿಗಳಿಗೂ ದೂರು ನೀಡಿದ್ದು, ಇದಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಲಾಗಿದೆಯೇ ? (ಮಾಹಿತಿ ನೀಡುವುದು)

## ರಾಜ್ಯದ ಹಣಕಾಸು ಸ್ಥಿತಿಗಳ ಮತ್ತು ತೆರಿಗೆ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೫ (೮೫೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಹಣಕಾಸು ಸ್ಥಿತಿಗತಿ, ತೆರಿಗೆ ರಾಜಸ್ವ ಸಂಗ್ರಹದ ಪರಿಪೂರ್ಣ ವಿವರಗಳೇನು ;

(ಆ) ಸರ್ಕಾರ ಹಾಕಿಕೊಂಡ ಯೋಜನೆಯಂತೆ ತೆರಿಗೆ ರಾಜಸ್ವ ಕೊರತೆಯಾಗಿದೆಯೇ ; ಕೊರತೆಯಾಗಿದ್ದಲ್ಲಿ, ಕಾರಣಗಳೇನು ;

(ಇ) ಕೊರತೆಯನ್ನು ನೀಗಿಸುವ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ರಾಜ್ಯದ ಕಾನೂನು ಕ್ರಮದ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೬ (೮೫೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉದಯಗಿರಿ ಪೊಲೀಸ್ ಠಾಣೆಗೆ ದುಷ್ಕರ್ಮಿಗಳು ಮುತ್ತಿಗೆ ಹಾಕಿ, ಕಲ್ಲು ತೂರಾಟ ನಡೆದ ಘಟನೆ ವರದಿಯಾಗಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಘಟನೆ ಬಗ್ಗೆ ಪೂರ್ವ ಮಾಹಿತಿ ಸಂಗ್ರಹಿಸುವಲ್ಲಿ ಗುಪ್ತಚರ ಇಲಾಖೆ ವಿಫಲವಾಗಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಹಿಂದೆ ಕೆ.ಜಿ. ಹಳ್ಳಿ, ಡಿ.ಜಿ. ಹಳ್ಳಿ, ಹುಬ್ಬಳ್ಳಿ ಪೊಲೀಸ್ ಠಾಣೆಗಳಲ್ಲಿ ಇಂತಹದೆ ಹಲ್ಲೆಗಳು ನಡೆದಿದ್ದು, ಗುಪ್ತಚರ ಇಲಾಖೆ ಇದನ್ನು ಮೊದಲೇ ತಡೆಯಲು ಕ್ರಮಗಳನ್ನು ತೆಗೆದುಕೊಳ್ಳಲು ವಿಫಲವಾಗಿದ್ದು, ಸರ್ಕಾರ ಗಮನಿಸಿದೆಯೇ ?

## ಸರ್ಕಾರಿ ಕಛೇರಿಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುವ ಮಾಹಿತಿ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೭ (೭೫೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕದ ಸರ್ಕಾರಿ ಕಛೇರಿಗಳಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಸ್ವಂತ ಕಟ್ಟಡ ನಿರ್ಮಾಣ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ರಾಜ್ಯದಲ್ಲಿ ಸ್ವಂತ ಸ್ವಂತ ಹಾಗೂ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಸರ್ಕಾರಿ ಕಛೇರಿಗಳೆಷ್ಟು; ಯಾವುವು ; (ವಿವರ ನೀಡುವುದು)

(ಈ) ಪ್ರತಿ ತಾಲ್ಲೂಕಿಗೆ ಎಲ್ಲಾ ಕಛೇರಿ ಹೊಂದಿರುವಂತೆ ಒಂದೇ ಸೂರಿನಡಿ ಕಟ್ಟಡ ನಿರ್ಮಿಸಿದರೆ ಜನರಿಗೆ ಅನುಕೂಲ ಹಾಗೂ ಬಾಡಿಗೆ ಹೊರೆ ಕಡಿಮೆ ಆಗುವುದರಿಂದ ಸರ್ಕಾರ ಈ ಬಗ್ಗೆ ಕ್ರಮ ಕೈಗೊಳ್ಳುವುದೇ ?

## ಅಂಬಾಮಠಕ್ಕೆ ಅನುದಾನ ಒದಗಿಸುವ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೮ (೮೧೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಪ್ರಸಿದ್ಧ ಪ್ರವಾಸಿ ತಾಣವಾದ ಸುಕ್ಷೇತ್ರ ಸಿದ್ಧಿಪರ್ವತ ಅಂಬಾ ಮಠದಲ್ಲಿರುವ ಅಂಬಾದೇವಿ ದೇವಸ್ಥಾನಕ್ಕೆ ೩೪೩ ವರ್ಷಗಳ ಇತಿಹಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಲ್ಲಿ ನಡೆಯುವ ಜಾತ್ರೆಗೆ ಕರ್ನಾಟಕ ಸೇರಿದಂತೆ ಆಂಧ್ರ ಪ್ರದೇಶ, ಮಹಾರಾಷ್ಟ್ರ ರಾಜ್ಯಗಳಿಂದ ಅಧಿಕ ಸಂಖ್ಯೆಯಲ್ಲಿ ಭಕ್ತರು ಇಲ್ಲಿಗೆ ಆಗಮಿಸುವುದರಿಂದ ಶ್ರೀ ಮಠದ ನೂತನ ಶಿಲಾ ಮಂಟಪವನ್ನು ಸ್ಥಾಪಿಸಲು ಹಾಗೂ ಮಠದ ಸರ್ವಾಂಗೀಣ ಅಭಿವೃದ್ಧಿಪಡಿಸಲು ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ?

## ಇಲಾಖೆಗಳಲ್ಲಿ ಸರ್ಕಾರಿ ನಿವೃತ್ತ ಅಧಿಕಾರಿ/ನೌಕರರನ್ನು ಬಿಡುಗಡೆಗೊಳಿಸುವ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೬೩೯ (೮೧೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸರ್ಕಾರದ ಸಚಿವಾಲಯ ಸೇರಿದಂತೆ ರಾಜ್ಯ ಸರ್ಕಾರದ ವಿವಿಧ ಇಲಾಖೆ/ನಿಗಮ/ಮಂಡಳಿಗಳಲ್ಲಿ ಹಾಲಿ ಗುತ್ತಿಗೆ/ಹೊರ

ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ನಿವೃತ್ತ ಸರ್ಕಾರಿ ಅಧಿಕಾರಿ/ನೌಕರರನ್ನು ಸೇವೆಯಿಂದ ಬಿಡುಗಡೆಗೊಳಿಸುವಂತೆ ಸರ್ಕಾರದ ಸೂಚನೆಯಿದ್ದರೂ ಸಹ ಇನ್ನೂ ಹಲವು ನಿವೃತ್ತ ಅಧಿಕಾರಿ/ನೌಕರರು ಇಲಾಖೆ/ನಿಗಮ ಮಂಡಳಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರ ಸೂಚನೆ ಅನುಷ್ಠಾನಗೊಳಿಸದೆ ಇದರಿಂದ ಗುತ್ತಿಗೆ ಆಧಾರದ ಮೇಲೆ ನೇಮಕಗೊಳ್ಳುವ ನಿರುದ್ಯೋಗಿಗಳಿಗೆ ಅನ್ಯಾಯ ಆಗುವುದಿಲ್ಲವೇ ;

(ಇ) ಇಲಾಖೆ/ಮಂಡಳಿಗಳಲ್ಲಿ ಸರ್ಕಾರಿ ಸೇವೆಯಿಂದ ನಿವೃತ್ತಿ ಹೊಂದಿದ ಅಧಿಕಾರಿ/ನೌಕರರನ್ನು ಅನಗತ್ಯವಾಗಿ ಹುದ್ದೆಗಳನ್ನು ಸೃಜಿಸಿ, ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡುವುದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸದರಿ ನಿವೃತ್ತ ಸರ್ಕಾರಿ ಅಧಿಕಾರಿ/ನೌಕರರನ್ನು ಇಲಾಖೆ/ನಿಗಮ ಮಂಡಳಿಗಳಲ್ಲಿ ಕರ್ತವ್ಯದಿಂದ ಬಿಡುಗಡೆಗೊಳಿಸುವ ಸಂಬಂಧ ಸರ್ಕಾರದ ಮುಂದಿನ ಕ್ರಮಗಳೇನು ;

(ಉ) ಈ ರೀತಿಯಾಗಿ ಎಷ್ಟು ಜನ ನಿವೃತ್ತ ಅಧಿಕಾರಿ/ನೌಕರರು ಇಲಾಖೆ/ ನಿಗಮ ಮಂಡಳಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಹಾಗೂ ಎಷ್ಟು ವೇತನ ಪಾವತಿಸಲಾಗುತ್ತಿದೆ ? (ಇಲಾಖಾವಾರು/ನಿಗಮ ಮಂಡಳಿವಾರು ವಿವರ ನೀಡುವುದು)

## ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :–**

೬೪೦ (೮೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪–೨೫ನೇ ಸಾಲಿನಲ್ಲಿ ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಆಯವ್ಯಯದಲ್ಲಿ ಘೋಷಿಸಿದ್ದ ಕಾರ್ಯಕ್ರಮಗಳು ಯಾವುವು ಮತ್ತು ನಿಗಧಿಪಡಿಸಿದ್ದ ಅನುದಾನವೆಷ್ಟು ;

(ಆ) ೨೦೨೪–೨೫ರಲ್ಲಿ ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಯಾವ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಯಿತು ಮತ್ತು ಇದಕ್ಕೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ;

(ಇ) ಸರ್ಕಾರ ಘೋಷಿಸಿದ ಪ್ರಮಾಣದಲ್ಲಿ ಅನುದಾನ ಬಿಡುಗಡೆಯಾಗದೆ ನಿಗಮದ ಹಲವು ಕಾರ್ಯಕ್ರಮಗಳು ಅನುಷ್ಠಾನಗೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ನಿಗಮವನ್ನು ಸರ್ಕಾರ ನಿರ್ಲಕ್ಷ ಮಾಡಲು ಕಾರಣಗಳೇನು ;

(ಈ) ಬಜೆಟ್‌ನಲ್ಲಿ ಘೋಷಿಸಿದ ಶೇಕಡವಾರು ಎಷ್ಟು ಹಣವನ್ನು ಈ ನಿಗಮಕ್ಕೆ ಬಿಡುಗಡೆ ಮಾಡಲಾಗಿದೆ ; ಶೇ ಎಷ್ಟು ಕಾರ್ಯಕ್ರಮ ರೂಪಿಸಿ ಅನುಷ್ಠಾನಗೊಳಿಸಲಾಗಿದೆ ?

## ರಾಜ್ಯದಲ್ಲಿ ಅಂತರ್ಜಲ ಮಟ್ಟ ಕುಸಿಯುತ್ತಿರುವ ಬಗ್ಗೆ

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :–**

೬೪೧ (೮೬೯) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಂತರ್ಜಲ ಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರಾಜ್ಯದ ಜಿಲ್ಲಾವಾರು ಇರುವ ಅಂತರ್ಜಲ ಮಟ್ಟವೆಷ್ಟು ; ಅಂತರ್ಜಲ ಮಟ್ಟದ ಕುಸಿತಕ್ಕೆ ಕಾರಣಗಳೇನು ;

(ಆ) ನಗರ ಪ್ರದೇಶಗಳಲ್ಲಿ ಮಳೆ ನೀರು ವ್ಯರ್ಥವಾಗಿ ಹರಿಯುವುದನ್ನು ತಡೆದು ಅಂತರ್ಜಲ ಮರುಪೂರಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಖಾಸಗಿಯವರು ಅಂತರ್ಜಲ ಮರು ಪೂರಣಕ್ಕಾಗಿ ಕೊಳವೆ ಬಾವಿ ರಿಚಾರ್ಜ್ ಅಥವಾ ಇಂಗು ಗುಂಡಿ ನಿರ್ಮಾಣ ಮಾಡಿದ್ದಲ್ಲಿ, ಅವರಿಗೆ ಸರ್ಕಾರ ನೀಡುವ ಪ್ರೋತ್ಸಾಹವೇನು ;

(ಈ) ಅತಿಯಾದ ಅಂತರ್ಜಲ ಬಳಕೆ ಮಾಡುವುದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಕಳೆದ ಐದು ವರ್ಷಗಳಲ್ಲಿ ಅಂತರ್ಜಲ ಅಭಿವೃದ್ಧಿಗಾಗಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ? (ಜಿಲ್ಲಾವಾರು ವರ್ಷವಾರು ಮಾಹಿತಿ ನೀಡುವುದು)

## ಸುಳ್ಳು ದೂರು ನೀಡುವವರ ಮೇಲೆ ಕ್ರಮ ಕೈಗೊಳ್ಳುವ ಕುರಿತು

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :–**

೬೪೨ (೮೭೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚೆಗೆ ಸುಳ್ಳು ದೂರುಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಲ್ಲಿಯವರೆಗೂ ಎಷ್ಟು ಸುಳ್ಳು ದೂರುದಾರರ ಮೇಲೆ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಲಾಗಿದೆ ; (ವರ್ಷವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ದೂರುದಾರರು ದೂರು ನೀಡಿದ ನಂತರ ದೂರಿನ ಸತ್ಯಾಸತ್ಯತೆಯನ್ನು ಪರಿಶೀಲಿಸಲು ಠಾಣಾಧಿಕಾರಿ ಪರಿಶೀಲಿಸಬೇಕಾದ ಅಂಶಗಳು ಯಾವುವು ;

(ಇ) ಉದ್ದೇಶ ಪೂರ್ವಕವಾಗಿ ಸುಳ್ಳು ದೂರು ದಾಖಲಿಸಿ ಅಮಾಯಕರಿಗೆ ತೊಂದರೆ ನೀಡಿದ್ದಲ್ಲಿ ಅಂತಹ ಅಧಿಕಾರಿಗಳು ಮತ್ತು ದೂರುದಾರರ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮವೇನು ;

(ಈ) ಸುಳ್ಳು ದೂರಿನಿಂದ ತೊಂದರೆಗೆ ಒಳಗಾದ ಸಾರ್ವಜನಿಕರು ಪರಿಹಾರಕ್ಕಾಗಿ ಯಾವ ಅಧಿಕಾರಿಗಳನ್ನು ಸಂಪರ್ಕಿಸಬೇಕಾಗುತ್ತದೆ ; ಇದಕ್ಕೆ ಇರುವ ಪರಿಹಾರವೇನು ;

(ಉ) ಅಮಾಯಕರ ಮೇಲೆ ದಾಖಲಾಗಿರುವ ಸುಳ್ಳು ದೂರುಗಳನ್ನು ರದ್ದು ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಬೆಂಗಳೂರು ಜಿಲ್ಲೆಯ ಆನೇಕಲ್ ತಾಲ್ಲೂಕಿನ ಏತ ನೀರಾವರಿ ಯೋಜನೆ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೩ (೮೪೮) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆ ಮತ್ತು ಆನೇಕಲ್ ತಾಲ್ಲೂಕಿನ್ಲಲಿ ಕೆ.ಸಿ. ವ್ಯಾಲಿ ಯೋಜನೆಯ ಏತ ನೀರಾವರಿ ಯೋಜನೆಯಡಿಯಲ್ಲಿ ಎಷ್ಟು ಕೆರೆಗಳಿಗೆ ನೀರು ತುಂಬಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಏತ ನೀರಾವರಿ ಯೋಜನೆಯಡಿಯಲ್ಲಿ ಎಷ್ಟು ಕೆರೆಗಳಿಗೆ ನೀರು ತುಂಬಿಸಲಾಗಿದೆ ಮತ್ತು ಬಾಕಿ ಉಳಿದ ಕೆರೆಗಳ ಸಂಖ್ಯೆ ಎಷ್ಟು ಮತ್ತು ನೀರು ತುಂಬಿಸದಿರಲು ಕಾರಣವೇನು ;

(ಇ) ಏತ ನೀರಾವರಿ ಯೋಜನೆಯ ಮುಖಾಂತರ ಸರ್ಕಾರವು ಎಷ್ಟು (ಎಂ.ಎಲ್.ಡಿ) ನೀರನ್ನು ಕೆರೆಗಳಿಗೆ ಬಿಡಲಾಗುತ್ತಿದೆ ; ಗರಿಷ್ಠ ನೀರಿನ ಮೊತ್ತವೆಷ್ಟು ಮತ್ತು ಕೆರೆಗಳಿಗೆ ಕನಿಷ್ಠ ಎಷ್ಟು ನೀರನ್ನು ಬಿಡಲಾಗುತ್ತಿದೆ ? (ಸಂಪೂರ್ಣ ವಿವರ ನೀಡುವುದು)

## ಬೆಂಗಳೂರು ನಗರದಲ್ಲಿ ಕಸ ವಿಲೇವಾರಿಯ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೪ (೮೪೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಉತ್ಪತ್ತಿಯಾಗುವ ಕಸವನ್ನು ಯಾವ ಯಾವ ಸ್ಥಳಗಳಲ್ಲಿ ಶೇಖರಣೆ/ಸಂಸ್ಕರಣೆ ಮಾಡಲಾಗುತ್ತಿದೆ ; ಪ್ರತಿದಿನ ಎಷ್ಟು ಸಾಮರ್ಥ್ಯದ ಕಸ ವಿಲೇವಾರಿ ಹಾಗೂ ಶೇಖರಣೆ/ ಸಂಸ್ಕರಣೆಯಾಗುತ್ತಿದೆ ; (ವಿವರ ನೀಡುವುದು)

(ಆ) ಬೆಂಗಳೂರು ನಗರದಲ್ಲಿ ತ್ಯಾಜ್ಯ ಶೇಖರಣೆಯಾಗುತ್ತಿರುವ ಸ್ಥಳಗಳಲ್ಲಿ ಸುತ್ತಮುತ್ತಲಿನ ಪರಿಸರ ಮಾಲಿನ್ಯವಾಗುತ್ತಿರುವ ಬಗ್ಗೆ ದೂರುಗಳು ಬಂದಿವೆಯೇ ; ಬಂದಿದ್ದಲ್ಲಿ, ಸರ್ಕಾರವು ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ಬೆಂಗಳೂರು ನಗರದಲ್ಲಿ ಕಸ ವಿಲೇವಾರಿ ಮಾಡಲು ಟೆಂಡರನ್ನು ಯಾವ ಕಂಪನಿ/ವ್ಯಕ್ತಿಗೆ ನೀಡಲಾಗಿದೆ ; ನೀಡಿದ್ದಲ್ಲಿ, ಟೆಂಡರ್ ಪ್ರಕ್ರಿಯೆಯಲ್ಲಿ ವಿಧಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಈ) ಪ್ರತಿದಿನದ ಕಸ ವಿಲೇವಾರಿ/ಸಂಸ್ಕರಣೆಗೆ ವೆಚ್ಚವಾಗುತ್ತಿರುವ ಹಣವೆಷ್ಟು ? (ಕಳೆದ ಮೂರು ವರ್ಷಗಳಿಂದ ಕಸ ಶೇಖರಣೆ/ ಸಂಸ್ಕರಣೆಗೆ ವೆಚ್ಚವಾಗಿರುವ ಮೊತ್ತದ ಮಾಹಿತಿ ನೀಡುವುದು)

## ಯುವನಿಧಿ ಯೋಜನೆ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೫ (೮೫೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯುವನಿಧಿ ಯೋಜನೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ಇದರಲ್ಲಿ ಖರ್ಚಾದ ಹಾಗೂ ಬಾಕಿ ಉಳಿದ ಹಣವೆಷ್ಟು ; (ವಿವರ ನೀಡುವುದು)

(ಆ) ಸದರಿ ಯೋಜನೆಯಡಿ ನೋಂದಾಯಿಸಲ್ಪಟ್ಟ ಯುವಕ ಹಾಗೂ ಯುವತಿಯವರ ಸಂಖ್ಯೆ ಎಷ್ಟು ; ಇವರುಗಳಲ್ಲಿ ಎಷ್ಟು ಜನರಿಗೆ ಯುವನಿಧಿ ಹಣವನ್ನು ಮಂಜೂರು ಮಾಡಲಾಗಿದೆ ; (ಪ್ರವರ್ಗವಾರು, ಜಿಲ್ಲಾ/ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ವಿಶೇಷವಾಗಿ ಬೆಂಗಳೂರು ನಗರದಲ್ಲಿ ಎಷ್ಟು ಯುವಕ/ಯುವತಿಯರಿಗೆ ಈ ಹಣ ತಲುಪಿದೆ ? (ಸಂಪೂರ್ಣ ವಿವರ ನೀಡುವುದು)

## ಆಪ್ಟಿಕಲ್ ಕೇಬಲ್‌ಗಳಿಂದ ಆಗುತ್ತಿರುವ ತೊಂದರೆಯ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೬ (೭೭೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಆಪ್ಟಿಕಲ್ ಫೈಬರ್ ಕೇಬಲ್‌ಗಳನ್ನು ಅಳವಡಿಸಬೇಕಿದ್ದರೆ ಬಿ.ಬಿ.ಎಂ.ಪಿ ಅನುಮತಿ ಅವಶ್ಯಕತೆ ಇದೆಯೇ ; ಹಾಗಿದ್ದಲ್ಲಿ ಅನುಮತಿ ನೀಡುವ ಸಂದರ್ಭದಲ್ಲಿ ಪಾಲಿಕೆ ಅನುಸರಿಸುತ್ತಿರುವ ನೀತಿ ನಿಯಮಗಳೇನು ;

(ಆ) ಕೇಬಲ್ ವೈರ್ ಮತ್ತು ಭೂಮಿಯನ್ನು ಅಗೆದು ಹಾಕಲಾಗುವ ಕೇಬಲ್‌ಗಳಿಂದ ಪಾಲಿಕೆಗೆ ಇದುವರೆಗೂ ಸಂದಾಯವಾಗಿರುವ ಹಣವೆಷ್ಟು ಹಾಗೂ ಸಂದಾಯ ಮಾಡಿರುವ ಕಂಪನಿಯ ಹೆಸರು ಮತ್ತು ಮೊತ್ತವೆಷ್ಟು ;

(ಇ) ೨೦೧೯ರಲ್ಲಿ ಬಿ.ಬಿ.ಎಂ.ಪಿ ಆಯುಕ್ತರು ಹೊರಡಿಸಿದ್ದ ಆದೇಶದಲ್ಲಿ ನಿಗದಿಪಡಿಸಿರುವ ಶುಲ್ಕಕ್ಕಿಂತ ಕಡಿಮೆ ಶುಲ್ಕ ವಸೂಲಿ ಮಾಡಿರುವುದರಿಂದ ಮೂರು ವರ್ಷಗಳ ಅವಧಿಯಲ್ಲಿ ಪಾಲಿಕೆಗೆ ಸುಮಾರು ೮೮.೬೫ ಕೋಟಿ ರೂ. ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಇದರ ಬಗ್ಗೆ ಯಾವ ಕ್ರಮ ಕೈಗೊಳ್ಳಾಗಿದೆ ; (ಆದೇಶದ ಪ್ರತಿ ಒದಗಿಸುವುದು)

(ಈ) ಇತ್ತೀಚೆಗೆ ನಗರದ ಎಲ್ಲಾ ವಿದ್ಯುತ್ ಕಂಬ ಹಾಗೂ ಮನೆಗಳ ಮಹಡಿಗಳ ಮೇಲೆ ಅನಧಿಕೃತವಾಗಿ ಕೇಬಲ್ ವೈರ್‌ಗಳನ್ನು ಹಾಕಿರುವುದು ಪಾಲಿಕೆಯ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ ತೆಗೆದುಕೊಂಡ ಕ್ರಮಗಳನ್ನು ನಗರದ ಎಲ್ಲಾ ಭಾಗಗಳಲ್ಲೂ ಕೇಬಲ್ ವೈರ್‌ಗಳು ನೇತಾಡುತ್ತಿರುವುದನ್ನು ಅಧಿಕಾರಿಗಳು ಗಮನಹರಿಸಲಿಲ್ಲವೇ, ರಸ್ತೆ ಬದಿಯ ಮರದಿಂದ ಮರಕ್ಕೆ ಮತ್ತು ಬೀದಿ ದೀಪಗಳ ಕಂಬಗಳಿಗೆ ಕೇಬಲ್‌ಗಳು ನೇತಾಡುತ್ತಿರುವುದರಿಂದ ನಗರದ ಸೌಂದರ್ಯಕ್ಕೆ ಹಾಗೂ ಜೀವಗಳಿಗೆ ಮಾರಣಾಂತಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ರಸ್ತೆಗಳನ್ನು ಅಗೆದು ಹಾಕಲಾಗಿರುವ ಕೇಬಲ್‌ಗಳನ್ನು ಅಳವಡಿಸಿದ ನಂತರ ಅಗೆದಿರುವ ರಸ್ತೆಗಳನ್ನು ಮುಚ್ಚಬೇಕಾಗಿರುವ ಜವಾಬ್ದಾರಿ ಹಾಗೂ ಹಲವಾರು ಕಡೆಗಳಲ್ಲಿ ಗುಂಡಿಗಳನ್ನು ಮುಚ್ಚಿರುವುದಿಲ್ಲ ಹಾಗೂ ಡಾಂಬರನ್ನು ಸಹ ಹಾಕಿರುವುದಿಲ್ಲ ; ಇದರ ಪರಿಶೀಲನೆಯ ಕಾರ್ಯವನ್ನು ಕೈಗೊಳ್ಳಬೇಕಾದ ಅಧಿಕಾರಿ ಯಾರು ?

## ೨೦೨೪–೨೫ನೇ ಸಾಲಿನ ತೆರಿಗೆ ಸಂಗ್ರಹದ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೭ (೭೭೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪–೨೫ನೇ ಸಾಲಿನ ಆಯವ್ಯಯದಲ್ಲಿ ವಾಣಿಜ್ಯ, ಅಬಕಾರಿ, ನೋಂದಣಿ–ಮುದ್ರಾಂಕ ಹಾಗೂ ಸಾರಿಗೆ ಇಲಾಖೆಗಳಿಂದ ಎಷ್ಟು ತೆರಿಗೆ ಸಂಗ್ರಹದ ಗುರಿಯನ್ನು ಹೊಂದಲಾಗಿತ್ತು ; ಇದರಲ್ಲಿ ಇದುವರೆಗೂ ಎಷ್ಟು ತೆರಿಗೆ ಸಂಗ್ರಹವಾಗಿದೆ ;

(ಆ) ೨೦೨೪–೨೫ನೇ ಸಾಲಿನ ಆಯವ್ಯಯದಲ್ಲಿ ಇಲಾಖಾವಾರು ಘೋಷಣೆ ಮಾಡಲಾಗಿರುವ ಅನುದಾನದಲ್ಲಿ ಇದುವರೆಗೂ ಬಿಡುಗಡೆ ಮಾಡಲಾಗಿರುವ ಅನುದಾನ ವೆಷ್ಟು ; (ಎಲ್ಲಾ ಇಲಾಖೆಗಳ ಪ್ರತ್ಯೇಕ ಮಾಹಿತಿ ಒದಗಿಸುವುದು)

(ಇ) ಸರ್ಕಾರ ಘೋಷಣೆ ಮಾಡಿರುವ ೫ ಗ್ಯಾರಂಟಿ ಯೋಜನೆಗೆ ಇದುವರೆಗೂ ಬಿಡುಗಡೆ ಮಾಡಲಾಗಿರುವ ಹಾಗೂ ಬಾಕಿ ಉಳಿಸಿಕೊಂಡಿರುವ ಮೊತ್ತವೆಷ್ಟು ; (ಮಾಹಿತಿ ಒದಗಿಸುವುದು)

(ಈ) ೨೦೧೭ ರಿಂದ ೨೦೨೦ ರವರೆಗೆ ಜಿಎಸ್‌ಟಿ ಪಾವತಿ ಬಾಕಿ ಉಳಿಸಿಕೊಂಡವರಿಗೆ ಒಂದು ಬಾರಿಯ ಪರಿಹಾರವಾಗಿ ಜಿಎಸ್‌ಟಿ ಮಂಡಳಿಯು ಕರ ಸಮಾಧಾನ ಯೋಜನೆ ಜಾರಿಗೊಳಿಸಿರುವುದರಿಂದ ಸರ್ಕಾರಕ್ಕೆ ಹೆಚ್ಚುವರಿ ಆದಾಯ ಸಂಗ್ರಹವಾಗಿದೆಯೇ ;

(ಉ) ಕಳೆದ ೩ ವರ್ಷದ ಅವಧಿಯಲ್ಲಿ ರಾಜ್ಯದಲ್ಲಿ ಸಂಗ್ರಹವಾಗಿರುವ ಜಿಎಸ್‌ಟಿ ಹಣವೆಷ್ಟು ಹಾಗೂ ಕಳೆದ ೩ ವರ್ಷದಿಂದ ರಾಜ್ಯದ ಜಿಎಸ್‌ಟಿ ಪಾಲಿನ ಎಷ್ಟು ಹಣವನ್ನು ಕೇಂದ್ರ ಸರ್ಕಾರ ಬಿಡುಗಡೆ ಮಾಡಿದೆ ?

## ಸ್ತ್ರೀಯರ ಮೇಲೆ ನಡೆದಿರುವ ದೌರ್ಜನ್ಯದ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೮ (೭೭೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷದಿಂದ ಇಲ್ಲಿಯವರೆಗೂ ರಾಜ್ಯದಲ್ಲಿ ಸ್ತ್ರೀಯರ ಮೇಲೆ ನಡೆದಿರುವ ದೌರ್ಜನ್ಯ ಪ್ರಕರಣಗಳ ಸಂಖ್ಯೆಯೆಷ್ಟು ; (ಲೈಂಗಿಕ ಕಿರುಕುಳ, ಅತ್ಯಾಚಾರ, ವರದಕ್ಷಿಣೆ ಕಿರುಕುಳ ಸಾವು ಹಾಗೂ ಪೋಕ್ಸೋ ಪ್ರಕರಣಗಳ ಸಂಖ್ಯೆಯನ್ನು ಪ್ರತ್ಯೇಕವಾಗಿ ಮಾಹಿತಿ ಒದಗಿಸುವುದು)

(ಆ) ಸಾರ್ವಜನಿಕ ಸ್ಥಳಗಳಲ್ಲಿ ಮಹಿಳೆಯರಿಗೆ ಸುರಕ್ಷತೆ ಕಲ್ಪಿಸುವ ಉದ್ದೇಶದಿಂದ ಸೇಫ್ ಸಿಟಿ ಯೋಜನೆ ಅನುಷ್ಠಾನಗೊಂಡಿದ್ದು, ಈ ಯೋಜನೆಯಡಿಯಲ್ಲಿ ಯಾವ ಯಾವ ಸುರಕ್ಷಾತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ; ಹಾಗೂ ಈ ಯೋಜನೆಯು ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಜಾರಿಗೊಳಿಸಲಾಗಿದೆ ;

(ಇ) ಕಳೆದ ೫ ವರ್ಷಗಳಿಂದ ನಡೆದಿರುವ ದೌರ್ಜನ್ಯ ಪ್ರಕರಣಗಳಲ್ಲಿ ಎಷ್ಟು ಅಪರಾಧಿಗೆ ಶಿಕ್ಷೆಯಾಗಿದೆ ; ಹಾಗೂ ತಪ್ಪಿಸಿಕೊಂಡಿರುವ ಅಪರಾಧಿಗಳ ಸಂಖ್ಯೆ ಎಷ್ಟು ;

(ಈ) ಕಳೆದ ೫ ವರ್ಷಗಳ ಅವಧಿಯಲ್ಲಿ ನಡೆದಿರುವ ವೇಶ್ಯಾವಾಟಿಕೆ ಪ್ರಕರಣಗಳ ಸಂಖ್ಯೆ ಎಷ್ಟು ; ಈ ದಂಧೆಯಲ್ಲಿ ನಿರತರಾದವರಲ್ಲಿ ಇದುವರೆಗೂ ಎಷ್ಟು ಜನರನ್ನು ಬಂಧಿಸಲಾಗಿದೆ ; ಇದರಲ್ಲಿ ನಮ್ಮ ರಾಜ್ಯದವರೆಷ್ಟು ; ಹೊರ ರಾಜ್ಯದವರೆಷ್ಟು ? (ಅಂಕಿ–ಅಂಶಗಳನ್ನು ಒದಗಿಸುವುದು)

## ರಾಜ್ಯದಲ್ಲಿರುವ ಕೆರೆಗಳು ಒತ್ತುವರಿಯಾಗಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೯ (೭೭೮) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಎಷ್ಟು ಸಾವಿರ ಮೂಲ ಕೆರೆಗಳು ಇದ್ದವು ಅದರಲ್ಲಿ ಪ್ರಸ್ತುತ ಎಷ್ಟು ಕೆರೆಗಳಿವೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ರಾಜ್ಯದಲ್ಲಿರುವ ಸಾವಿರಾರು ಕೆರೆಗಳನ್ನು ಒತ್ತುವರಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಲಾಖೆಯವತಿಯಿಂದ ಸರ್ವೆ ಕಾರ್ಯನಡೆಸಲಾಗಿದೆಯೇ ; ಹಾಗಿದ್ದಲ್ಲಿ ಪೂರ್ಣ ಮಾಹಿತಿಯನ್ನು ಒದಗಿಸುವುದು ;

(ಇ) ರಾಜ್ಯದಲ್ಲಿ ೧೦೦ ಎಕರೆ ವಿಸ್ತೀರ್ಣಕ್ಕಿಂತ ಕಡಿಮೆ ಇರುವ ಕೆರೆಗಳು ಸಂಬಂಧಿಸಿದ ಸ್ಥಳೀಯ ಸಂಸ್ಥೆಗಳಿಗೆ ಸೇರುತ್ತದೆಯೇ ; ಇವುಗಳ ದಾಖಲೆಗಳನ್ನು ಸಂರಕ್ಷಿಸಲಾಗಿದೆಯೇ ; ಹಾಗೂ ಹೆಚ್ಚಿನ ವಿಸ್ತೀರ್ಣ ಇರುವ ಕೆರೆಗಳು ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ಕೆರೆಗಳ ಸೂಕ್ತ ದಾಖಲೆಗಳಿಲ್ಲದೆ ಅವುಗಳನ್ನು ಸಂರಕ್ಷಿಸಲು ಸಾಧ್ಯವಾಗದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿರುವಂತಹ ಕೆರೆಗಳ ಸಂಖ್ಯೆ ಎಷ್ಟು; ಇದರಲ್ಲಿ ಒತ್ತುವರಿಯಾಗಿರುವ ಕೆರೆಗಳು ಯಾವುವು ಹಾಗೂ ಕೆರೆಗಳನ್ನು ಸಂರಕ್ಷಿಸಲು ಇರುವಂತಹ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದ ಕಾರ್ಯಚಟುವಟಿಕೆಗಳೇನು ?

## ರಾಜ್ಯದಲ್ಲಿನ ಕಾನೂನು ಸುವ್ಯವಸ್ಥೆ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೦ (೮೪೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ ಮತ್ತು ೨೦೨೪–೨೫ ಫೆಬ್ರವರಿ ಅಂತ್ಯದವರೆಗೆ ರಾಜ್ಯದಲ್ಲಿ ನಡೆದಿರುವ ಕೊಲೆ, ಫೋಕ್ಸೊ, ಅತ್ಯಾಚಾರ, ಹಲ್ಲೆ ಎನ್.ಡಿ.ಪಿ.ಎಸ್ (ಡ್ರಗ್ಸ್) ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ, ಸೈಬರ್ ಅಪರಾಧಗಳು, ವಿವಿಧ ರೀತಿಯ ವಂಚನೆಗಳು, ರಾಬರಿಗಳು, ಡಕಾಯಿತಿ, ದೇಶದ್ರೋಹದ ಪ್ರಕರಣಗಳು ದೇಶದ್ರೋಹದ ಘೋಷಣೆ ಪ್ರಕರಣಗಳು, ಧರ್ಮಾಧಾರಿತ ಪ್ರಕರಣಗಳು, ಬಾಂಬ್ ಸ್ಫೋಟ ಹಾಗೂ ಇತ್ಯಾದಿ ಅಪರಾಧ ಪ್ರಕರಣಗಳ ಸಂಖ್ಯೆ ಎಷ್ಟು ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಅಪರಾಧ ತಡೆಗೆ ಪೋಲೀಸರಿಂದ ಒತ್ತುನೀಡುವ ಕೆಲಸ ಆಗುತ್ತಿದೆಯೇ ; ಹೆಚ್ಚಿನ ಬೀಟ್ ವ್ಯವಸ್ಥೆ ಜಾರಿಯಾಗಿದೆಯೇ ; ಅಪರಾಧಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಕೆಲಸ ಆಗುತ್ತಿದೆಯೆ ; ಅಪರಾಧ ಪ್ರಕರಣಗಳು ಯತೇಚ್ಛವಾಗಿ ನಡೆಯುತ್ತಿರುವುದರಿಂದ ಜನಸಾಮಾನ್ಯರಿಗೆ ರಕ್ಷಣೆಯೇ ಇಲ್ಲವೇ ಎಂಬ ಅನುಮಾನ ವ್ಯಕ್ತವಾಗುವುದಿಲ್ಲವೇ ; ಸಮಾಜಘಾತುಕ ಶಕ್ತಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಲಾಗುತ್ತಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸಾಲು ಸಾಲು ಅಪರಾಧ ಪ್ರಕರಣಗಳು ವರದಿಯಾಗುತ್ತಿದ್ದು ಸಮಾಜಘಾತುಕ ಶಕ್ತಿಗಳು ಎಲ್ಲೆ ಮೀರಿ ಮೆರೆಯುತ್ತಿದ್ದು, ಧರ್ಮಾಧಾರಿತ ಪ್ರಕರಣಗಳು ಯತೇಚ್ಛವಾಗಿ ಬೆಳಕಿಗೆ ಬರುತ್ತಿದ್ದು ಸಾರ್ವಜನಿಕರಲ್ಲಿ ಒಂದು ರೀತಿಯ ಆತಂಕದ ವಾತಾವರಣ

ಸೃಷ್ಟಿಯಾಗಿ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳಾದಂತಾಗಿರುವುದಿಲ್ಲವೇ ; ಲಾ ಅಂಡ್ ಆರ್ಡರ್ ಪೂರ್ಣ ಹೋದಂತಾಗುವುದಿಲ್ಲವೇ ; ಪ್ರಮಾಣದಲ್ಲಿ ಕೈತಪ್ಪಿ (ಸಂಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ವಿವಿಧ ಸಂಘಟನೆಗಳ ವಿರುದ್ಧ ದಾಖಲಾದ ಪ್ರಕರಣಗಳೆಷ್ಟು ; ಸಂಘಟನೆಗಳ ವಿರುದ್ಧ ಇಲ್ಲಿಯವರೆಗೆ ದಾಖಲಾದ ಪ್ರಕರಣಗಳನ್ನು ೨೦೨೩–೨೪ ಮತ್ತು ೨೦೨೪–೨೫ನೇ ಸಾಲಿನಲ್ಲಿ ಕೈಬಿಡುವುದು/ಹಿಂಪಡೆಯಲಾಗಿದೆಯೇ ; ಕೈಬಿಡುವ/ಹಿಂಪಡೆಯುವ ವಿಷಯ ಸರ್ಕಾರದ ಮುಂದಿದೆಯೇ ; ಒಂದು ವೇಳೆ ಕೈಬಿಟ್ಟು/ಹಿಂಪಡೆದಿದ್ದರೆ ಎಷ್ಟು ಪ್ರಕರಣಗಳು ಮತ್ತು ಯಾವ ಯಾವ ಸಂಘಟನೆಗಳ ಪ್ರಕರಣಗಳನ್ನು ಕೈಬಿಡಲಾಗಿದೆ/ಹಿಂಪಡೆಯಲಾಗಿದೆ ? (ಮಾಹಿತಿ ನೀಡುವುದು)

## ವಿವಿಧ ಇಲಾಖೆಗಳ ನೇಮಕಾತಿ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೧ (೮೪೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯ ರಿಂದ ಇಲ್ಲಿಯವರೆಗೆ ವಿವಿಧ ಇಲಾಖೆಗಳಿಂದ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಗಳು ಹೊರಡಿಸಲಾದ ನೇಮಕಾತಿ ಅಧಿಸೂಚನೆಗಳೆಷ್ಟು ; ಸದರಿ ನೇಮಕಾತಿ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ಈ ನೇಮಕಾತಿ ಪ್ರಕ್ರಿಯೆ ವಿಳಂಬವಾಗಲು ಕಾರಣವೇನು ; ನೇಮಕಾತಿ ಪ್ರಕ್ರಿಯೆ ವಿಳಂಬದಿಂದ ಅಭ್ಯರ್ಥಿಗಳು ಆತಂಕದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನೇಮಕಾತಿ ವಿಳಂಬಕ್ಕೆ ಕಾರಣವಾಗುವ ನ್ಯಾಯಾಲಯಗಳ ಹಸ್ತಕ್ಷೇಪ ತಡೆಯಲು ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತಿದೆ ; (ವಿವರ ನೀಡುವುದು)

(ಇ) ಪದವೀಧರ ಪ್ರಾಥಮಿಕ ಶಾಲೆ ಶಿಕ್ಷಕರ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಬಗ್ಗೆ ಸುಪ್ರೀಂ ಕೋರ್ಟ್‌ನಲ್ಲಿ ದಾವೇ ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಯಾವ ಅಂಶವನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ದಾವೆ ಹಾಕಲಾಗಿದೆ ; ಸದರಿ ಪ್ರಕರಣದಿಂದ ಎಷ್ಟು ಜನ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಿಂದ ಹೊರಗಿದ್ದಾರೆ: (ವಿವರ ನೀಡುವುದು)

(ಈ) ನೇಮಕಾತಿ ಪ್ರಕ್ರಿಯೆಯಲ್ಲಿ ಮದುವೆಯಾದ ಮಹಿಳಾ ಅಭ್ಯರ್ಥಿಗಳಿಗೆ ತಂದೆ ಅಥವಾ ಗಂಡನ ಹೆಸರಿನಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆಯುವ ಬಗ್ಗೆ ಸರ್ಕಾರದ ನಿಲುವೇನು ; ಈಗ ನಡೆಯುತ್ತಿರುವ ನೇಮಕಾತಿ ಹಾಗೂ ಮುಂದೆ ನಡೆಯುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆಯುವಂತೆ ಮಹಿಳಾ ಅಭ್ಯರ್ಥಿಗಳು ಕಡ್ಡಾಯವಾಗಿ ಗಂಡನ ಹೆಸರಿನಲ್ಲಿಯೇ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆಯುವಂತೆ ಸೂಚನೆ ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು ; ಇಲ್ಲದಿದ್ದಲ್ಲಿ, ಮುಂದಿನ ನೇಮಕಾತಿ ಅಧಿಸೂಚನೆಗಳಲ್ಲಿ ಸದರಿ ನಿರ್ದೇಶನವನ್ನು ಅಳವಡಿಸಿಕೊಳ್ಳಲು ನೇಮಕಾತಿ ಪ್ರಾಧಿಕಾರಗಳಿಗೆ ಸರ್ಕಾರ ಸೂಚಿಸುವುದೇ ? (ವಿವರ ನೀಡುವುದು)

## ರಾಜ್ಯದಲ್ಲಿನ ನಿವೃತ್ತ ನೌಕರರ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೨ (೮೪೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಇತ್ತೀಚೆಗೆ ನಿವೃತ್ತಿ ಹೊಂದಿದ ನೌಕರರನ್ನು ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳುವುದನ್ನು ರದ್ದು ಪಡಿಸಿದ್ದರೂ ಕೆಲವು ಇಲಾಖೆಗಳು ಮುಂದುವರೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಂತಹ ಇಲಾಖೆ ಮುಖ್ಯಸ್ಥರ ಮೇಲೆ ಸರ್ಕಾರ ಕ್ರಮ ಕೈಗೊಂಡಿದೆಯೇ ; (ವಿವರ ನೀಡುವುದು)

(ಆ) ರಾಜ್ಯದ ೩೧ ಜಿಲ್ಲೆಗಳಲ್ಲಿಯೂ ನಿವೃತ್ತ ನೌಕರರನ್ನು ವಿವಿಧ ಹುದ್ದೆಗಳಿಗೆ ನೇಮಕ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಇಲಾಖೆಗಳು ಯಾವ ಹುದ್ದೆಗಳಿಗೆ ನಿವೃತ್ತ ನೌಕರರನ್ನು ನೇಮಕ ಮಾಡಿಕೊಳ್ಳಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ನೌಕರರನ್ನು ಸೇವೆಯಿಂದ ಬಿಡುಗಡೆಗೊಳಿಸಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸದರಿ ನೌಕರರನ್ನು ವಜಾಗೊಳಿಸದೇ ಇರಲು ಕಾರಣವೇನು ; ಸರ್ಕಾರದ ನಿರ್ದೇಶನ ಉಲ್ಲಂಘಿಸಿ ನಿವೃತ್ತ ನೌಕರರನ್ನು ಮುಂದುವರೆಸಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಜರುಗಿಸಲಾಗುವುದು ? (ವಿವರ ನೀಡುವುದು)

## ಮಂಗಳೂರಿನಲ್ಲಿ ಅಂತರರಾಷ್ಟ್ರೀಯ ಮಟ್ಟದ ಕ್ರಿಕೆಟ್ ಕ್ರೀಡಾಂಗಣವನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೩ (೭೭೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಅಂತರರಾಷ್ಟ್ರೀಯ ಮಟ್ಟದ ಕ್ರಿಕೆಟ್ ಕ್ರೀಡಾಂಗಣವನ್ನು ಸ್ಥಾಪಿಸಲು ಕೈಗೊಂಡಿರುವ ಕ್ರಮಗಳೇನು ; ಈ ಬಗ್ಗೆ ಸ್ಥಳವನ್ನು ಪರಿಶೀಲಿಸಲಾಗಿದೆಯೇ ; ಖಾಸಗಿಯವರ ಸಹಭಾಗಿತ್ವವನ್ನು ಸ್ಥಾಪಿಸಲು ಯೋಚಿಸಿದೆಯೇ ; (ವಿವರ ನೀಡುವುದು)

(ಆ) ದೇಶದ ಸಣ್ಣ ರಾಜ್ಯಗಳಲ್ಲಿಯೂ ಒಂದಕ್ಕಿಂತಲೂ ಹೆಚ್ಚು ಅಂತರರಾಷ್ಟ್ರೀಯ ಮಟ್ಟದ ಕ್ರೀಡಾಂಗಣ ಇದ್ದು ನಮ್ಮ ರಾಜ್ಯದಲ್ಲಿ ಈ ಬಗ್ಗೆ ನಿರ್ಲಕ್ಷ್ಯಧೋರಣೆ ಅನುಸರಿಸುತ್ತಿರುವುದು

ಕ್ರೀಡಾಪಟುಗಳು ಅವಕಾಶದಿಂದ ವಂಚಿತರಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ರಾಜ್ಯದ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಸುಸಜ್ಜಿತ ಮೈದಾನವನ್ನು ಸ್ಥಾಪಿಸಬೇಕೆಂದು ಸರ್ಕಾರದ ನಿಲುವು ಎಷ್ಟರಮಟ್ಟಿಗೆ ಸಾಧನೆ ಮಾಡಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ರಾಜ್ಯದಿಂದ ಎಷ್ಟು ಕ್ರೀಡಾಳುಗಳು "ಒಲಂಪಿಕ್ಸ್" ನಲ್ಲಿ ಭಾಗವಹಿಸಲು ಅರ್ಹತೆ ಪಡೆದು ವಿಜೇತರಾಗಿದ್ದಾರೆ ; ಈ ಬಗ್ಗೆ ಇಲಾಖೆ ಕೈಗೊಂಡಿರುವ ಮುತುವರ್ಜಿ ಏನು ; (ವಿವರ ನೀಡುವುದು)

(ಉ) ರಾಜ್ಯದ ಕ್ರೀಡಾಳುಗಳಿಗೆ ಒದಗಿಸುವ ಕೋಚ್‌ಗಳಿಗೆ ಜವಾಬ್ದಾರಿಯುನ್ನು ವಹಿಸಲಾಗಿದೆಯೇ ; ಈ ಬಗ್ಗೆ ನಿಯತಕಾಲಿಕವಾಗಿ ವಿಮರ್ಶೆ ಮಾಡಲಾಗಿದೆಯೇ ? (ವಿವರ ನೀಡುವುದು)

## ಮಂಗಳೂರು ನಗರ ವ್ಯಾಪ್ತಿಯಲ್ಲಿನ ಟ್ರಾಫಿಕ್ ವ್ಯವಸ್ಥೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೪ (೭೮೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ನಗರ ವ್ಯಾಪ್ತಿಯಲ್ಲಿ ಟ್ರಾಫಿಕ್ ವ್ಯವಸ್ಥೆಯಲ್ಲಿ ತುಂಬಾ ದೂರುಗಳಿದ್ದು, ಅವ್ಯವಸ್ಥೆಗಳಿಂದ ಕೂಡಿದ್ದು, ಇದನ್ನು ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು ; ಮತ್ತು ಯೋಜನೆಗಳು ಯಾವುವು ; (ವಿವರ ನೀಡುವುದು)

(ಆ) ಮಂಗಳೂರು ನಗರ ಪೊಲೀಸ್ ವ್ಯಾಪ್ತಿಯಲ್ಲಿ ೨೦೨೨–೨೩, ೨೦೨೩–೨೪, ಮತ್ತು ೨೦೨೪–೨೫ ರಲ್ಲಿ ಉಂಟಾಗಿರುವ ವಾಹನ ಅಪಘಾತ ಕೇಸುಗಳು ಹಾಗೂ ಮರಣ ಹೊಂದಿದ

ಪ್ರಕರಣಗಳ ಸಂಖ್ಯೆ ಎಷ್ಟು ; ಸಂಚಾರಿ ಠಾಣೆಗಳಲ್ಲಿ ದಾಖಲಾದ ಪ್ರಕರಣಗಳೆಷ್ಟು ; (ವಿವರ ನೀಡುವುದು)

(ಇ) ನಗರ ವ್ಯಾಪ್ತಿಯಲ್ಲಿ ಈಗಿರುವ ಸಂಚಾರಿ ಪೊಲೀಸ್ ಠಾಣೆಗಳಲ್ಲಿ ಹೆಚ್ಚು ಪ್ರಕರಣ ದಾಖಲಾಗುತ್ತಿರುವ ಕಾರಣ ಹೆಚ್ಚುವರಿ ಟ್ರಾಫಿಕ್ ಪೊಲೀಸ್ ಠಾಣೆಗಳನ್ನು ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆಯೇ ; (ಈ ಬಗ್ಗೆ ವಿವರ ನೀಡುವುದು)

(ಈ) ನಗರ ಟ್ರಾಫಿಕ್ ವ್ಯವಸ್ಥೆಯನ್ನು ಸರಿದೂಗಿಸಲು ಮತ್ತು ನಿಯಂತ್ರಿಸಲು ಸರ್ಕಾರದ ಮುಂದಿರುವ ಸಲಹೆಗಳು ಯಾವುವು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯ ಸಣ್ಣ ನೀರಾವರಿ ಇಲಾಖೆಯಿಂದ ನಿರ್ಮಿಸಲಾದ ಕಿಂಡಿ ಅಣೆಕಟ್ಟುಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೫ (೭೮೧) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ನಿರ್ಮಿಸಲಾದ ಕಿಂಡಿ ಅಣೆಕಟ್ಟುಗಳ ಸಂಖ್ಯೆ ಎಷ್ಟು ; ಇವುಗಳ ನಿರ್ವಹಣೆಗಾಗಿ ಮಾಡಿದ ಖರ್ಚು ಎಷ್ಟು ; (ವಿವರ ನೀಡುವುದು)

(ಆ) ಸಣ್ಣ ನೀರಾವರಿ ಇಲಾಖೆಯಿಂದ ನಿರ್ಮಿಸಲಾದ ಎಷ್ಟು ಕಿಂಡಿ ಅಣೆಕಟ್ಟುಗಳಿಗೆ ಗೇಟ್‌ಗಳನ್ನು ಅಳವಡಿಸಲಾಗಿದೆ ; ಗೇಟ್ ಅಳವಡಿಸಲು ಬಾಕಿ ಇರುವ ಕಿಂಡಿ ಅಣೆಕಟ್ಟುಗಳ ಸಂಖ್ಯೆ ಎಷ್ಟು ; ಬಾಕಿ ಉಳಿಯಲು ಕಾರಣವೇನು ; (ವಿವರ ನೀಡುವುದು)

(ಇ) ಬಂಟ್ವಾಳ ತಾಲ್ಲೂಕಿನ ಕಾವಳಮೂಡುರು ಗ್ರಾಮದ ಪಂಜಾಡಿ ಎಂಬಲ್ಲಿರುವ ಕಿಂಡಿ ಅಣೆಕಟ್ಟಿಗೆ ಗೇಟ್ ಅಳವಡಿಸದೇ, ನಿರ್ವಹಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ,

ಸರ್ಕಾರ ಏನು ಕ್ರಮಕೈಗೊಂಡಿದೆ ? (ತೆಗೆದುಕೊಂಡ ಕ್ರಮದ ಬಗ್ಗೆ ವಿವರ ನೀಡುವುದು)

## ಕರಾವಳಿ ಭಾಗದಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿ ಪಡಿಸುವ ಕುರಿತು

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೬ (೭೮೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಭಾಗದಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಯೋಜನೆಗಳು ಯಾವುವು ; ಕರಾವಳಿಯ ಜಿಲ್ಲೆಗಳಿಗೆ ವಿನಿಯೋಗಿಸುವ ಹಣವೆಷ್ಟು ;

(ಆ) ಕರಾವಳಿ ಭಾಗದಲ್ಲಿ ಹೊರ ರಾಜ್ಯಗಳಿಂದ ಆಗಮಿಸುವ ಪ್ರವಾಸೋದ್ಯಮಗಳಿಗೆ ಅನುಕೂಲವಾಗುವ ದೃಷ್ಟಿಯಿಂದ ಉದ್ಯೋಗಗಳನ್ನು ಸ್ಥಾಪಿಸಲು ಕೈಗೊಂಡಿರುವ ಯೋಜನೆಗಳಾವುವು ;

(ಇ) ಕರಾವಳಿ ಭಾಗದಲ್ಲಿ ಪ್ರವಾಸೋದ್ಯಮದಲ್ಲಿ ಹೂಡಿಕೆ ಮಾಡಲು ಮತ್ತು ಬಂಡವಾಳ ಆಕರ್ಷಿಸಲು ಒಂದು ಪ್ರವಾಸೋದ್ಯಮ ಮೇಳವನ್ನು ಸಂಘಟಿಸಲು ಕ್ರಮಕೈಗೊಂಡಲ್ಲಿ ಕರಾವಳಿ ಭಾಗದ ಅವಶ್ಯಕತೆಗಳಿಗೆ ಸ್ಪಂಧಿಸಿದಂತೆ ಆಗುವುದು ಎಂಬ ಸಲಹೆಗಳಿದ್ದು, ಈ ಬಗ್ಗೆ ಸರ್ಕಾರದ ನಿಲುವೇನು ; ಖಾಸಗಿ ಉದ್ಯಮಗಳಿಗೆ ಅವಕಾಶ ನೀಡಲು ಇರುವ ಯೋಜನೆಗಳು ಯಾವುವು ; (ವಿವರ ನೀಡುವುದು)

(ಈ) ಕೆಎಸ್‌ಟಿಡಿಸಿ (KSTDC) ಯಿಂದ ಜಂಗಲ್ ಲಾಡ್ಜ್ ಮಾದರಿಯಲ್ಲಿ ಕರಾವಳಿ ಭಾಗದಲ್ಲಿ ಪ್ರವಾಸಿಗರನ್ನು ಆಕರ್ಷಿಸಲು ಯೋಜನೆ ರೂಪಿಸಲು ಚಿಂತಿಸಿದೆಯೇ ; ಸರ್ಕಾರದ ನಿಲುವೇನು ?

## ಮನೆಯಲ್ಲಿ ನಡೆಯುವ ಶುಭ ಕಾರ್ಯಗಳಿಗೆ ಪರವಾನಿಗೆ ನೀಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೭ (೭೮೩) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ನಗರದಲ್ಲಿ ಅಬಕಾರಿ ಇಲಾಖೆಯ ಅಧಿಕಾರಿಗಳು ಮನೆಯಲ್ಲಿ ಮದುವೆ ಮುಂತಾದ ಕಾರ್ಯಕ್ರಮಗಳು ನಡೆಯುತ್ತಿರುವ ಸಂದರ್ಭದಲ್ಲಿ ಮನೆಗಳಿಗೆ ಭೇಟಿ ನೀಡಿ ಕಿರುಕುಳ ನೀಡುತ್ತಿರುವ ಬಗ್ಗೆ ಸಾರ್ವಜನಿಕರಿಂದ ಆರೋಪಗಳಿದ್ದು, ಯಾವ ಕಾನೂನಿನ ಅಡಿಯಲ್ಲಿ ಮನೆಗಳಿಗೆ ಅಧಿಕಾರಿಗಳು ರೈಡ್ ಮಾಡಲು ಅವಕಾಶವಿದೆ ; (ವಿವರ ನೀಡುವುದು)

(ಆ) ಮಂಗಳೂರು ನಗರದಲ್ಲಿ ಅಧಿಕಾರಿಗಳು ಸರ್ಕಾರದ ರೆವಿನ್ಯೂ ಸಂಗ್ರಹಕ್ಕಿಂತ, ಅಧಿಕಾರಿಗಳ ಸಂಗ್ರಹವೇ ಜಾಸ್ತಿಯಾಗುತ್ತಿದೆ ಎಂದು ದೂರುಗಳಿದ್ದು, ಈ ಬಗ್ಗೆ ಇಲಾಖೆ ಏನು ಕ್ರಮಕೈಗೊಂಡಿದೆ ; (ವಿವರ ನೀಡುವುದು)

(ಇ) ಇಲಾಖೆಯ ಅಧಿಕಾರಿಗಳು ಮನೆಯಲ್ಲಿ ನಡೆಯುವ ಶುಭ ಕಾರ್ಯಕ್ರಮಗಳಿಗೆ ಪರವಾನಿಗೆ ನೀಡಲು ಮನೆ ಮಂದಿಯನ್ನು ಕಛೇರಿಗೆ ಕರೆದು ಅವರ ಫೋಟೋಗಳನ್ನು ತೆಗೆದು ಕಿರುಕುಳವನ್ನು ನೀಡುತ್ತಿದ್ದಾರೆ ಎಂಬ ಬಗ್ಗೆ ಮಾಹಿತಿ ಇದೆಯೇ ; (ಈ ಬಗ್ಗೆ ವಿವರ ನೀಡುವುದು)

(ಈ) ಸದರಿ ಜಿಲ್ಲೆಯಲ್ಲಿ ೨೦೨೨–೨೩ ಮತ್ತು ೨೦೨೩–೨೪ರಲ್ಲಿ ಒಂದು ದಿನದ ಪರವಾನಿಗೆ ಎಷ್ಟು ನೀಡಲಾಗಿದೆ ; ಯಾವ ಯಾವ ಸ್ಥಳಗಳಲ್ಲಿ ಮತ್ತು ಮನೆಗಳಲ್ಲಿ ಕಾರ್ಯಕ್ರಮಕ್ಕೆ ಪರವಾನಿಗೆ

ನೀಡಲಾಗಿದೆ ; ಈ ಮೂಲಕ ಸಂಗ್ರಹಿಸಿದ ಹಣವೆಷ್ಟು ; ಎಷ್ಟು ವೈನ್ ಶಾಪ್/ಬಾರ್ ಮುಂತಾದ ಲೈಸನ್ಸ್‌ಗಳನ್ನು ಸ್ಥಳಾಂತರ ಮಾಡಲಾಗಿದೆ ? (ವಿವರ ನೀಡುವುದು)

## ಪಿ.ಆರ್.ಆರ್ ಯೋಜನೆಗೆ ಭೂಮಿ ನೀಡಿದ ರೈತರಿಗೆ ಪರಿಹಾರ ನೀಡುವ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೮ (೭೯೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಪಿ.ಆರ್.ಆರ್ ಯೋಜನೆಗೆ ಭೂಮಿ ನೀಡಿದ ರೈತರಿಗೆ ಪರಿಹಾರದ ದರ ನಿಗದಿಪಡಿಸಲಾಗಿದೆಯೇ ;

(ಆ) ಭೂ ಸ್ವಾಧೀನ ಕಾಯಿದೆ ೧೮೯೪ ಮತ್ತು ೨೦೧೩ ರ ಕಾಯಿದೆಯ ಸಾಮ್ಯತೆಗೆ ಅನುಗುಣವಾಗಿ ಪರಿಹಾರ ನಿಗದಿಪಡಿಲಾಗುವುದೇ ; ೨೦೧೩ ರ ಕಾಯಿದೆ ಪ್ರಕಾರವೆ ರೈತರಿಗೆ ಪರಿಹಾರ ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು ; ಏಕೆ ಈ ರೀತಿ ವಿಳಂಬ ನೀತಿ ಅನುಸರಿಸಲಾಗುತ್ತಿದೆ ; (ಸಂಪೂರ್ಣ ಮಾಹಿತಿಯೊಂದಿಗೆ ವಿವರಣೆ ನೀಡುವುದು)

(ಇ) ಪೆರಿಫೆರಲ್ ವರ್ತುಲ ರಸ್ತೆ ನಿರ್ಮಾಣ ಸಂಬಂಧ ಬಿಡಿಎ ಸುಮಾರು ೪ ಸಾವಿರ ರೈತರಿಗೆ ನೋಟೀಸ್ ನೀಡಿದ್ದು, ಭೂಮಿ ಬಿಟ್ಟುಕೊಟ್ಟು ಪರಿಹಾರ ಪಡೆಯಲು ಒಪ್ಪಿಗೆ ಸೂಚಿಸುವಂತೆ ರೈತರಲ್ಲಿ ವಿನಂತಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಉ) ಸದರಿ ನೋಟೀಸ್‌ಗೆ ರೈತರು ನೀಡಿರುವ ಉತ್ತರವೇನು ; ಪಿಆರ್‌ಆರ್ ರಸ್ತೆ ಹಾದು ಹೋಗುವ ಮಾರ್ಗದಲ್ಲಿ ಪ್ರತಿ ಎಕರೆಗೆ ಹೊಸ ದರ ನೀಡಬೇಕು, ಇಲ್ಲವೇ ಯೋಜನೆ ಕೈಬಿಡಬೇಕು ಎಂದು ರೈತರು ನೋಟಿಸ್‌ಗೆ ಉತ್ತರ ನೀಡಿರುವುದು ಸಹ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಿದ್ದಲ್ಲಿ, ಸರ್ಕಾರ ರೈತರ ಪರವಾಗಿ ತೆಗೆದುಕೊಂಡಿರುವ ನಿರ್ಣಯಗಳೇನು ; (ವಿವರ ನೀಡುವುದು)

(ಋ) ಇಲ್ಲಿ ರಸ್ತೆ ನಿರ್ಮಾಣಕ್ಕೆ ಅಗತ್ಯವಿರುವ ಭೂ ಸ್ವಾಧೀನಕ್ಕೆ ೧೫ ವರ್ಷಗಳ ಹಿಂದೆಯೇ ಅಧಿಸೂಚನೆ ಹೊರಡಿಸಿದ್ದು, ಹೀಗಾಗಿ ರೈತರು ಈ ಅಧಿಸೂಚಿತ ಭೂಮಿಯಲ್ಲಿ ಬೆಳೆಯನ್ನು ಬೆಳೆಯಲಾಗದೆ, ಯಾವುದೇ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗದೇ ಸಂಕಷ್ಟಕ್ಕೆ ಸಿಲುಕಿರುವುದರಿಂದ ಸರ್ಕಾರ ಭೂ ಸ್ವಾದೀನ ಕಾಯಿದೆ ೧೮೯೪ರ ಬದಲು ೨೦೧೩ ರ ಕಾಯಿದೆಯಂತೆ ರೈತರಿಗೆ ಪರಿಹಾರ ನೀಡಲು ಸರ್ಕಾರ ಮುಂದಾಗುವುದೇ ? (ಸ್ಪಷ್ಟ ವಿವರ ನೀಡುವುದು)

## ನಂದಿ ಬೆಟ್ಟದಲ್ಲಿ ರೋಪ್‌ವೇ ಯೋಜನೆ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೫ (೭೯೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವಾಸಿಗರನ್ನು ಆಕರ್ಷಿಸುವ ಸಲುವಾಗಿ ನಂದಿಬೆಟ್ಟದಲ್ಲಿ ರೋಪ್‌ವೇ ಯೋಜನೆ ಸೇರಿದಂತೆ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಮಾಹಿತಿ ಒದಗಿಸುವುದು)

(ಆ) ಈ ರೋಪ್ ವೇ ಮತ್ತು ಕೈಗೊಳ್ಳುತ್ತಿರುವ ವಿವಿಧ ಕಾಮಗಾರಿಗಳಿಗೆ ಸರ್ಕಾರ ಖರ್ಚು ಮಾಡುತ್ತಿರುವ ಮೊತ್ತವೆಷ್ಟು ; (ಮಾಹಿತಿ ಒದಗಿಸುವುದು)

(ಇ) ರೋಪ್ ವೇ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಂದ ನಂದಿ ಬೆಟ್ಟಕ್ಕೆ ತೀವ್ರ ಅಪಾಯವಿರುವುದರಿಂದ ತಕ್ಷಣವೇ ಈ ಕಾಮಗಾರಿಗಳನ್ನು ನಿಲ್ಲಿಸಬೇಕು ಎಂದು ಪರಿಸರವಾದಿಗಳು ಮತ್ತು ಭೂ ವಿಜ್ಞಾನಿಗಳು ಸರ್ಕಾರವನ್ನು ಎಚ್ಚರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಅಪಾಯದ ಅಂಚಿಗೆ ಸಿಲುಕಿರುವ ನಂದಿಬೆಟ್ಟದಲ್ಲಿ ಪ್ರವಾಸಿಗರ ಸಂಖ್ಯೆ ವಿಪರೀತ ಏರಿಕೆಯಾಗುತ್ತಿದ್ದು. ರೆಸಾರ್ಟ್‌ಗಳು ಹೆಚ್ಚಾಗುತ್ತಿರುವುದರ ಜೊತೆಗೆ ಅಲ್ಲಿನ ಪ್ರಕೃತಿಯ ಸೊಬಗಿನ ಮೇಲೆ ಒತ್ತಡವಿರುವ ಕಾರಣ ನಂದಿ ಬೆಟ್ಟ ಉಳಿಸಿ ಎಂದು ಸರ್ಕಾರದ ವಿವಿಧ ೧೧ ಇಲಾಖೆಗಳಿಗೆ ವರದಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಸಲ್ಲಿಸಿರುವ ವರದಿಯಲ್ಲಿ ಶಿಫಾರಸ್ಸುಗಳಾವುವು ಹಾಗೂ ಇಲಾಖೆಗಳು ಈ ವರದಿಯ ಮೇಲೆ ಏನೇನು ಕ್ರಮ ತೆಗೆದುಕೊಂಡಿವೆ ? (ವಿವರ ನೀಡುವುದು)

## ರಾಜ್ಯ ಸರ್ಕಾರ ಬಳಕೆ ಮಾಡಿರುವ ವಿಮಾನ/ಹೆಲಿಕಾಪ್ಟರ್ ಬಾಡಿಗೆ ನೀಡಿರುವ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೦ (೭೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ವಿಮಾನ/ಹೆಲಿಕಾಪ್ಟರ್ ಹೊಂದಿದೆಯೇ ; (ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನ ಅವಧಿಯಲ್ಲಿ ಯಾವ ಉದ್ದೇಶಕ್ಕೆ ಸರ್ಕಾರವು ಬಾಡಿಗೆ ಆಧಾರದ ಮೇಲೆ ವಿಮಾನ ಮತ್ತು ಹೆಲಿಕಾಪ್ಟರ್‌ಗಳನ್ನು ಖಾಸಗಿ ಸಂಸ್ಥೆ/ ವ್ಯಕ್ತಿಗಳಿಂದ ಪಡೆದುಕೊಂಡಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಈ ಅವಧಿಯಲ್ಲಿ ಬಾಡಿಗೆ ಪಡೆದುಕೊಂಡ ವಿಮಾನ ಮತ್ತು ಹೆಲಿಕಾಪ್ಟರ್‌ಗಳನ್ನು ಸರ್ಕಾರದ ಮಾನ್ಯ ಮುಖ್ಯಮಂತ್ರಿಯವರು, ಉಪ ಮುಖ್ಯಮಂತ್ರಿಯವರು/ಸಚಿವರು/ಮುಖ್ಯ ಕಾರ್ಯದರ್ಶಿ ಸೇರಿದಂತೆ ಸರ್ಕಾರದ ಕಾರ್ಯಕ್ರಮಗಳ ಪ್ರಯಾಣಕ್ಕೆ ಉಪಯೋಗಿಸಿಕೊಂಡಿದ್ದಾರೆಯೇ ; (ಪ್ರವಾಸ ಮೊತ್ತ ಮತ್ತು ಕಾರ್ಯಕ್ರಮಗಳ ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ೨೦೨೩-೨೪ ಮತ್ತು ೨೦೨೪-೨೫ನೇ ಅವಧಿಯಲ್ಲಿ ಸರ್ಕಾರವು ಕಾರ್ಯಕ್ರಮಗಳಿಗೆ ಈ ವಿಮಾನ ಮತ್ತು ಹೆಲಿಕಾಪ್ಟರ್‌ಗಳನ್ನು ಬಳಕೆ ಮಾಡಿಕೊಂಡಿದರೇ ಪ್ರತಿ ಕಾರ್ಯಕ್ರಮದ ಪ್ರವಾಸ ಪಟ್ಟಿ, ಇದಕ್ಕಾಗಿ ವಿಮಾನಕ್ಕೆ, ಹೆಲಿಕಾಪ್ಟರ್‌ಗೆ ಪ್ರತಿ ಕಾರ್ಯಕ್ರಮಕ್ಕೆ ಸರ್ಕಾರದಿಂದ ಪಾವತಿ ಮಾಡಿರುವ ಬಾಡಿಗೆ ಮೊತ್ತದ ಸಂಪೂರ್ಣ ಮಾಹಿತಿ ಒದಗಿಸುವುದು ;

(ಉ) ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನಲ್ಲಿ ಇಲ್ಲಿಯ ತನಕ ಬಾಡಿಗೆ ಪಡೆದುಕೊಂಡು ಈ ರೀತಿ ಪ್ರಯಾಣಿಸಿದ ವಿಮಾನ ಮತ್ತು ಹೆಲಿಕಾಪ್ಟರ್‌ಗೆ ಸರ್ಕಾರ ಪಾವತಿ ಮಾಡಿರುವ ವಾರ್ಷಿಕ ಮೊತ್ತವೆಷ್ಟು ? (೨೦೨೩ ರಿಂದ ಸಂಪೂರ್ಣ ಮಾಹಿತಿ ನೀಡುವುದು)

## ನ್ಯಾಯಾಲಯಗಳ ಪ್ರಕರಣಗಳಿಗೆ ರಾಜ್ಯ ಸರ್ಕಾರ ಖರ್ಚು ಮಾಡಿರುವ ಮೊತ್ತದ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೧ (೭೯೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೧೦ ವರ್ಷಗಳಲ್ಲಿ ನ್ಯಾಯಾಲಯದ ಪ್ರಕರಣಗಳನ್ನು ಎದುರಿಸಲು ರಾಜ್ಯ ಸರ್ಕಾರ ಖರ್ಚು ಮಾಡಿರುವ ಮೊತ್ತವೆಷ್ಟು; (ವರ್ಷವಾರು ವಿವರವಾದ ಮಾಹಿತಿಯನ್ನು ಒದಗಿಸುವುದು)

(ಆ) ರಾಜ್ಯದ ವಿವಿಧ ನ್ಯಾಯಾಲಯಗಳಲ್ಲಿ, ರಾಜ್ಯ ಹೈಕೋರ್ಟ್‌ನಲ್ಲಿ, ಸುಪ್ರಿಂಕೋರ್ಟ್‌ನಲ್ಲಿ ರಾಜ್ಯ ಸರ್ಕಾರದ ಪರವಾಗಿ ಎಷ್ಟು ಪ್ರಕರಣಗಳು ದಾಖಲಾಗಿವೆ ; (ವರ್ಷವಾರು ವಿವರ ನೀಡುವುದು)

(ಇ) ದಾಖಲಾದ ಪ್ರಕರಣಗಳಲ್ಲಿ ರಾಜ್ಯ ಸರ್ಕಾರದ ಪರವಾಗಿ ಆದೇಶ ಬಂದಿರುವ ಪ್ರಕರಣಗಳೆಷ್ಟು ? (ವಿವರ ನೀಡುವುದು)

## ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೨ (೮೪೪) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖೆಗೆ ಎಷ್ಟು ಅನುದಾನ ಬಿಡುಗಡೆಗೊಳಿಸಲಾಗಿದೆ ; ಇದರಲ್ಲಿ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಪ್ರಸ್ತುತ ಪ್ರಗತಿಯಲ್ಲಿರುವ ಕಾಮಗಾರಿಗಳು ಯಾವುವು ; ಕಾಮಗಾರಿಗಳ ಹಾಗೂ ಅನುದಾನ ಬಿಡುಗಡೆಯ ಸಂಪೂರ್ಣ ವಿವರ ನೀಡುವುದು ;

(ಇ) ಕಳೆದ ೨ ವರ್ಷಗಳಲ್ಲಿ ಸದರಿ ಜಿಲ್ಲೆಗಳಲ್ಲಿ ಎಷ್ಟು ಕಿಂಡಿ ಅಣೆಕಟ್ಟುಗಳ ನಿರ್ಮಾಣ ಮತ್ತು ತಡೆಗೋಡೆಗಳ ನಿರ್ಮಾಣ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗಿದೆ ಅವು ಯಾವುವು ; ಯಾವ ಕಾಮಗಾರಿಗಳು ಪೂರ್ಣಗೊಂಡಿವೆ ಎಷ್ಟು ಅನುದಾನವನ್ನು ಬಳಸಿಕೊಳ್ಳಲಾಗಿದೆ ; (ತಾಲ್ಲೂಕುವಾರು ವಿವರವನ್ನು ಒದಗಿಸುವುದು)

(ಈ) ಸದರಿ ಜಿಲ್ಲೆಗಳಲ್ಲಿ ಮಳೆಗಾಲದಲ್ಲಿ ಹೆಚ್ಚು ಮಳೆಯಾಗುವುದರಿಂದ ಮಳೆ ನೀರು ಭೂಮಿಗೆ ಹೆಚ್ಚು ಇಂಗುವಂತೆ ಮಾಡಲು ಸಣ್ಣ ನೀರಾವರಿ ಇಲಾಖೆಯಿಂದ ಏನೇನು ಯೋಜನೆ ರೂಪಿಸಲಾಗಿದೆ ;

(ಉ) ಪ್ರಸ್ತುತ ವರ್ಷ ಸದರಿ ಜಿಲ್ಲೆಗಳಿಗೆ ಸಣ್ಣ ನೀರಾವರಿ ಇಲಾಖೆಯಲ್ಲಿ ಎಷ್ಟು ಅನುದಾನ ಮೀಸಲಿಡಲಾಗಿದೆ ? (ಜಿಲ್ಲಾವಾರು ವಿವರ ಒದಗಿಸುವುದು)

## ನಾಗರ ಪಂಚಮಿ ಹಬ್ಬಕ್ಕೆ ರಜೆ ನೀಡುವ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೩ (೮೪೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ನಾಗರ ಪಂಚಮಿ ಹಬ್ಬವನ್ನು ಎಲ್ಲಾ ದೇವಸ್ಥಾನ ಮತ್ತು ಪ್ರತೀ ಊರುಗಳಲ್ಲಿ ಎಲ್ಲಾ ಮನೆಗಳಲ್ಲಿ ಆಚರಿಸುತ್ತಾ ಬರುತ್ತಿರುವುದರಿಂದ ಮುಂದಿನ ದಿನಗಳಲ್ಲಿ ಈ ಹಬ್ಬಕ್ಕೆ ಉಭಯ ಜಿಲ್ಲೆಗಳಲ್ಲಿ ಶಾಲಾ–ಕಾಲೇಜುಗಳಿಗೆ ಮತ್ತು ಸರ್ಕಾರಿ ನೌಕರರಿಗೆ ಒಂದು ದಿನದ ವಿಶೇಷ ಸಾಂದರ್ಭಿಕ ರಜೆಯನ್ನು ನೀಡುವ ಬಗ್ಗೆ ಸರ್ಕಾರದ ನಿಲುವೇನು ;

(ಆ) ಈ ಬಗ್ಗೆ ಜಿಲ್ಲಾಡಳಿತದಿಂದ ಬೇಡಿಕೆ ಬಂದಲ್ಲಿ ಪರಿಗಣಿಸಲಾಗುವುದೇ ; ಅಥವಾ ಜಿಲ್ಲಾಡಳಿತವೇ ರಜೆಯನ್ನು ಮಂಜೂರು ಮಾಡುವ ಬಗ್ಗೆ ನಿರ್ಧಾರ ಕೈಗೊಳ್ಳಬಹುದೇ ?

## ಪೊಲೀಸ್ ಇಲಾಖೆಯ ಸಿಬ್ಬಂದಿಗಳ ಮುಂಬಡ್ತಿ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೪ (೮೪೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮತ್ತು ಮಂಗಳೂರು ನಗರದಲ್ಲಿ ಎ.ಎಸ್.ಐ. ಹುದ್ದೆಯಿಂದ ಪಿ.ಎಸ್.ಐ. ಹುದ್ದೆಗೆ ಮುಂಬಡ್ತಿ ನೀಡಲು ಬಾಕಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ; (ಸಂಪೂರ್ಣ ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಬೇರೆ ಬೇರೆ ಸರ್ಕಾರಿ ಇಲಾಖೆಗಳಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಹುದ್ದೆಗಳು ಶೇ. ೫೦–೫೦ ಅನುಪಾತದಲ್ಲಿದ್ದು ಪೊಲೀಸ್ ಇಲಾಖೆಯಲ್ಲಿ ಮಾತ್ರ ಶೇ. ೭೦–೩೦ರ ಅನುಪಾತದಲ್ಲಿದ್ದು ಈ ತಾರತಮ್ಯವನ್ನು ಯಾವಾಗ ಸರಿ ಪಡಿಸಲಾಗುವುದು ; ಸರಿಪಡಿಸಲು ಇರುವ ಸಮಸ್ಯೆಗಳೇನು ;

(ಇ) ರಾಜ್ಯದ ಅಗ್ನಿಶಾಮಕ ಮತ್ತು ಕಾರಾಗೃಹ ಇಲಾಖೆಯಲ್ಲಿ ಎ.ಎಸ್.ಐ. ಮತ್ತು ಪಿ.ಎಸ್.ಐ. ವಾರ್ಷಿಕ ಗೆಜೆಟೆಡ್ ೩೦ ದಿನಗಳ ವೇತನವನ್ನು ಪಡೆಯುತ್ತಿದ್ದು ಪೊಲೀಸ್ ಇಲಾಖೆಯಲ್ಲಿ ಎ.ಎಸ್.ಐ. ಮತ್ತು ಪಿ.ಎಸ್.ಐ. ಗೆಜೆಟೆಡ್ ೧೫ ದಿನಗಳ ವೇತನವನ್ನು ನೀಡಲಾಗುತ್ತಿದೆ ; ಹೆಚ್ಚಿನ ಕೆಲಸ ನಿರ್ವಹಿಸುವ ಪೊಲೀಸ್ ಇಲಾಖೆಗೆ ೩೦ ದಿನಗಳ ವೇತನವನ್ನು ನೀಡಲು ಸರ್ಕಾರ ಕ್ರಮವಹಿಸುವುದೇ ?

## ರಾಜ್ಯದಲ್ಲಿ ವಿದೇಶ ಪ್ರಯಾಣ, ವಿದೇಶದಲ್ಲಿ ಉದ್ಯೋಗ ನೆಪದಲ್ಲಿ ವಂಚನೆಗೆ ಒಳಗಾಗುತ್ತಿರುವ ಪ್ರಕರಣಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೫ (೮೦೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿದೇಶ ಪ್ರಯಾಣ ಅಥವಾ ವಿದೇಶದಲ್ಲಿ ಉದ್ಯೋಗ ಪಡೆಯಲು ವೀಸಾ ಮಾಡಿಸಿ ಕೊಡುವ ನೆಪದಲ್ಲಿ ವಂಚಿಸಿ ಹಣ ಕಳೆದುಕೊಂಡು ಆವಮಾಂಯಕರು ವಂಚನೆಗೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ದಾಖಲಾಗಿರುವ ಇಂತಹ ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು ಮತ್ತು ಸದರಿ ಏಜೆನ್ಸಿ ಅಥವಾ ವ್ಯಕ್ತಿಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮವೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಏಜೆನ್ಸಿ ಅಥವಾ ವ್ಯಕ್ತಿಗಳ ಮೇಲೆ ಕಾನೂನಿನ ಅಡಿಯಲ್ಲಿ ವಿಧಿಸಬಹುದಾದ ಗರಿಷ್ಟ ಶಿಕ್ಷೆ ಯಾವುದು ; (ಪ್ರಮಾಣದ ವಿವರ ನೀಡುವುದು)

(ಈ) ಇಂತಹ ಪ್ರಕರಣ ಪುನ: ಮರುಕಳಿಸದಂತೆ ತಡೆಯಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

## ರಾಜ್ಯದ ಅಬಕಾರಿ ಇಲಾಖೆಯಿಂದ ಖಾಲಿ ಇರುವ ಅಬಕಾರಿ ನಿರೀಕ್ಷಕರ ಹುದ್ದೆಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೬ (೮೦೮) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅಬಕಾರಿ ಇಲಾಖೆಯಲ್ಲಿ ಖಾಲಿ ಇರುವ ಅಬಕಾರಿ ನಿರೀಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಸ್ಥಳ ನಿರೀಕ್ಷಣೆಯಲ್ಲಿರುವ ಅಬಕಾರಿ ನಿರೀಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ; (ಸ್ಥಳಗಳ ವಿವರ ನೀಡುವುದು)

(ಇ) ಘನ ನ್ಯಾಯಾಲಯದ ಆದೇಶದಂತೆ ರಾಜ್ಯದ ಪ್ರಾಥಮಿಕ ಡಿಸ್ಟಿಲರಿಗಳಲ್ಲಿ ಅಬಕಾರಿ ಇಲಾಖೆಯ ಹುದ್ದೆಗಳನ್ನು ಮರು ನಿಯೋಜಿಸಲು ಸೂಚಿಸಿದ್ದರೂ ಇಲ್ಲಿಯವರೆಗೆ ಮಾಡದಿರಲು ಕಾರಣಗಳೇನು ; ಮತ್ತು ಎಷ್ಟು ಹುದ್ದೆಗಳನ್ನು ನಿಯೋಜಿಸಬೇಕಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಕೊಡಗು ಜಿಲ್ಲೆಯ ಕೇರಳ ಅಂತರರಾಜ್ಯ ಗಡಿಭಾಗವಾದ ಕರಿಕೆ ಗ್ರಾಮದಲ್ಲಿ ಅಬಕಾರಿ ಚೆಕ್ ಪೋಸ್ಟ್ ಇಲ್ಲದಿರಲು ಕಾರಣವೇನು ;

(ಉ) ರಾಜ್ಯದ ಅಬಕಾರಿ ಇಲಾಖೆಯಲ್ಲಿ ಸನ್ನದುಗಳಿಗೆ ನಿರೀಕ್ಷಿತ ಗುರಿಯನ್ನು ನಿಗದಿಪಡಿಸಿ ಸನ್ನುದಾರರಿಗೆ ಹೆಚ್ಚು ಮಧ್ಯ ಎತ್ತುವಳಿ ಮಾಡಲು ಸೂಚನೆ ನೀಡುತ್ತಿರಲು ಕಾರಣವೇನು ?

## ಪ್ರವಾಸೋದ್ಯಮ ಇಲಾಖೆಯ ಸಿಬ್ಬಂದಿಗಳ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್(ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೭ (೮೬೦) ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರವಾಸೋದ್ಯಮ ಇಲಾಖೆಯು ಸಿಬ್ಬಂದಿ ಕೊರತೆಯಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಳೆದ ೦೩ ವರ್ಷಗಳ ಅವಧಿಯಲ್ಲಿ ಸರ್ಕಾರದಿಂದ ಎಷ್ಟು ಹುದ್ದೆಗಳನ್ನು ಮಂಜೂರು ಮಾಡಲಾಗಿದೆ ; ಮಂಜೂರು ಮಾಡಲಾಗಿರುವ ಅಷ್ಟು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆಯೇ ಅಥವಾ ಬಾಕಿ ಇದೆಯೇ ; (ಮಾಹಿತಿ ಒದಗಿಸುವುದು)

(ಆ) ರಾಜ್ಯದಲ್ಲಿ ಪ್ರವಾಸೋದ್ಯಮ ಇಲಾಖೆಗೆ ಮಂಜೂರಾದ ಒಟ್ಟು ಹುದ್ದೆಗಳು ಎಷ್ಟು ; ಇದರಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ; ಬಾಕಿ ಹುದ್ದೆಗಳನ್ನು ಯಾವ ಕಾಲ ಮಿತಿಯೊಳಗೆ ಭರ್ತಿ ಮಾಡಲಾಗುವುದು ; (ಮಾಹಿತಿ ನೀಡುವುದು)

(ಇ) ವಿಜಯಪುರ ಜಿಲ್ಲೆಯಲ್ಲಿ ಇರುವ ಸಿಬ್ಬಂದಿಗಳು ಎಷ್ಟು ; ಖಾಲಿ ಹುದ್ದೆಗಳು ಎಷ್ಟು ; ಸಿಬ್ಬಂದಿ ಕೊರತೆಯಿಂದ ಇಲಾಖೆಯ ಕಾರ್ಯ ಕುಂಠಿತವಾಗಿದ್ದು, ಸರ್ಕಾರದ ಗಮನಕ್ಕೆ ಇದೆಯೇ ; ಇದ್ದರೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ನಿರುದ್ಯೋಗ ಯುವಕರಿಗೆ ಆಸರೆಯಾಗಿದ್ದ ಟ್ಯಾಕ್ಸಿ ಯೋಜನೆಯನ್ನು ಸರ್ಕಾರ ಕೈಬಿಟ್ಟಿದ್ದು ಯಾಕೆ ; ಈ ಯೋಜನೆಯನ್ನು ಪುನರ್ ಪರಿಶೀಲನೆ ಮಾಡಿ ಮತ್ತೆ ಪ್ರಾರಂಭ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ? (ಮಾಹಿತಿ ನೀಡುವುದು)

## ಪೊಲೀಸ್ ಇಲಾಖೆಯ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್(ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೮ (೮೬೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯ ಪೊಲೀಸ್ ಇಲಾಖೆಯಲ್ಲಿ ಕಳೆದ ೦೩ ವರ್ಷಗಳಲ್ಲಿ ನಿರುಪಯುಕ್ತವಾದ ವಾಹನಗಳ ಸಂಖ್ಯೆ ಎಷ್ಟು ; ಎಷ್ಟು ನೂತನ ವಾಹನಗಳನ್ನು ಒದಗಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ವಿಜಯಪುರ ಜಿಲ್ಲೆಯಲ್ಲಿರುವ ಪೊಲೀಸ್ ಸಿಬ್ಬಂದಿಯ ಸಂಖ್ಯಾ ಬಲವೆಷ್ಟು ; ಇದರಲ್ಲಿ ಎಷ್ಟು ಸಿಬ್ಬಂದಿಗಳಿಗೆ ವಸತಿ ಗೃಹದ ವ್ಯವಸ್ಥೆ ಕಲ್ಪಿಸಲಾಗಿದೆ ; ಒಟ್ಟು ಸಿಬ್ಬಂದಿಯನ್ನು ಶೇಕಡಾ ಎಷ್ಟು ಸಿಬ್ಬಂದಿ ವರ್ಗಕ್ಕೆ ವಸತಿ ಗೃಹ ವ್ಯವಸ್ಥೆ ಕಲ್ಪಿಸಲಾಗಿದೆ ; (ಸಮಗ್ರ ಮಾಹಿತಿ ಒದಗಿಸುವುದು)

(ಇ) ರಾಜ್ಯದ ಎಲ್ಲಾ ಜಿಲ್ಲೆಯಲ್ಲಿ ಶೇಕಡಾವಾರು ಎಷ್ಟು ಪೊಲೀಸ್ ಸಿಬ್ಬಂದಿ ವರ್ಗಕ್ಕೆ ವಸತಿ ಗೃಹ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ;

(ಈ) ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಪೊಲೀಸ್ ಠಾಣೆಗಳಿವೆ ; ಎಲ್ಲಾ ಪೊಲೀಸ್ ಠಾಣೆಗಳಿಗೂ ವಾಹನದ ವ್ಯವಸ್ಥೆ ಇದೆಯೇ ; ಪೊಲೀಸ್ ಠಾಣೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಪಿಎಸ್ಐಗಳಿಗೆ ವಾಹನಗಳನ್ನು ಒದಗಿಸಲಾಗಿದೆಯೇ ; (ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ಒಟ್ಟು ಎಷ್ಟು ರಾಷ್ಟ್ರೀಯ–ರಾಜ್ಯ ಹೆದ್ದಾರಿಗಳಲ್ಲಿ ವಿಜಯಪುರ ಜಿಲ್ಲೆಯನ್ನು ಒಳಗೊಂಡಂತೆ ಎಷ್ಟು ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ನಿರ್ವಹಣೆಗಾಗಿ ಹೈವೆ ಮೊಬೈಲ್‌ಗಳನ್ನು ಒದಗಿಸಲಾಗಿದೆ ; ಒಟ್ಟು ಸಂಖ್ಯೆ ಎಷ್ಟು ; ವಿಜಯಪುರದ ಸಂಖ್ಯೆ ಎಷ್ಟು ? (ಮಾಹಿತಿ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಆಸ್ತಿಗಳ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್(ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೯ (೮೬೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಆಸ್ತಿಗಳೆಷ್ಟು ; ಈ ಪೈಕಿ ತೆರಿಗೆ ವ್ಯಾಪ್ತಿಯಿಂದ ಹೊರಗಿರುವ ಆಸ್ತಿಗಳ ಸಂಖ್ಯೆ ಎಷ್ಟು ; ತೆರಿಗೆ ವ್ಯಾಪ್ತಿಯಿಂದ ಹೋಗಿರುವ ಕಾರಣ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಆಗುತ್ತಿರುವ ನಷ್ಟ ಎಷ್ಟು ; ಈ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ತರಲು ಕೈಗೊಂಡಿರುವ ಕ್ರಮಗಳೇನು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ಕಳೆದ ೫ ವರ್ಷದಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಪಾವತಿಸದಿರುವ ಆಸ್ತಿಗಳೆಷ್ಟು; ಆಸ್ತಿ ತೆರಿಗೆ ವಸೂಲಿಗೆ ಕೈಗೊಂಡಿರುವ ಕ್ರಮಗಳೇನು ; ತೆರಿಗೆ ಪಾವತಿಸದ ಎಷ್ಟು ಆಸ್ತಿಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹೆಸರಿಗೆ ಸೇರಿಸಲಾಗಿದೆ ; (ವಿವರ ನೀಡುವುದು)

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಪ್ರತಿಷ್ಠಿತ ಮಾಲ್‌ಗಳು ತೆರಿಗೆ ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ತೆರಿಗೆ ಬಾಕಿ ಉಳಿಸಿಕೊಂಡಿರುವ ಮಾಲ್‌ಗಳು ಯಾವುವು ; ವಸೂಲಾಬೇಕಿರುವ ಬಾಕಿ ಮೊತ್ತ ಎಷ್ಟು ; ತೆರಿಗೆ ಬಾಕಿ ವಸೂಲಿಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಈ) ತೆರಿಗೆ ವಸೂಲಿ ಸಂಬಂಧ ನ್ಯಾಯಾಲಯದಲ್ಲಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಕೆಲವು ಪ್ರಕರಣಗಳಲ್ಲಿ ನ್ಯಾಯಾಲಯದಲ್ಲಿ ಸರ್ಕಾರಕ್ಕೆ ಹಿನ್ನೆಲೆ ಆಗಲು ಕಾರಣಗಳೇನು ?

## ವಿಜಯಪುರ ಜಿಲ್ಲೆಯ ಅಪರಾಧ ಪ್ರಕರಣಗಳ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್(ವಿಧಾನಸಭೆಯಿಂದ ಚುನಾಯಿತರಾದವರು) :–**

೬೭೦ (೮೬೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿ ಇತ್ತೀಚೆಗೆ ಕಳ್ಳತನ ಪ್ರಕರಣಗಳು ಜಾಸ್ತಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಪ್ರಕರಣದಲ್ಲಿ ಭಾಗಿಯಾಗಿರುವವರೆಲ್ಲ ಹೊರ ರಾಜ್ಯದವರು ಇರುವುದು ನಿಜವೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ವಿಜಯಪುರ ಜಿಲ್ಲೆಯ ಸುತ್ತಲೂ ಅಂತರರಾಜ್ಯ ಗಡಿ ರೇಖೆಯನ್ನು ಹೊಂದಿದ್ದು, ನೆರೆ ರಾಜ್ಯದ ಅಪರಾಧ ಹಿನ್ನೆಲೆ ಹೊಂದಿರುವ ವ್ಯಕ್ತಿಗಳು ರಾಜ್ಯವನ್ನು ಪ್ರವೇಶಿಸದಂತೆ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಇತ್ತೀಚೆಗೆ ಜಿಲ್ಲೆಯಲ್ಲಿ ಕೊಲೆ, ಕಳ್ಳತನ, ದರೋಡೆ ಪ್ರಕರಣಗಳು ಹೆಚ್ಚಾಗುತ್ತಿದ್ದು, ಅದರಲ್ಲಿ ಹೊರ ರಾಜ್ಯದ ಆರೋಪಿಗಳು ಇರುವುದು ನಿಜವೇ ; ಇದ್ದರೆ ಅಂತರವನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳಾವುವು ;

(ಈ) ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿರುವುದಕ್ಕೆ ಸಿಬ್ಬಂದಿ ಕೊರತೆ ಮತ್ತು ವಾಹನಗಳ ಕೊರತೆ ಮುಖ್ಯ ಇರುವುದು ನಿಜವೇ ; ಅದನ್ನು ಸರಿದೂಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ವೃಂದ ಮತ್ತು ನೇಮಕಾತಿಗಳಿಗೆ ತಿದ್ದುಪಡಿ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೬೭೧ (೮೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರುವುದಕ್ಕೆ ಸಂಬಂಧಿಸಿದಂತೆ ಅಭಿಪ್ರಾಯ ನೀಡಲು ತೆಗೆದುಕೊಳ್ಳುವ ಕಾಲಾವಕಾಶ ಎಷ್ಟು ;

(ಆ) ದಿನಾಂಕ: ೧೦–೦೭–೨೦೨೪ರಂದು ನಡೆದ ಉಪ ಸಮಿತಿ ಸಭೆಯಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯವರ ಅಭಿಪ್ರಾಯ ಪಡೆಯಲು ನವೆಂಬರ್ – ೨೦೨೪ರಲ್ಲಿ ಕಡತ (ಇ–ಆಫೀಸ್ ಕಡತ ಸಂ. ಪಿಕೆಸ್–೧೪೫–೨೦೨೪) (COMP

NO. ೧೩೮೪೧೧೪) ಕಳುಹಿಸಿದ್ದರೂ ಇದುವರೆವಿಗೂ ಅಭಿಪ್ರಾಯ ನೀಡದಿರಲು ಕಾರಣಗಳೇನು ;

(ಈ) ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿನ ಬೃಹತ್ ಅಣೆಕಟ್ಟುಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೬೭೨ (೮೧೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಲಸಂಪನ್ಮೂಲ ಇಲಾಖೆಗೆ ಸೇರಿರುವ ಬೃಹತ್ (ಭಾರಿ) ಅಣೆಕಟ್ಟುಗಳು ಯಾವುವು ;

(ಆ) ಈ ಅಣೆಕಟ್ಟುಗಳ ನಿರ್ಮಾಣ ಮಾಡಿದ ವರ್ಷ, ಗರಿಷ್ಠ ನೀರು ಸಂಗ್ರಹ ಸಾಮರ್ಥ್ಯ (Max Cap & Live Cap) ಹೂಳು ತುಂಬಿರಬಹುದಾದ ಪ್ರಮಾಣ ಹಾಗೂ ಅಣೆಕಟ್ಟುಗಳ ಬಾಳಿಕೆ ಅವಧಿ (Lifetime/Durability) ಎಷ್ಟು; (ವಿವರ ನೀಡುವುದು)

(ಇ) ೨೦೨೦ನೇ ವರ್ಷ ಸಾಲಿನಿಂದ ಈವರೆವಿಗೂ ಈ ಅಣೆಕಟ್ಟುಗಳ ದುರಸ್ತಿ/ಪುನಶ್ಚೇತನಕ್ಕೆ ಒದಗಿಸಿರುವ ಅನುದಾನ ಮತ್ತು ಭರಿಸಲಾಗಿರುವ ವೆಚ್ಚ ಎಷ್ಟು ; ಯಾವ ಯೋಜನೆಗಳಡಿ ಅನುದಾನ ಒದಗಿಸಲಾಗಿದೆ ; (ಅಣೆಕಟ್ಟುವಾರು ಮಾಹಿತಿ ನೀಡುವುದು)

(ಈ) ಈ ಅಣೆಕಟ್ಟುಗಳ Health Status Report ನೀಡುವ ಸಕ್ಷಮ ಸಂಖ್ಯೆ/ಪ್ರಾಧಿಕಾರ ಯಾವುದು ; ಇದುವರೆವಿಗೂ ಎಷ್ಟು ಅಣೆಕಟ್ಟುಗಳನ್ನು ಪರಿವೀಕ್ಷಿಸಿ ವರದಿ ನೀಡಲಾಗಿದೆ ; (ವಿವರ ನೀಡುವುದು)

(ಊ) ಅಣೆಕಟ್ಟುಗಳಲ್ಲಿ ಸಂಗ್ರಹವಾಗಿರುವ ಹೂಳು ತೆಗೆಯುವ ಕುರಿತು ಸರ್ಕಾರದ ನಿಲುವೇನು ?

## ಮಾಜಿ ಸೈನಿಕ ಪೊಲೀಸ್ ಕಾನ್ಸ್‌ಟೇಬಲ್‌ಗಳ ವರ್ಗಾವಣೆ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೬೭೩ (೮೧೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೊಲೀಸ್ ಇಲಾಖೆಯಲ್ಲಿ ಕಾನ್ಸ್‌ಟೇಬಲ್ (ಸಿವಿಲ್ ಮತ್ತು ಸಿಎಆರ್/ಡಿಎಆರ್) ಆಗಿ ಕರ್ತವ್ಯ ನಿರ್ವಹಿಸುತ್ತಿರುವ ಮಾಜಿ ಸೈನಿಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪರೀಕ್ಷಾ ಅವಧಿ ಹಾಗೂ ಕನಿಷ್ಠ ೩ ವರ್ಷಗಳ ಸೇವೆಯನ್ನು ತೃಪ್ತಿಕರವಾಗಿ ಪೂರ್ಣಗೊಳಿಸಿ ನಿಯಮಗಳನ್ವಯ ಅರ್ಹತೆ ಪಡೆದುಕೊಂಡಿದ್ದರೂ ಅಂತರ ಜಿಲ್ಲೆಗಳಿಗೆ ವರ್ಗಾವಣೆ ಆಗದಿರುವುದರಿಂದ ಮಾಜಿ ಸೈನಿಕ ಪೊಲೀಸ್ ಕಾನ್ಸ್‌ಟೇಬಲ್‌ಗಳಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ನೌಕರರ ಕೋರಿಕೆ ಮೇರೆಗೆ ಅಂತರ ಜಿಲ್ಲೆಗಳಿಗೆ ವರ್ಗಾವಣೆ ಮಾಡುವ ಪ್ರಕ್ರಿಯೆಯನ್ನು ಸರ್ಕಾರ ಎಂದಿನಿಂದ ಆರಂಭಿಸಿದೆ ;

(ಈ) ಅಂತರ ಜಿಲ್ಲೆಗಳಿಗೆ ವರ್ಗಾವಣೆ ಕೋರಿ ಎಷ್ಟು ಮಂದಿ ಮಾಜಿ ಸೈನಿಕ ಪೊಲೀಸ್ ಕಾನ್ಸ್‌ಟೇಬಲ್‌ಗಳು ಸರ್ಕಾರಕ್ಕೆ ಮನವಿ ಮಾಡಿದ್ದಾರೆ ; ಈ ಪೈಕಿ ಎಷ್ಟು ಮಂದಿಯನ್ನು ವರ್ಗಾವಣೆ ಮಾಡಲಾಗಿದೆ ಅಥವಾ ವರ್ಗಾವಣೆ ಮಾಡಲು ಬಾಕಿ ಇರುತ್ತದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಜಲ ಪ್ರವಾಸೋದ್ಯಮ ಅಭಿವೃದ್ಧಿ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೬೭೪ (೮೧೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರವಾಸೋದ್ಯಮ ಚಟುವಟಿಕೆಗೆ ಹೊಸದಾಗಿ ಗುರುತಿಸಿರುವ ಕೆರೆಗಳ ಸಂಖ್ಯೆ ಹಾಗೂ ಈಗಾಗಲೇ ಜಲ ಪ್ರವಾಸೋದ್ಯಮ ಆರಂಭಿಸಿರುವ ಸ್ಥಳಗಳ ಸಂಖ್ಯೆ ಎಷ್ಟು ; ಎಲ್ಲೆಲ್ಲಿ ಆರಂಭಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಸ್ಥಳದಲ್ಲಿ ಕೈಗೊಂಡಿರುವ ಪ್ರವಾಸೋದ್ಯಮ ಚಟುವಟಿಕೆಗಳಾವುವು ;

(ಇ) ಕಳೆದ ೩ ವರ್ಷಗಳಲ್ಲಿ ಇವುಗಳಿಂದ ಗಳಿಸಿರುವ ಅನುದಾನ ಎಷ್ಟು ;

(ಈ) ಜಲ ಪ್ರವಾಸೋದ್ಯಮ ಬಲ ಪಡಿಸಲು / ಉತ್ತೇಜಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೈದಿಗಳು ಮತ್ತು ವಿಚಾರಣಾಧೀನ ಕೈದಿಗಳ ಸಾವಿನ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೬೭೫ (೮೧೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೧೦ ವರ್ಷಗಳಲ್ಲಿ ಪೊಲೀಸ್ ವಶದಲ್ಲಿದ್ದಾಗ ಅಥವಾ ಜೈಲಿನಲ್ಲಿದ್ದಾಗ ಮೃತಪಟ್ಟ ಕೈದಿಗಳು/ವಿಚಾರಣಾಧೀನ ಕೈದಿಗಳ (ಆರೋಪಿಗಳ) ಸಂಖ್ಯೆ ಎಷ್ಟು ; (ಜಿಲ್ಲಾವಾರು ಅಂಕಿ ಅಂಶಗಳ ಮಾಹಿತಿ ನೀಡುವುದು)

(ಆ) ಕೈದಿಗಳ ನಡುವಿನ ಘರ್ಷಣೆ, ಆತ್ಮಹತ್ಯೆ, ಅಸಹಜ ಸಾವು ಪ್ರಕರಣಗಳಲ್ಲಿ ಮೃತಪಟ್ಟವರ ಸಂಖ್ಯೆ ಎಷ್ಟು ; ಸಾವಿಗೆ ಕಾರಣಗಳೇನು ; (ಜಿಲ್ಲಾವಾರು ಅಂಕಿಅಂಶಗಳ ಮಾಹಿತಿ ನೀಡುವುದು)

(ಇ) ಕಸ್ಟಡಿಯಲ್ಲಿದ್ದಾಗ (custodial death) ಮೃತಪಟ್ಟ ಆರೋಪಿ ಅಥವಾ ಕೈದಿಗಳ ಪ್ರಕರಣಗಳಲ್ಲಿ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕ್ರಮ ಜರುಗಿಸಲಾಗಿದೆಯೇ ; (ವಿವರ ನೀಡುವುದು)

(ಈ) ಕೈದಿ ಅಥವಾ ವಿಚಾರಣಾಧೀನ ಕೈದಿಗಳ ಅಸಹಜ ಸಾವುಗಳಿಗೆ ಅವರ ಅವಲಂಬಿತರಿಗೆ ಅಥವಾ ರಕ್ತ ಸಂಬಂಧಿಗಳಿಗೆ ನೀಡಲಾಗುವ ಪರಿಹಾರದ ಮೊತ್ತ ಎಷ್ಟು ; ಕಳೆದ ೧೦ ವರ್ಷಗಳಲ್ಲಿ ಸಂತ್ರಸ್ತ ಕುಟುಂಬಗಳಿಗೆ ನೀಡಿದ ಒಟ್ಟು ಪರಿಹಾರ ಮೊತ್ತ ಎಷ್ಟು ;

(ಉ) ಕಾರಾಗೃಹಗಳ ಸುಧಾರಣೆಗೆ ಇತ್ತೀಚಿನ ವರ್ಷಗಳಲ್ಲಿ ಕೈಗೊಂಡಿರುವ ಪ್ರಮುಖ ಸುಧಾರಣೆಗಳು ಯಾವುದು ?

## ಕರ್ನಾಟಕದಲ್ಲಿ ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸಮುದಾಯಗಳ ಸೇರ್ಪಡೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೬ (೮೩೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದಲ್ಲಿ ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರ್ಪಡೆ ಕುರಿತಂತೆ ಇಲ್ಲಿಯವರೆಗೆ ಎಷ್ಟು ಸಮುದಾಯಗಳನ್ನು ಶಿಫಾರಸ್ಸು ಮಾಡಿದೆ ; ಎಷ್ಟನ್ನು ಕೇಂದ್ರ ಸರ್ಕಾರ ಒಪ್ಪಿದೆ ; (ಸಮುದಾಯವಾರು ವಿವರ ನೀಡುವುದು)

(ಆ) ಕೇಂದ್ರ ಸರ್ಕಾರವು ನೇಮಿಸಿದ ೧೯೬೫ರ ಲೋಕುರ್ ಸಮಿತಿ ವರದಿಯಲ್ಲಿ ನಿಗದಿಪಡಿಸಿದಂತೆ ಕರ್ನಾಟಕದಲ್ಲಿ ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಅರ್ಹತೆಯಿರುವ ಯಾವ್ಯಾವ ಸಮುದಾಯಗಳ ಬಗ್ಗೆ ಮಾನವಶಾಸ್ತ್ರಜ್ಞರ ಮೂಲಕ ಕುಲಶಾಸ್ತ್ರೀಯ ಅಧ್ಯಯನ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಲಾಗಿದೆ ; (ವಿವರ ನೀಡುವುದು)

(ಇ) ಕೇಂದ್ರ ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರ್ಪಡೆ ಮಾಡುವ ಬಗ್ಗೆ ಕುಡುಬಿ ಸಮುದಾಯುವನ್ನು ಸೇರಿಸಲು ೨೦೨೦ರಲ್ಲಿ ಪ್ರೊ. ಮನೋಹರ್ ಯಾದವ್ (ಐಸೆಕ್ ಬೆಂಗಳೂರು) ಇವರ ಮೂಲಕ ಕುಲಶಾಸ್ತ್ರೀಯ ಅಧ್ಯಯನ ನಡೆಸಿ ಸರ್ಕಾರಕ್ಕೆ ಸಲ್ಲಿಸಿದ ವರದಿಯನ್ನು ಸರ್ಕಾರ ಒಪ್ಪಿದೆಯೇ ; ಅಥವಾ ತಿರಸ್ಕರಿಸಿದೆಯೇ ; ಒಪ್ಪಿದ್ದಲ್ಲಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ ಶಿಫಾರಸ್ಸಿನ ವಿವರ ದಿನಾಂಕ ಇತ್ಯಾದಿ ಮಾಹಿತಿ ನೀಡುವುದು. ತಿರಸ್ಕರಿಸಿದ್ದಲ್ಲಿ ದಾಖಲಿಸಿರುವ ಕಾರಣಗಳ ಟಿಪ್ಪಣಿ ಸಹಿತ ವಿವರಗಳನ್ನು ನೀಡುವುದು ;

(ಈ) ಕರ್ನಾಟಕದಲ್ಲಿ ಪರಿಶಿಷ್ಟ ಪಂಗಡಗಳ ಸಮುದಾಯಗಳಿಗೆ ಸಂಬಂಧಿಸಿದಂತೆ ಯಾವುದೇ ಕಲ್ಯಾಣ ಕಾರ್ಯಕ್ರಮಗಳ ಸಹಿತ ಇಂತಹ ಸೂಕ್ಷ್ಮ ವಿಷಯಗಳ ವ್ಯವಹರಣೆಯನ್ನು ಕಾಲಮಿತಿಯಲ್ಲಿ ನಿರ್ವಹಿಸುತ್ತಿರುವುದನ್ನು ಸರ್ಕಾರ ಯಾವ ರೀತಿಯಲ್ಲಿ ಖಾತರಿಪಡಿಸಿಕೊಳ್ಳಲಾಗುತ್ತಿದೆ ;

(ಉ) ಪರಿಶಿಷ್ಟ ಪಂಗಡಗಳ ಇಲಾಖೆಯ ಪ್ರಮುಖ ಸ್ಥಾನಗಳಲ್ಲಿ ಗರಿಷ್ಟ ಸೇವಾ ಕಾಲಾವಧಿಯನ್ನು (ವರ್ಗಾವಣೆ ನಿಯಮಗಳ ಮೀರಿರುವ ಪ್ರಕಾರ) ದೀರ್ಘ ಕಾಲದಿಂದ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳನ್ನು ವರ್ಗಾಯಿಸಲು ಸರ್ಕಾರ ಏನು ಕ್ರಮವಹಿಸಿದೆ ?

# ಕರ್ನಾಟಕ ರಾಜ್ಯದಲ್ಲಿ ನ್ಯಾಯಾಲಯ ಪ್ರಕರಣಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೭ (೮೩೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಉಚ್ಚ ಮತ್ತು ಆಡಳಿತಾತ್ಮಕ ನ್ಯಾಯಾಲಯದಲ್ಲಿ ಇರುವ ಒಟ್ಟು ಪ್ರಕರಣಗಳೆಷ್ಟು; ಅವುಗಳನ್ನು ಸರ್ಕಾರ ವಾದಿಯಾಗಿರುವ ಅಥವಾ ಪ್ರತಿವಾದಿಯಾಗಿರುವ ಪ್ರಕರಣಗಳೆಷ್ಟು ; (ವಿವರ ನೀಡುವುದು)

(ಆ) ಈ ನ್ಯಾಯಾಲಯಗಳಲ್ಲಿ ಇರುವ ೧೦ ವರ್ಷಗಳಿಗಿಂತ ಹೆಚ್ಚು ಅವಧಿಯ ಪ್ರಕರಣಗಳೆಷ್ಟು ; ಅವುಗಳನ್ನು ಶೀಘ್ರವಾಗಿ ಇತ್ಯರ್ಥಗೊಳಿಸಲು ಸರ್ಕಾರ ಏನು ಕ್ರಮವಹಿಸಿದೆ ; ಈ ಪ್ರಕರಣಗಳಲ್ಲಿ ಸರ್ಕಾರದ ಪರವಾಗಿ ಇತ್ಯರ್ಥಗೊಂಡವುಗಳ ಸಂಖ್ಯೆಯೆಷ್ಟು ; (ಪ್ರಕರಣಗಳ ಸಂಖ್ಯೆ ಮತ್ತು ಪ್ರತಿಶತ ವಿವರ ನೀಡುವುದು)

(ಇ) ಹಲವಾರು ನ್ಯಾಯಾಲಯ ಪ್ರಕರಣಗಳು ಮಾಹಿತಿಯ ಕೊರತೆಯಿಂದ, ಸರ್ಕಾರದ ಉನ್ನತ ಅಧಿಕಾರಿಗಳ ನಿರ್ಲಕ್ಷ್ಯದಿಂದ ಮತ್ತು ಕಾನೂನಿನ ತಪ್ಪು ವ್ಯಾಖ್ಯಾನದಿಂದಾಗಿ ಉದ್ಭವಿಸುತ್ತಿದ್ದು ಈ ಕುರಿತು ಸರ್ಕಾರ ಏನು ಕ್ರಮವಹಿಸುತ್ತಿದೆ ;

(ಈ) ಹಲವಾರು ರಾಜಕೀಯ ಪ್ರೇರಿತ ದೂರಿನ ಆಧಾರದಲ್ಲಿ ಅಧಿಕಾರಿಗಳ ಮೇಲೆ ಶಿಸ್ತುಕ್ರಮ ಜಾರಿಗೊಳಿಸುವ ವಿಚಾರಣೆ ಮತ್ತು ಅಂತಿಮ ಆದೇಶಗಳನ್ನು ನ್ಯಾಯಾಲಯಗಳ ಮೂಲಕ ಪ್ರಶ್ನಿಸಿ ಗೆಲವು ಸಾಧಿಸಿದ ಸಂದರ್ಭಗಳಲ್ಲಿ ಅಧಿಕಾರಿ/ಸಿಬ್ಬಂದಿಗಳ ಮೇಲೆ

ಅಸಮರ್ಪಕ ಕ್ರಮ ಜರುಗಿಸಿ ನ್ಯಾಯಾಲಯದ ಅಮೂಲ್ಯ ಸಮಯ ವ್ಯರ್ಥಕ್ಕೆ ಕಾರಣರಾದ ಉನ್ನತ ಅಧಿಕಾರಿಗಳಿಗೆ ಕನಿಷ್ಠ ಕಾರಣ ಕೇಳಿ ನೋಟೀಸು ಆದರೂ ನೀಡಲಾಗುತ್ತದೆಯೇ ; ಈ ಕುರಿತು ಯಾವುದೇ ಕ್ರಮ ಜರುಗಿಸದಿರಲು ಕಾರಣವೇನು ;

(ಉ) ವಿವಿಧ ನ್ಯಾಯಾಲಯ ಆದೇಶಗಳನ್ನು ಸಂಬಂಧಪಟ್ಟ ಕಾರ್ಯನಿರ್ವಾಹಕ (Executive) ಹಂತದ ಅಧಿಕಾರಿಗಳಿಗೆ ತಲುಪಿಸಲು ಯಾವ ರೀತಿಯಲ್ಲಿ ಕ್ರಮವಹಿಸಲಾಗುತ್ತಿದೆ ?

## ಸರ್ಕಾರಿ ಅಧಿಕಾರಿ ಸಿಬ್ಬಂದಿಗಳ ಸೇವಾ ನಿಯಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೮ (೮೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಇಲಾಖೆಗಳ ಎಲ್ಲಾ ಅಧಿಕಾರಿ ಸಿಬ್ಬಂದಿಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳಿವೆಯೇ ; ಎಲ್ಲಾ ಇಲಾಖೆಗಳ ಎಲ್ಲಾ ಅಧಿಕಾರಿ ಸಿಬ್ಬಂದಿಗಳಿಗೆ ಎಚ್.ಆರ್.ಎಂ.ಎಸ್ ಮೂಲಕ ವೇತನ ಪಾವತಿಯಾಗುತ್ತಿದೆಯೇ ; ಎಚ್.ಆರ್.ಎಂ.ಎಸ್ ರಹಿತವಾಗಿ ಯಾರ್ಯಾರಿಗೆ ವೇತನ/ಸಂಭಾವನೆ/ಗೌರವಧನ ಪಾವತಿಯಾಗುತ್ತಿದೆ ; (ವಿವರ ನೀಡುವುದು)

(ಆ) ನಾಗರಿಕ ಸೇವಾ ನಿಯಮಗಳನ್ವಯ ಸರ್ಕಾರಿ ಅಧಿಕಾರಿ ಮತ್ತು ಸಿಬ್ಬಂದಿಗಳಿಗಿರುವ ಸವಲತ್ತುಗಳೇನು ; ಅಧಿಕಾರಿಗಳು ಕಾರ್ಯನಿರ್ವಹಿಸುವ ಸ್ಥಳದ ಮನೆ ಬಾಡಿಗೆ ಭತ್ಯೆ, ಪ್ರಭಾರ ಭತ್ಯೆ, ಪ್ರಯಾಣ ಭತ್ಯೆ ಇವುಗಳನ್ನು ಚಾಲ್ತಿಯಲ್ಲಿರುವ ನಿಯಮಗಳಾನುಸಾರ ಕ್ಲಿಪ್ತ ಸಮಯದಲ್ಲಿ ಮಂಜೂರು ಮಾಡಲು ಕೈಗೊಂಡಿರುವ ಕ್ರಮಗಳೇನು ; ಈ ತರಹದ ಎಷ್ಟು ಹಿಂಬಾಕಿ ಪಾವತಿಸಲು ಬಾಕಿಯಿದೆ ; (ಇಲಾಖಾವಾರು ಮಾಹಿತಿ ನೀಡುವುದು)

(ಇ) ಸರ್ಕಾರಿ ನೌಕರರ ವೇತನದಿಂದ ಪ್ರತಿ ತಿಂಗಳು ಕಟಾವಣೆಯಾಗುವ ಎನ್‌ಪಿಎಸ್/ಜಿಪಿಎಫ್/ಕೆಜಿಐಡಿ/ಎಲ್‌ಐಸಿ, ಮುಂತಾದವುಗಳ ಮೊತ್ತವು ಸಂಬಂಧಿಸಿದ ಉಪಶೀರ್ಷಿಕೆಗಳಿಗೆ ಕ್ಲಿಪ್ತ ಸಮಯದಲ್ಲಿ ಜಮೆಯಾಗದೆ ಸರ್ಕಾರಿ ಅಧಿಕಾರಿ ಸಿಬ್ಬಂಧಿಗಳಿಗೆ ಆಗುತ್ತಿರುವ ತೊಂದರೆಗಳನ್ನು ಸರಿಪಡಿಸಲು ಯಾವ ರೀತಿ ಕ್ರಮವಹಿಸಲಾಗುತ್ತಿದೆ ; (ವಿವರ ನೀಡುವುದು)

(ಈ) ರಾಜ್ಯ ಸರ್ಕಾರಿ ನೌಕರರಿಗೆ ಸಂಬಂಧಿಸಿದ ವಿವಿಧ ಬಡ್ತಿಗಳು, ವಾರ್ಷಿಕ ಕಾರ್ಯ ನಿರ್ವಹಣಾ ವರದಿ ಮತ್ತು ಇಲಾಖಾ ವಿಚಾರಣೆ ಮುಂತಾದ ಸೇವಾ ವಿಷಯಗಳನ್ನು ಸಕಾಲ ಕಾಯ್ದೆಯಡಿಯಲ್ಲಿ ತರಲಾಗಿದೆಯೇ ; ಈವರೆಗೆ ವಿವಿಧ ಇಲಾಖೆಗಳ ಎಷ್ಟು ಸರ್ಕಾರಿ ನೌಕರರ ಕಾಲ ಮಿತಿ ಬಡ್ತಿ, ವೇತನ ಬಡ್ತಿ ಮತ್ತು ಬಡ್ತಿ ನೀಡಲು ಬಾಕಿಯಿದೆ ; ಬಾಕಿಯಿಡಲು ಕಾರಣಗಳೇನು ; ಯಾವಾಗ ಅವುಗಳನ್ನು ನೀಡಲಾಗುವುದು ? (ಇಲಾಖಾವಾರು ಮಾಹಿತಿ ನೀಡುವುದು)

## ಸಣ್ಣ ನೀರಾವರಿ ಕಾಮಗಾರಿಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೯ (೮೫೯) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖೆಯ ಯೋಜನೆಗಳ ಅಡಿಯಲ್ಲಿ ಯಾವ್ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ; ಈ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಲು ಆದ್ಯತೆಯನ್ನು ಯಾವ ಮಾನದಂಡಗಳ ಆಧಾರದಲ್ಲಿ ನಿರ್ಧರಿಸಲಾಗುವುದು ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ವಾರ್ಷಿಕವಾಗಿ ಹೆಚ್ಚು ಮಳೆ ಬರುತ್ತಿದ್ದು ಅನೇಕ ಸಣ್ಣ ತೋಡುಗಳಲ್ಲಿ ಮಳೆ ಮತ್ತು

ಝರಿ ನೀರು ಹರಿಯುತ್ತಿದ್ದು ಕಟ್ಟಪುಣಿಗಳ (Side Wall) ನಿರ್ವಹಣೆಯಿಲ್ಲದೆ ನೀರು ಕೃಷಿ ಪ್ರದೇಶಗಳಿಗೆ ನುಗ್ಗುತ್ತಿರುವ ಕುರಿತು ಯಾವ ಕ್ರಮ ವಹಿಸಲಾಗುತ್ತಿದೆ ;

(ಇ) ಈ ಕಟ್ಟಪುಣಿಗಳ ಮರುನಿರ್ಮಾಣ ಮತ್ತು ನಿರ್ವಹಣೆಯನ್ನು ಮಾಡಲು ಸ್ಥಳೀಯ ಬಳಕೆದಾರರ ಸಹಭಾಗಿತ್ವದೊಂದಿಗೆ ಜಂಟಿ ಕಾರ್ಯಕ್ರಮ ರೂಪಿಸಲು ಯೋಚಿಸಿದೆಯೇ ;

(ಈ) ಇಂತಹ ತೋಡುಗಳಿಗೆ ಕಿಂಡಿ ಅಣೆಕಟ್ಟು ಮತ್ತು ಕಿರು ಸೇತುವೆಗಳನ್ನು ರಚಿಸಿ ಒಂದೇ ಕಾಮಗಾರಿಯ ಮೂಲಕ ಅಂತರ್ಜಲ ವೃದ್ಧಿ ಹಾಗೂ ಸಂಪರ್ಕ ಸಾಧಿಸುವ ಎರಡೂ ಉಪಯೋಗಗಳನ್ನು ಪಡೆಯುವ ಬಗ್ಗೆ ಸರ್ಕಾರ ಯೋಚಿಸಿದೆಯೇ ;

(ಉ) ಈಗಾಗಲೇ ನಿರ್ಮಿಸಿರುವ ಕಿಂಡಿ ಅಣೆಕಟ್ಟುಗಳಿಗೆ ನಿಯಮಿತವಾಗಿ ಹಲಗೆ ಹಾಕುವ ಬಗ್ಗೆ ಯಾವ ರೀತಿಯಲ್ಲಿ ಕ್ರಮವಹಿಸಲಾಗುತ್ತಿದೆ ; ಇದರ ಮೇಲ್ವಿಚಾರಣೆಯನ್ನು ಯಾರು ಮಾಡುತ್ತಿದ್ದಾರೆ ?

## ಸೈಬರ್ ಕ್ರೈಂ ನಿಯಂತ್ರಿಸಲು ಹೆಚ್ಚುವರಿ CEN ಪೊಲೀಸ್ ಠಾಣೆಗಳು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೦ (೭೬೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸೈಬರ್ ಕ್ರೈಮ್ ನಿಯಂತ್ರಿಸಲು ಹೆಚ್ಚುವರಿ CEN ಠಾಣೆಗಳನ್ನು ಸ್ಥಾಪಿಸಲಾಗಿದೆಯೇ ; ಈವರೆಗೆ ಎಲ್ಲೆಲ್ಲಿ ಸ್ಥಾಪಿಸಲಾಗಿದೆ ;

(ಆ) ಹೊಸದಾಗಿ ೪೩ ಠಾಣೆಗಳನ್ನು ತೆರೆಯುವ ಯೋಜನೆ ಕಾರ್ಯಗತಗೊಂಡಿದೆಯೇ ;

(ಇ) ಈವರೆಗೆ ದಾಖಲಾಗಿರುವ ಸೈಬರ್ ಕ್ರೈಮ್ ಪ್ರಕರಣಗಳ ಸಂಖ್ಯೆ ಎಷ್ಟು ? (ಕಳೆದ ಐದು ವರ್ಷಗಳ ಮಾಹಿತಿ ಒದಗಿಸುವುದು)

## ಸುಳ್ಳು ಸುದ್ದಿಗಳ ತಡೆಗಟ್ಟುವಿಕೆ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೧ (೭೬೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸುಳ್ಳು ಸುದ್ದಿಗಳನ್ನು ತಡೆಗಟ್ಟಲು ಕೈಗೊಂಡ ಕ್ರಮಗಳೇನು ;

(ಆ) ಸರ್ಕಾರದ ಯೋಜನೆಯ ಭಾಗವಾಗಿದ್ದ Information disorder tackling unit ರಚನೆ ಆಗಿದೆಯೇ ;

(ಇ) ಹಾಗಿದ್ದಲ್ಲಿ ಕಾರ್ಯನಿರ್ವಹಿಸುತ್ತಿರುವ ತಂಡಗಳ ಸಂಖ್ಯೆ ಎಷ್ಟು; ಇದಕ್ಕೆ ತಗುಲಿದ ವೆಚ್ಚವೆಷ್ಟು ?

## ಸರ್ಕಾರದ ಪತ್ರಿಕಾ ಜಾಹಿರಾತುಗಳ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೨ (೭೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದ ವಿವಿಧ ಪತ್ರಿಕೆಗಳಲ್ಲಿ ನೀಡಿದ ಜಾಹಿರಾತುಗಳ ಸಂಖ್ಯೆ ಎಷ್ಟು ;

(ಆ) ಇದಕ್ಕಾಗಿ ಸರ್ಕಾರಕ್ಕೆ ತಗುಲಿದ ಆರ್ಥಿಕ ವೆಚ್ಚವೆಷ್ಟು ? (ವರ್ಷವಾರು ಮಾಹಿತಿ ನೀಡುವುದು)

## Deepfake ಸೈಬರ್ ಕ್ರೈಂ ನಿಯಂತ್ರಣ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೩ (೭೬೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) Deepfake ಸೈಬರ್ ಕ್ರೈಂ ನಿಯಂತ್ರಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಈವರೆಗೆ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ? (ಕಳೆದ ಐದು ವರ್ಷಗಳ ಮಾಹಿತಿ ಒದಗಿಸುವುದು)

## ರಾಜ್ಯದ ಆರ್ಥಿಕ ಪರಿಸ್ಥಿತಿ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೪ (೭೬೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಆರ್ಥಿಕ ಪರಿಸ್ಥಿತಿ ಬಗ್ಗೆ ಕಳೆದ ಐದು ವರ್ಷಗಳ ಮಾಹಿತಿ ಒದಗಿಸುವುದು ;

(ಆ) ರಾಜಸ್ವ ಸಂಗ್ರಹ, ವಿತ್ತೀಯ ಸಂಗ್ರಹ, ತೆರಿಗೆ ಸಂಗ್ರಹ, ಅಬಕಾರಿ ಸಂಗ್ರಹಗಳ ಗುರಿ ಮತ್ತು ಸಾಧನೆಗಳೇನು ; (ಮಾಹಿತಿ ಒದಗಿಸುವುದು)

(ಇ) ಇವುಗಳ ಸಂಗ್ರಹಗಳಲ್ಲಿ ಕೊರತೆಯಾಗಿದ್ದಲ್ಲಿ ಸರಿದೂಗಿಸಲು ಕೈಗೊಂಡ ಕ್ರಮಗಳೇನು ?

## ಬಿಡಿಎಯಿಂದ ಬಡಾವಣೆಗಳನ್ನು ನಿರ್ಮಿಸಿ ನಿವೇಶನ ಹಂಚಿಕೆ ಮಾಡುವ ಕಾರ್ಯದಲ್ಲಿ ವಿಳಂಬ ಕುರಿತು

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮೫ (೮೬೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಬಡಾವಣೆಗಳನ್ನು ನಿರ್ಮಿಸಿ ನಿವೇಶನಗಳನ್ನು ಹಂಚುವ ಕಾರ್ಯ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಯಾವ ಯಾವ ಪ್ರದೇಶಗಳಲ್ಲಿ ಎಷ್ಟು ಬಡಾವಣೆಗಳ ನಿರ್ಮಾಣ ಕಾರ್ಯ ಕೈಗೊಳ್ಳಲಾಗಿದೆ ; ಅವು ಯಾವ ಹಂತದಲ್ಲಿವೆ ;

(ಇ) ಎಷ್ಟು ದಿನಗಳಲ್ಲಿ ಬಡಾವಣೆಗಳನ್ನು ನಿರ್ಮಿಸಿ ನಿವೇಶನಗಳನ್ನು ಹಂಚಿಕೆ ಮಾಡಲಾಗುತ್ತದೆ ; ನಿವೇಶನಗಳನ್ನು ಶೀಘ್ರಗತಿಯಲ್ಲಿ ಹಂಚಲು ಕ್ರಮ ಕೈಗೊಳ್ಳಲಾಗುವುದೆ ?

## ಪೊಲೀಸರಿಗೆ ಸಾರ್ವಜನಿಕರೊಡನೆ ಸೌಜನ್ಯ ಹಾಗೂ ಗೌರವದಿಂದ ವರ್ತಿಸುವಂತೆ ನಿರ್ದೇಶನ ನೀಡುವ ಬಗ್ಗೆ

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮೬ (೮೬೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೊಲೀಸ್ ಠಾಣೆಗಳಿಗೆ ಸಾರ್ವಜನಿಕರು ದೂರು ನೀಡಲು ಹೋದಾಗ ಪೊಲೀಸರು ಸೌಜನ್ಯದಿಂದ ವರ್ತಿಸದೆ ಭಯದ ವಾತಾವರಣ ನಿರ್ಮಾಣವಾಗುವಂತೆ ವರ್ತಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪೊಲೀಸ್ ಠಾಣೆಗಳಿಗೆ ಸಾರ್ವಜನಿಕರು ಭೇಟಿ ನೀಡಿದಾಗ ಸೌಜನ್ಯದಿಂದ ಮಾತನಾಡಿಸಿ ಗೌರವಯುತವಾಗಿ ಮಾನವೀಯತೆಯಿಂದ ವರ್ತಿಸುವಂತೆ ಸಿಬ್ಬಂದಿ ವರ್ಗದವರಿಗೆ ನಿರ್ದೇಶನ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೆ ;

(ಇ) ಹಿರಿಯ ಪೊಲೀಸ್ ಅಧಿಕಾರಿಗಳು ಪೊಲೀಸ್ ಠಾಣೆಗಳಿಗೆ ಭೇಟಿ ನೀಡಿ ಪೊಲೀಸ್ ಸಿಬ್ಬಂದಿಯ ವರ್ತನೆಯನ್ನು ಗಮನಿಸಿ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗುವುದೆ ;

(ಈ) ಪೊಲೀಸ್‌ರ ಕರ್ತವ್ಯದ ಬಗ್ಗೆ ಸಲಹೆ ಸೂಚನೆ ನೀಡಲು ತರಬೇತಿ ಶಿಬಿರಗಳನ್ನು ಏರ್ಪಡಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ?

## ಫೊರೆನ್ಸಿಕ್ ವಿಭಾಗವನ್ನು ಆಧುನೀಕರಣಗೊಳಿಸುವ ಬಗ್ಗೆ

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮೭ (೮೬೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೃಹ ಇಲಾಖೆ ಅಧೀನದಲ್ಲಿರುವ ಫೊರೆನ್ಸಿಕ್ ವಿಭಾಗವನ್ನು ಸ್ವತಂತ್ರ ಸಂಸ್ಥೆಯನ್ನಾಗಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ ;

(ಆ) ಗೃಹ ಇಲಾಖೆ ಅಧೀನದಲ್ಲಿ ಫೊರೆನ್ಸಿಕ್ ವಿಭಾಗ ಕೆಲಸ ಮಾಡುತ್ತಿರುವುದು ನಿಷ್ಪಕ್ಷಪಾತವಾಗಿ ಸೇವೆ ಸಲ್ಲಿಸಲು ಅಡಚಣೆಯಾಗುವುದಿಲ್ಲವೆ ;

(ಇ) ಫೊರೆನ್ಸಿಕ್ ವಿಭಾಗದಲ್ಲಿ ಹಳೆ ಪದ್ಧತಿಯನ್ನು ಅನುಸರಿಸುತ್ತಿದ್ದು ಹೊರ ರಾಜ್ಯಗಳಿಗೆ ಕಳುಹಿಸಿ ವರದಿಯನ್ನು ಪಡೆಯುತ್ತಿದ್ದು, ಇರುವುದನ್ನು ಆಧುನೀಕರಣಗೊಳಿಸಿ ನಮ್ಮಲ್ಲೇ ಲ್ಯಾಬೊರೇಟರಿಯನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ ?

## ಪ್ರವಾಸೋದ್ಯಮ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮೮ (೮೬೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ರೂಪಿಸಿರುವ ಕಾರ್ಯಕ್ರಮಗಳು ಯಾವುವು ;

(ಆ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರವಾಸಿ ತಾಣಗಳಲ್ಲಿ ಗೈಡ್‌ಗಳನ್ನು ನೇಮಕ ಮಾಡಿ ಪ್ರವಾಸಿ ತಾಣಗಳ ವಿವರಗಳನ್ನು ಪ್ರವಾಸಿಗರಿಗೆ

ತಿಳಿಸುವ ವ್ಯವಸ್ಥೆ ಮಾಡಲಾಗಿದೆಯೇ ; ಇಲ್ಲದಿದ್ದರೆ ಈ ವ್ಯವಸ್ಥೆ ಮಾಡಲಾಗುವುದೆ ;

(ಇ) ಈ ಪ್ರವಾಸಿ ತಾಣಗಳಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಶೌಚಾಲಯ, ಉಪಹಾರ ಗೃಹಗಳು, ವಸತಿ ಗೃಹಗಳು ಮುಂತಾದ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಯೋಜನೆ ರೂಪಿಸಲಾಗಿದೆಯೆ ;

(ಈ) ಪ್ರವಾಸೋದ್ಯಮ ಅಭಿವೃದ್ಧಿಗೆ ನೂತನ ಯೋಜನೆಗಳನ್ನು ಸಿದ್ದಪಡಿಸಲಾಗಿದೆಯೇ ? (ವಿವರ ನೀಡುವುದು)

## ಚಿತ್ರದುರ್ಗ ಜಿಲ್ಲೆಯಲ್ಲಿನ ಕೆರೆಗಳಿಗೆ ಏತ ನೀರಾವರಿ ಯೋಜನೆ ಮಾಡುವ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೯ (೭೯೧) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು ಎಷ್ಟು ಕೆರೆಗಳಿವೆ ; (ವಿವರ ಒದಗಿಸುವುದು)

(ಆ) ಈ ಪೈಕಿ ಯಾವ ಯಾವ ಕೆರೆಗಳಿಗೆ ಏತ ನೀರಾವರಿ ಯೋಜನೆ ಮೂಲಕ ನೀರು ತುಂಬಿಸಲಾಗಿದೆ ; ಬಾಕಿ ಇರುವ ಕೆರೆಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬಾಕಿ ಇರುವ ಕೆರೆಗಳಿಗೆ ಏತ ನೀರಾವರಿ ಮೂಲಕ ನೀರು ತುಂಬಿಸಲು ಕೈಗೊಂಡಿರುವ ಕ್ರಮಗಳೇನು ; ಇದಕ್ಕಾಗಿ ಎಷ್ಟು ಅನುದಾನ ನೀಡಲಾಗಿದೆ ? (ವಿವರ ಒದಗಿಸುವುದು)

## ಸುಳ್ಳು ಸುದ್ದಿಗಳನ್ನು ಹರಡದಂತೆ ಮತ್ತು ಜಾಹೀರಾತುಗಳಿಗೆ ಖರ್ಚು ಮಾಡಿದ ಮೊತ್ತದ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೦ (೮೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸತ್ಯಕ್ಕೆ ದೂರವಾದಂತಹ ಮತ್ತು ಸಾರ್ವಜನಿಕರನ್ನು ದಿಕ್ಕು ತಪ್ಪಿಸುವಂತಹ ಸುದ್ದಿಗಳನ್ನು ಪ್ರಚುರಪಡಿಸುವವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಮಗಳೇನು ; ಈ ಸಮಸ್ಯೆಯನ್ನು ಪರಿಹರಿಸಲು ಪ್ರತಿ ಜಿಲ್ಲೆಯಲ್ಲಿ Special Fact-Check Units ರಚಿಸಿರುವುದು ನಿಜವೇ ;

(ಆ) ಇದ್ದಲ್ಲಿ, ಎಲ್ಲಾ ಜಿಲ್ಲೆಗಳಲ್ಲಿ ಈ Special Fact-Check Units ಗಳ ಜವಾಬ್ದಾರಿಗಳೇನು ;

(ಇ) ರಾಜ್ಯದಲ್ಲಿ ೨೦೧೮–೨೦೧೯ ರಿಂದ ೨೦೨೨–೨೦೨೩ನೇ ಸಾಲಿನವರೆಗೆ ಸರ್ಕಾರದ ವತಿಯಿಂದ ಜಾಹೀರಾತುಗಳಿಗಾಗಿ ವರ್ಷವಾರು ಖರ್ಚು ಮಾಡಲಾದ ಒಟ್ಟು ಮೊತ್ತದ ಬಾಬ್ತು ಎಷ್ಟು ಮತ್ತು ಚುನಾವಣೆ ಸಮಯದಲ್ಲಿ ಜಾಹೀರಾತುಗಳಿಗಾಗಿ ಖರ್ಚು ಮಾಡಲಾದ ಒಟ್ಟು ಮೊತ್ತವೆಷ್ಟು ?

## ಬಿ.ಬಿ.ಎಂ.ಪಿ ಹಾಗೂ ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೧ (೮೫೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ಮತ್ತು ವಿಲೇವಾರಿ ಕೆಲಸ ಕಾರ್ಯಗಳನ್ನು ನಿರ್ವಹಿಸಲು (ಸಂಸ್ಕರಣಾ ಘಟಕಗಳನ್ನು

ಒಳಗೊಂಡಂತೆ) ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತದಿಂದ ವಾರ್ಷಿಕವಾಗಿ ವೆಚ್ಚ ಮಾಡುತ್ತಿರುವ ಮೊತ್ತವೆಷ್ಟು; ಸದರಿ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬಿ.ಬಿ.ಎಂ.ಪಿ/ ಎರವಲು/ಏಜೆನ್ಸಿ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಆ) ವಾರ್ಡ್ ಮಟ್ಟದಲ್ಲಿ ಏಜೆನ್ಸಿ ಮುಖಾಂತರ ಕಾರ್ಯನಿರ್ವಹಿಸುತ್ತಿರುವ ಮಾರ್ಷಲ್‌ಗಳಿಗೆ ಘನತ್ಯಾಜ್ಯ ನಿರ್ವಹಣೆ ಮತ್ತು ವಿಲೇವಾರಿ ಕೆಲಸ ಕಾರ್ಯಗಳಲ್ಲಿ ಹೊಂದಿರುವ ವಿದ್ಯಾರ್ಹತೆ ಮತ್ತು ಅನುಭವದ ಬಗ್ಗೆ ಮಾಹಿತಿ ನೀಡುವುದು;

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಿರಿಯ ಆರೋಗ್ಯ ಪರಿವೀಕ್ಷಕರ ಹುದ್ದೆಯಿಂದ ಪದೋನ್ನತಿಗಾಗಿ ಉನ್ನತೀಕರಿಸಲಾದ/ ಸೃಜಿಸಲಾದ ಹೆಲ್ತ್ ಸೂಪರ್‌ವೈಸರ್ ಗ್ರೂಪ್–ಬಿ ಹುದ್ದೆಗಳ ಸಂಖ್ಯೆ ಎಷ್ಟು ; ಸದರಿ ಹೆಲ್ತ್ ಸೂಪರ್‌ವೈಸರ್‌ರವರನ್ನು ಯಾವ ಮಟ್ಟದಲ್ಲಿ (ವಾರ್ಡ್/ಉಪ ವಿಭಾಗ/ವಿಭಾಗ) ನಿಯೋಜಿಸಲಾಗಿದೆ ; ಇವರುಗಳ ವೇತನ ಮತ್ತು ಭತ್ಯೆಗಳ ವಿವರ ನೀಡುವುದು ;

(ಈ) ಹೆಲ್ತ್ ಸೂಪರ್‌ವೈಸರ್ ಹುದ್ದೆಗೆ ಕರ್ನಾಟಕ ಸರ್ಕಾರ ನಗರಾಭಿವೃದ್ಧಿ ಇಲಾಖೆಯಿಂದ ನಿಗದಿಪಡಿಸಲಾದ ಕರ್ತವ್ಯ ಮತ್ತು ಜವಾಬ್ದಾರಿಗಳೇನು ; ಸದರಿ ನಗರಾಭಿವೃದ್ಧಿ ಇಲಾಖೆಯ ಆದೇಶದಂತೆ ಘನತ್ಯಾಜ್ಯ ನಿರ್ವಹಣೆ ಮತ್ತು ವಿಲೇವಾರಿ ಕೆಲಸ–ಕಾರ್ಯಗಳನ್ನು ನಿರ್ವಹಿಸಲು ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತದಿಂದ ನೀಡಲಾಗಿರುವ ಆದೇಶವೇನು ; (ಆದೇಶದ ಪ್ರತಿ ನೀಡುವುದು)

(ಉ) ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳನ್ನು ಒಳಗೊಂಡಂತೆ ನಗರ ಆರೋಗ್ಯ ಪ್ರಾಥಮಿಕ ಕೇಂದ್ರ, ನಮ್ಮ ಕ್ಲಿನಿಕ್, ಸಾಂಕ್ರಾಮಿಕ ರೋಗಗಳ ನಿಯಂತ್ರಣ, ಉದ್ದಿಮೆ ಪರವಾನಗಿಗಳ ಮೇಲ್ವಿಚಾರಣೆ

ಮತ್ತು ಅನುಷ್ಠಾನಕ್ಕೆ ಸಂಬಂಧಪಟ್ಟಂತೆ ಬೆಂಗಳೂರು ಮಹಾನಗರ ಪಾಲಿಕೆಯ ಸಾರ್ವಜನಿಕ ಆರೋಗ್ಯ ಇಲಾಖೆಯಿಂದ ಹೆಲ್ತ್ ಸೂಪರ್‌ವೈಸರ್‌ಗಳಿಗೆ ನೀಡಲಾದ ಆದೇಶದ ಪ್ರತಿ ನೀಡುವುದು ;

(ಊ) ನಗರಾಭಿವೃದ್ಧಿ ಇಲಾಖೆಯ ಆದೇಶದಂತೆ ಪೌರ ಕಾರ್ಮಿಕರು, ಮೇಲ್ವಿಚಾರಕರು, ಕಿರಿಯ ಆರೋಗ್ಯ ಪರಿವೀಕ್ಷಕರ ಮೇಲ್ವಿಚಾರಣೆಗಾಗಿ ಬೆಂಗಳೂರು ಮಹಾನಗರ ಪಾಲಿಕೆಯ ಆರೋಗ್ಯ ಮತ್ತು ನೈರ್ಮಲ್ಯ ಶಾಖೆಯಿಂದ ಹೆಲ್ತ್ ಸೂಪರ್‌ವೈಸರ್‌ಗಳಿಗೆ ಕರ್ತವ್ಯಕ್ಕೆ ನಿಯೋಜಿಸಲಾದ ಆದೇಶದ ಪ್ರತಿ ನೀಡುವುದು; ಮತ್ತು ಆದೇಶದ ಪ್ರತಿ ನೀಡದಿದ್ದಲ್ಲಿ, ಇದಕ್ಕೆ ಕಾರಣಗಳೇನು?

## High-Rise Buildings ಗಳಿಗೆ ಎನ್.ಓ.ಸಿ. ನೀಡುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೨ (೮೫೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯ ರಿಂದ ೨೦೨೩ ರವರೆಗೆ ಬೆಂಗಳೂರು ನಗರದಲ್ಲಿ ಮತ್ತು ಇತರೆ ಪ್ರಮುಖ ಜಿಲ್ಲೆಗಳ ನಗರ ಪ್ರದೇಶದಲ್ಲಿ ಎಷ್ಟು High-Rise Buildings ಗಳಿವೆ ; ಈ High-Rise Buildings ಗಳು NOC and CC ಪಡೆಯುವ ಸಮಯದಲ್ಲಿ ಅಗ್ನಿ ಸುರಕ್ಷತಾ ಮಾನದಂಡನೆಗಳಿಗೆ ಅನುಸರಣೆ ಖಚಿತಪಡಿಸಿಕೊಳ್ಳಲು ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಕಛೇರಿಯಿಂದಲ್ಲೂ ಸಹ ಸಹಮತಿ ಪಡೆಯಬೇಕಾಗಿದ್ದು, ಬೆಂಗಳೂರಿನ ಎಷ್ಟು ಬಿಲ್ಡರ್/ಕಟ್ಟಡ ನಿರ್ಮಾಣ ಗುತ್ತಿಗೆದಾರರು ಸದರಿ ಕಛೇರಿಯಿಂದ ಸಹಮತಿ ಪಡೆದು ಕಟ್ಟಡ ನಿರ್ಮಾಣ ಮಾಡಿದ್ದಾರೆ ; ಎಷ್ಟು ಬಿಲ್ಡರ್/ಕಟ್ಟಡ ನಿರ್ಮಾಣ ಕಂಪನಿಗಳು

ಎನ್.ಓ.ಸಿ.ಯನ್ನು ಪಡೆಯದೇ ಓ.ಸಿ.ಯನ್ನು ಪಡೆದುಕೊಂಡಿರುತ್ತಾರೆ. ಇದು ಕಾನೂನು ಬಾಹಿರವಲ್ಲವೇ ;

(ಆ) ಈ ಮಾನದಂಡನೆಗಳನ್ನು ಪಾಲಿಸದಿದ್ದಲ್ಲಿ, ಸದರಿ ಇಲಾಖೆಯಿಂದ ಬಿಲ್ಡರ್/ಕಟ್ಟಡ ನಿರ್ಮಾಣ ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಳ್ಳಲು ಕಾನೂನಿನಲ್ಲಿ ಅವಕಾಶವಿದೆಯೇ ;

(ಇ) ಇದ್ದಲ್ಲಿ, ಯಾವ ರೀತಿ ಕ್ರಮ ಕೈಗೊಳ್ಳಲಾಗುತ್ತಿದೆ ಮತ್ತು ಇಲ್ಲಿಯವರೆಗೆ ಇಂತಹ ಎಷ್ಟು ಪ್ರಕರಣಗಳು ದಾಖಲಾಗಿವೆ ;

(ಈ) ೨೦೨೪ ರಿಂದ ಇಲ್ಲಿಯವರೆಗೆ ಸದರಿ ಬಿಲ್ಡರ್/ಕಟ್ಟಡ ನಿರ್ಮಾಣ ಗುತ್ತಿಗೆದಾರರಿಂದ ಎಷ್ಟು ಅರ್ಜಿಗಳು ಸ್ವೀಕೃತವಾಗಿ ಅಗ್ನಿ ಸುರಕ್ಷತಾ ಮಾನದಂಡನೆಗಳಿಗೆ ಅನುಸರಣೆ ಖಚಿತಪಡಿಸಿಕೊಳ್ಳಲು ಬಾಕಿ ಉಳಿದುಕೊಂಡಿವೆ ?

## ಮುಖ್ಯ ನ್ಯಾಯಾಂಗ ದಂಡಾಧಿಕಾರಿಯವರ ಕಛೇರಿಯಲ್ಲಿ ನಡೆದ ಅವ್ಯವಹಾರದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೩ (೮೫೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೨ನೇ ಸಾಲಿನಲ್ಲಿ ಮುಖ್ಯ ನ್ಯಾಯಾಂಗ ದಂಡಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ರವರ ಕಛೇರಿಯಲ್ಲಿ ೨.೨೭ ಕೋಟಿ ರೂ.ಗಳ ಅವ್ಯವಹಾರ ನಡೆದಿರುವುದು ನಿಜವೇ ;

(ಆ) ಈ ಅವ್ಯವಹಾರ ನಡೆಸಲು ಕಛೇರಿ ಸಿಬ್ಬಂದಿಗಳು ಬ್ಯಾಂಕಿನ ನಕಲಿ ಮುದ್ರೆಯನ್ನು ಉಪಯೋಗಿಸಿದ್ದು, ಇದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಹಗರಣದಲ್ಲಿ ಭಾಗಿಯಾಗಿರುವ ಸಿಬ್ಬಂದಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ಮತ್ತು ಸದರಿ ಮೊತ್ತವನ್ನು ಹಿಂಪಡೆಯಲು ಕೈಗೊಂಡಿರುವ ಕ್ರಮಗಳೇನು ;

(ಈ) ಈ ರೀತಿ ಅವ್ಯವಹಾರಗಳು ರಾಜ್ಯದ ಇನ್ನೂ ಎಷ್ಟು ನ್ಯಾಯಾಂಗ ಕಛೇರಿಗಳಲ್ಲಿ ಪತ್ತೆ ಹಚ್ಚಲಾಗಿದೆ ; ಹಾಗೂ ಎಷ್ಟು ಮೊತ್ತದ ಅವ್ಯವಹಾರ ನಡೆದಿದೆ ? (ವರ್ಷವಾರು ಮಾಹಿತಿ ನೀಡುವುದು)

## ಕೆ.ಪಿ.ಎಸ್.ಸಿ ನಡೆಸುವ ಪರೀಕ್ಷೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೬೯೪ (೭೬೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಲೋಕಸೇವಾ ಆಯೋಗವು ಇತ್ತೀಚೆಗೆ ನಡೆಸಿದ ಗೆಜೆಟೆಡ್ ಪ್ರೋಬೇಷನರಿ/ಇತರೆ ಪರೀಕ್ಷೆಗಳು ಗೊಂದಲಕ್ಕೆ ಈಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮ ಮತ್ತು ಪ್ರಸಕ್ತ ವರ್ಷದಲ್ಲಿ ಎಷ್ಟು ಅವಾಂತರಗಳು ಆಯೋಗದಲ್ಲಿ ನಡೆದಿದೆ ;

(ಆ) ಕರ್ನಾಟಕ ಲೋಕಸೇವಾ ಆಯೋಗದ ಪರೀಕ್ಷೆಯ ಯಡವಟ್ಟಿನಿಂದ ವಯೋಮಿತಿ ಅಂಚಿನಲ್ಲಿರುವ ರಾಜ್ಯದ ಉದ್ಯೋಗಾಕಾಂಕ್ಷಿಗಳು ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಇದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; ವಯೋಮಿತಿ ಸಡಿಲಿಕೆ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಇ) ಕಳೆದ ೦೧ ವರ್ಷಗಳಲ್ಲಿ ಸದರಿ ಆಯೋಗವು ನಡೆಸುವ ಪರೀಕ್ಷೆಯಲ್ಲಿನ ನ್ಯೂನ್ಯತೆಗಳಿಗೆ ಹೊಣೆಗಾರರು ಯಾರು ; ಹೊಣೆಯಾದವರ ವಿರುದ್ಧ ಯಾವ ಕ್ರಮಗಳನ್ನು ಜರುಗಿಸಲಾಗಿದೆ ; ಜರುಗಿಸಿದ್ದಲ್ಲಿ ಯಾವ–ಯಾವ ಅಧಿಕಾರಿಗಳ ವಿರುದ್ಧ ಯಾವ–ಯಾವ ಕ್ರಮಗಳನ್ನು ಜರುಗಿಸಲಾಗಿದೆ ; ಜರುಗಿಸದಿದ್ದಲ್ಲಿ,

ಯಾವ ಕಾರಣಕ್ಕಾಗಿ ಜರುಗಿಸಿರುವುದಿಲ್ಲ ; ಈ ಕುರಿತು ಸಂಪೂರ್ಣ ಮಾಹಿತಿ ಮತ್ತು ಸೂಕ್ತ ಕಾರಣದೊಂದಿಗೆ ವಿವರಿಸುವುದು ;

(ಈ) ಸದರಿ ಆಯೋಗದ ಸರಣಿ ಯಡವಟ್ಟಿನಿಂದಾಗಿ ವಯೋಮಿತಿ ಅಂಚಿನಲ್ಲಿರುವ ಉದ್ಯೋಗಾಕಾಂಕ್ಷಿಗಳು ಆಯೋಗದ ಮೇಲೆ ವಿಶ್ವಾಸ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮಗಳೇನು ?

## ಗಡಿ ಭಾಗಗಳಲ್ಲಿ ಲೈಸನ್ಸ್ ಇಲ್ಲದೇ ಅಕ್ರಮ ಮದ್ಯ ಮಾರಾಟ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೬೯೫ (೭೭೦) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಯ ಗಡಿ ಭಾಗದಲ್ಲಿನ ಗ್ರಾಮೀಣ ಪ್ರದೇಶಗಳಲ್ಲಿ ಲೈಸನ್ಸ್ ಇಲ್ಲದೆ. ಪ್ರತಿ ಹಳ್ಳಿಗಳಲ್ಲಿಯೂ ಅಕ್ರಮ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಅಕ್ರಮ ಮದ್ಯ ಮಾರಾಟ ಮಾಡುತ್ತಿರುವ ಕುರಿತು ಸಾರ್ವಜನಿಕರಿಂದ ದಾಖಲಾದ ದೂರುಗಳ ಸಂಖ್ಯೆ ಎಷ್ಟು ; ದೂರು ದಾಖಲಾದ ಮೇಲೆ ಸರ್ಕಾರ ಅಂತಹವರ ವಿರುದ್ಧ ಯಾವ ಕ್ರಮ ಕೈಗೊಂಡಿದೆ ; (ಪ್ರಕರಣವಾರು ಮತ್ತು ಪೊಲೀಸ್ ಠಾಣೆವಾರು ಮಾಹಿತಿ ನೀಡುವುದು)

(ಇ) ಗಡಿ ಭಾಗದ ಹಳ್ಳಿಗಳಲ್ಲಿ ಅಕ್ರಮ ಮದ್ಯ ಮಾರಾಟ ಮಾಡುತ್ತಿರುವವರ ವಿರುದ್ಧ ಸಾರ್ವಜನಿಕರ ಹಿತದೃಷ್ಟಿಯಿಂದ ಸ್ವ–ಇಚ್ಛೆಯಿಂದ ಪ್ರಕರಣಗಳನ್ನು ದಾಖಲಿಸಲಾಗಿದೆಯೇ ; (ದಾಖಲಿಸಿದ್ದಲ್ಲಿ ಮಾಹಿತಿ ನೀಡುವುದು)

(ಈ) ವಿಜಯಪುರ ಜಿಲ್ಲೆಯ ಗಡಿ ಭಾಗಗಳಲ್ಲಿ ಅಕ್ರಮ ಮದ್ಯ ಮಾರಾಟ ಮಾಡುತ್ತಿರುವವರೊಂದಿಗೆ ಸ್ಥಳೀಯ ಪೊಲೀಸ್ ಅಧಿಕಾರಿಗಳು ಮತ್ತು ಅಬಕಾರಿ ಅಧಿಕಾರಿಗಳೇ ಶಾಮೀಲಾಗಿ ಅಕ್ರಮ ಮದ್ಯ ಮಾರಾಟ ಮಾಡಲು ಅನುವು ಮಾಡಿಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ತಾಲ್ಲೂಕುವಾರು/ ಪ್ರಕರಣವಾರು ಸಂಪೂರ್ಣ ಮಾಹಿತಿ ನೀಡುವುದು)

## ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯಕ್ಷಮತೆ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೬ (೭೪೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಲೋಕಸೇವಾ ಆಯೋಗವು ಒಂದೇ ಒಂದು ಪ್ರಶ್ನೆಪತ್ರಿಕೆಯನ್ನು ಸಹ ದೋಷರಹಿತವಾಗಿ ಸಿದ್ಧಪಡಿಸಲು ಸಾಧ್ಯವಾಗದೆ ಉದ್ಯೋಗಾಕಾಂಕ್ಷಿಗಳ ಭವಿಷ್ಯಕ್ಕೆ ಮಾರಕವಾಗಿ ಪರಿಣಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಾರ್ಯಕ್ಷಮತೆ ಕುಸಿತ, ವ್ಯಾಪಕ ಭ್ರಷ್ಟಾಚಾರ ಹಾಗೂ ಸ್ವಜನ ಪಕ್ಷಪಾತದಂತಹ ಕಾರಣಗಳಿಂದಾಗಿ ಆಯೋಗವನ್ನು ಸುಧಾರಿಸಲು ಸರ್ಕಾರ ಇದುವರೆಗೆ ಯಾವುದೇ ಕಠಿಣ ಕ್ರಮಗಳನ್ನು ಕೈಗೊಳ್ಳಲು ವಿಫಲವಾಗಿರುವುದಕ್ಕೆ ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ, ಆಯೋಗಕ್ಕೆ ಕಾಯಕಲ್ಪ ನೀಡುವುದರ ಜೊತೆಗೆ ಅದರ ಕಾರ್ಯವೈಖರಿ ಸುಧಾರಿಸಲು ಹಾಗೂ ವಿಶ್ವಾಸಾರ್ಹತೆ ಮರಳಿ ಪಡೆಯಲು ಸಾಧ್ಯವಾಗುವಂತೆ ಸರ್ಕಾರ ಅಗತ್ಯ ಹಾಗೂ ಸೂಕ್ತ ಕ್ರಮಗಳನ್ನು ಕೈಗೊಳ್ಳುವುದು ?

## ತುಂಗಭದ್ರ ಜಲಾಶಯಕ್ಕೆ ಹೊಸ ಕ್ರಸ್ಟ್ ಗೇಟ್ ಅನ್ನು ಅಳವಡಿಸದಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೭ (೭೪೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ವರ್ಷ ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಮುರಿದಾಗ ತಾತ್ಕಾಲಿಕ ಕ್ರಸ್ಟ್ ಗೇಟ್ ಅಳವಡಿಸಿದ್ದು, ನಂತರದಲ್ಲಿ ಪೂರ್ಣ ಪ್ರಮಾಣದ ದುರಸ್ತಿ ಮಾಡಿ ಹೊಸ ಕ್ರಸ್ಟ್ ಗೇಟ್ ಅನ್ನು ಈಗಾಗಲೇ ಅಳವಡಿಸಲಾಗಿದೆಯೇ ;

(ಆ) ಇಲ್ಲದಿದ್ದಲ್ಲಿ, ಕೇಂದ್ರ ಜಲ ಆಯೋಗದ ತಜ್ಞರ ಸಮಿತಿ ಸಹ ಹೊಸ ಕ್ರಸ್ಟ್ ಗೇಟ್ ಅಳವಡಿಸಲು ಶಿಫಾರಸ್ಸು ಮಾಡಿದ್ದರೂ ಇದುವರೆವಿಗೂ ಆ ಕುರಿತು ಯಾವುದೇ ಅಗತ್ಯ ಕ್ರಮ ಕೈಗೊಳ್ಳದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ, ಮುರಿದ ಕ್ರಸ್ಟ್ ಗೇಟ್‌ಗೆ ಶಾಶ್ವತ ಗೇಟ್ ಅಳವಡಿಸಿ ಆ ಮೂಲಕ ಕಳೆದ ವರ್ಷ ಸಂಭವಿಸಿದ ಅನಾಹುತ ಮತ್ತೊಮ್ಮೆ ಸಂಭವಿಸದಂತೆ ಅಗತ್ಯ ಕ್ರಮ ವಹಿಸಲಾಗುವುದು ?

## ಪೊಲೀಸ್ ವಸತಿ ಗೃಹಗಳು ದುಸ್ಥಿತಿಯಲ್ಲಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೮ (೭೫೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬಹುತೇಕ ನಗರ ಪ್ರದೇಶ ಮತ್ತು ಗ್ರಾಮೀಣ ಪ್ರದೇಶಗಳಲ್ಲಿರುವ ಪೊಲೀಸ್ ವಸತಿ ಗೃಹಗಳು ಪಾಳುಬಿದ್ದು ಶಿಥಿಲಾವಸ್ಥೆ ತಲುಪಿ ಅತ್ಯಂತ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹಳೆಯ ವಸತಿ ಗೃಹಗಳ ನವೀಕರಣ, ಸುಸಜ್ಜಿತ ಹೊಸ ವಸತಿ ಗೃಹಗಳ ನಿರ್ಮಾಣಕ್ಕೆ ಸರ್ಕಾರ ಇದುವರೆಗೆ ಸೂಕ್ತ ಕ್ರಮವಹಿಸದೇ ಇರಲು ಕಾರಣಗಳೇನು ;

(ಇ) ಈ ಪೊಲೀಸ್ ವಸತಿ ಗೃಹಗಳಲ್ಲಿ ಸಾಕಷ್ಟು ಮೂಲಭೂತ ಸೌಕರ್ಯಗಳ ಕೊರತೆ ಇದ್ದು, ಅವುಗಳ ನಿವಾರಣೆಗಾಗಿ ಕಳೆದ ಎರಡು ವರ್ಷಗಳಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಈ ಅವ್ಯವಸ್ಥೆಯನ್ನು ಸರಿಪಡಿಸಲು ಸರ್ಕಾರ ಕಳೆದ ಎರಡು ವರ್ಷಗಳಲ್ಲಿ ವಿನಿಯೋಗಿಸಿರುವ ಅನುದಾನ ಎಷ್ಟು ; ಹಾಗೂ ಕೈಗೊಂಡಿರುವ ಕಾಮಗಾರಿಗಳು ಯಾವುವು ? (ವಿವರ ನೀಡುವುದು)

## ಸರ್ಕಾರಿ ನೌಕರರು ಹಾಗೂ ಅವರ ಅವಲಂಬಿತರಿಗೆ ನಗದು ರಹಿತ ಸೇವೆ ಯೋಜನೆಯ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯ (೭೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ನಗದು ರಹಿತ ವೈದ್ಯಕೀಯ ಸೇವೆ ಕಲ್ಪಿಸುವ ಯೋಜನೆಯಡಿಯಲ್ಲಿ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ಸಿಗುವ ವೈದ್ಯಕೀಯ ಸೇವೆಗಳು ಮತ್ತು ಸೌಲಭ್ಯಗಳಾವುವು ; (ವಿವರ ನೀಡುವುದು)

(ಆ) ಸದರಿ ಯೋಜನೆಯ ಪರಿಣಾಮಕಾರಿ ಅನುಷ್ಠಾನ ಹಾಗೂ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ನಗದು ರಹಿತ ಉತ್ಕೃಷ್ಟ ವೈದ್ಯಕೀಯ ಸೇವೆ ಸಕಾಲದಲ್ಲಿ ಲಭ್ಯವಾಗುವಂತಾಗಲು ಸರ್ಕಾರ ರೂಪಿಸಿರುವ ನಿಯಮ ಹಾಗೂ ಮಾನದಂಡಗಳೇನು ;

(ಇ) ಸದರಿ ಯೋಜನೆಯಡಿ ಸೇವೆ ಒದಗಿಸಲು ನೋಂದಣಿಯಾಗಿರುವ ಆಸ್ಪತ್ರೆಗಳು ಎಷ್ಟು ಮತ್ತು ಯಾವುವು ;

(ಈ) ಪ್ರಸ್ತುತ ಆರ್ಥಿಕ ವರ್ಷದಲ್ಲಿ ಇದುವರೆಗೆ ಎಷ್ಟು ಜನ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರು ನಗದು ರಹಿತ ವೈದ್ಯಕೀಯ ಸೇವೆ ಯೋಜನೆಯ ಲಾಭ ಪಡೆದಿದ್ದಾರೆ; ಮತ್ತು ಅದಕ್ಕೆ ಖರ್ಚಾಗಿರುವ ಅನುದಾನ ಎಷ್ಟು ? (ವಿವರ ನೀಡುವುದು)

## ಆಯವ್ಯಯದಲ್ಲಿ ಘೋಷಣೆ ಮಾಡಿದ ಅನುದಾನ ಬಿಡುಗಡೆ ಆಗದ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೦ (೮೨೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ ಮತ್ತು ೨೦೨೪–೨೫ನೇ ಸಾಲಿನ ಆಯವ್ಯಯದ ಮೊತ್ತ ಎಷ್ಟು ; ಎಷ್ಟು ತೆರಿಗೆ ಸಂಗ್ರಹ ಗುರಿ ಹೊಂದಲಾಗಿತ್ತು ; ಸಂಗ್ರಹವಾಗಿರುವ ತೆರಿಗೆ ಎಷ್ಟು ; ರಾಜ್ಯದ ಆರ್ಥಿಕ ಸ್ಥಿತಿಯ ಸಮಗ್ರ ವಿವರ ನೀಡುವುದು ;

(ಆ) ಸದರಿ ಸಾಲಿನ ಆಯವ್ಯಯದಲ್ಲಿ ಇಲಾಖೆಗಳಿಗೆ / ಯೋಜನೆಗಳಿಗೆ ಘೋಷಣೆ ಮಾಡಿದ್ದ ಮತ್ತು ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ವರ್ಷವಾರು ವಿವರವನ್ನು ಒದಗಿಸುವುದು)

(ಇ) ಆಯವ್ಯಯದಲ್ಲಿ ಘೋಷಿಸಿದ ಅನುದಾನ ಬಿಡುಗಡೆ ಆಗದೆ ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಭಿವೃದ್ಧಿ ಕಾರ್ಯಗಳಿಗೆ ಅಗತ್ಯ ಅನುದಾನವನ್ನು ಬಿಡುಗಡೆ ಮಾಡಲಾಗುವುದೇ ;

(ಈ) ಗ್ಯಾರೆಂಟಿ ಯೋಜನೆ ಮತ್ತು ಅಭಿವೃದ್ಧಿ ಕಾರ್ಯಗಳಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ವಿವರವನ್ನು ವರ್ಷವಾರು / ಇಲಾಖಾವಾರು ಒದಗಿಸುವುದು)

(ಉ) ಸಮಾಜಕಲ್ಯಾಣ ಇಲಾಖೆಗೆ ಬಿಡುಗಡೆ ಮಾಡಿದ್ದ ಅನುದಾನದಲ್ಲಿ ಪರಿಶಿಷ್ಟ ಜಾತಿ/ಪಂಗಡಗಳ ಅಭಿವೃದ್ಧಿಗಾಗಿ ಮೀಸಲಿಟ್ಟಿದ್ದ ಎಷ್ಟು ಅನುದಾನವನ್ನು ಅನ್ಯ ಉದ್ದೇಶಕ್ಕೆ ಬಳಕೆ ಮಾಡಿಕೊಳ್ಳಲಾಗಿದೆ ; ಈ ರೀತಿ ಬಳಕೆ ಮಾಡಿಕೊಳ್ಳಲು ನಿಯಮಾವಳಿಗಳಲ್ಲಿ ಅವಕಾಶ ಇಲ್ಲದಿದ್ದರೂ ಹಣ ಬಳಕೆ ಮಾಡಿಕೊಂಡಿರುವುದನ್ನು ಸರ್ಕಾರ ಯಾವ ರೀತಿ ಸಮರ್ಥಿಸಿಕೊಳ್ಳಲಿದೆ ? (ವಿವರ ನೀಡುವುದು)

**ಗುತ್ತಿಗೆದಾರರಿಗೆ ಬಾಕಿ ಹಣವನ್ನು ಪಾವತಿಸುವ ಬಗ್ಗೆ**

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೧ (೮೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಲಸಂಪನ್ಮೂಲ, ಲೋಕೋಪಯೋಗಿ, ಸಣ್ಣ ನೀರಾವರಿ, ನಗರಾಭಿವೃದ್ಧಿ ಇಲಾಖೆಗಳು ಸೇರಿದಂತೆ ಎಲ್ಲಾ ಇಲಾಖೆಗಳಲ್ಲಿ ಟೆಂಡರ್ ಪಡೆದು ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರಿಗೆ ಸರ್ಕಾರ ಪಾವತಿಸಲು ಬಾಕಿ ಇರುವ ಬಿಲ್ ಮೊತ್ತ ಎಷ್ಟು ; (ಇಲಾಖಾವಾರು ವಿವರ ನೀಡುವುದು)

(ಆ) ಕಳೆದ ೨ ವರ್ಷದಿಂದ ಪಾವತಿಸಿರುವ ಬಿಲ್ ಮೊತ್ತ ಎಷ್ಟು ; (ಇಲಾಖಾವಾರು/ವರ್ಷವಾರು ವಿವರ ನೀಡುವುದು) ರೂ ೫.೦೦ ಕೋಟಿಗಿಂತ ಹೆಚ್ಚು ಬಿಲ್ ಪಾವತಿಸಿರುವ ಗುತ್ತಿಗೆದಾರರ ವಿವರವನ್ನು ಅವರು ನಿರ್ವಹಿಸಿರುವ ಕಾಮಗಾರಿ ಸಹಿತ ಇಲಾಖಾವಾರು ಒದಗಿಸುವುದು ;

(ಇ) ಬಿಲ್ ಪಾವತಿಯಾಗದೆ ಗುತ್ತಿಗೆದಾರರು ಸಂಕಷ್ಟಕ್ಕೆ ಒಳಗಾಗಿದ್ದು, ಬಾಕಿ ಬಿಲ್ ಪಾವತಿಸುವಂತೆ ಆಗ್ರಹಿಸಿ ಸರ್ಕಾರಕ್ಕೆ ಗಡುವು

ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ : ಸರ್ಕಾರ ಗುತ್ತಿಗೆದಾರರ ಜೊತೆ ಸಂಧಾನ ನಡೆಸಿದೆಯೇ ;

(ಈ) ಗುತ್ತಿಗೆದಾರರಿಗೆ ಬಾಕಿ ಬಿಲ್ ಪಾವತಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ ; ಇದಕ್ಕಾಗಿ ಅಗತ್ಯ ಅನುದಾನವನ್ನು ಹೊಂದಿಸಲು ಏನು ಕ್ರಮಕೈಗೊಂಡಿದೆ : ಯಾವ ಕಾಲಮಿತಿಯೊಳಗೆ ಬಾಕಿ ಬಿಲ್ ಮೊತ್ತವನ್ನು ಪಾವತಿಸಲಾಗುವುದು ?

## ಚಿಕ್ಕಮಗಳೂರಿನ ಕಳಸಾಪುರಕ್ಕೆ ಪೊಲೀಸ್ ಠಾಣೆ ಮಂಜೂರಾತಿ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೨ (೮೨೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಗ್ರಾಮಾಂತರ ಪೊಲೀಸ್ ಠಾಣೆಯ ಭೌಗೋಳಿಕ ವ್ಯಾಪ್ತಿ ಎಷ್ಟು ;

(ಆ) ಈ ಪೊಲೀಸ್ ಠಾಣೆಯ ವ್ಯಾಪ್ತಿ ತುಂಬಾ ಹೆಚ್ಚಾಗಿರುವುದರಿಂದ ಸಾರ್ವಜನಿಕರಿಗೆ ಠಾಣೆಗೆ ಬಂದು ಹೋಗಲು ಕಷ್ಟವಾಗುತ್ತಿರುವುದು ಹಾಗೂ ಪೊಲೀಸರಿಗೂ ತಮ್ಮ ಕರ್ತವ್ಯ ನಿರ್ವಹಿಸಲು ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಇ) ಈ ಸಮಸ್ಯೆಯನ್ನು ಪರಿಹರಿಸಲು ಚಿಕ್ಕಮಗಳೂರು ಗ್ರಾಮಾಂತರ ವ್ಯಾಪ್ತಿಯ ಕಳಸಾಪುರ ಗ್ರಾಮದಲ್ಲಿ ಪೋಲಿಸ್ ಠಾಣೆಯನ್ನು ಸ್ಥಾಪಿಸಬೇಕೆನ್ನುವ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಕಳಸಾಪುರ ಗ್ರಾಮದಲ್ಲಿ ಹೊಸ ಪೊಲೀಸ್ ಠಾಣೆ ತೆರೆಯಲಾಗುವುದೆ ; ಈ ಕುರಿತು ಸರ್ಕಾರದ ನಿಲುವೇನು ? (ವಿವರ ಒದಗಿಸುವುದು)

## ತುಂಡು ಗುತ್ತಿಗೆ ನೀಡುವಾಗ ನಡೆದಿರುವ ಅಕ್ರಮಗಳ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೩ (೮೨೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿಗೆ ಕಾವೇರಿ ನೀರು ಪೂರೈಸುವ ಯೋಜನೆಯನ್ನು ಎಷ್ಟು ಹಂತಗಳಲ್ಲಿ ಜಾರಿಗೊಳಿಸಲಾಗಿದೆ ಈವರೆಗೆ ವೆಚ್ಚವಾಗಿರುವ ಹಣ ಎಷ್ಟು ; ಕೈಗೆತ್ತಿಕೊಂಡಿರುವ ಕಾಮಗಾರಿಗಳು ಯಾವುವು ; (ವರ್ಷವಾರು/ಹಂತವಾರು ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳ ಪೈಕಿ ಟೆಂಡರ್ ಕರೆಯಲಾದ ಮತ್ತು ತುಂಡು ಗುತ್ತಿಗೆ ಮೂಲಕ ನೀಡಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳ ಒಟ್ಟು ಮೊತ್ತ ಎಷ್ಟು ; (ಕಾಮಗಾರಿವಾರು ಗುತ್ತಿಗೆದಾರರ ಹೆಸರು ಸಹಿತ ಸಮಗ್ರ ವಿವರ ನೀಡುವುದು)

(ಇ) ತುಂಡು ಗುತ್ತಿಗೆ ಮೂಲಕ ನೀಡಲಾದ ಕಾಮಗಾರಿಗಳಿಗೆ ಸಂಬಂಧಪಟ್ಟಂತೆ ಗುತ್ತಿಗೆದಾರರಿಗೆ ಕಾರ್ಯಾದೇಶ ನೀಡಿದ್ದು ಯಾವಾಗ ; ಕಾಮಗಾರಿ ಪೂರ್ಣಗೊಂಡ ನಂತರ ಗುತ್ತಿಗೆದಾರರಿಗೆ ಎಷ್ಟು ದಿನದಲ್ಲಿ ಹಣ ಪಾವತಿಸಲಾಗಿದೆ ;

(ಈ) ಕೆ.ಟಿ.ಟಿ.ಪಿ. ಕಾಯ್ದೆಯನ್ನು ಉಲ್ಲಂಘಿಸಿ ಟೆಂಡರ್ ತಪ್ಪಿಸಲು ತುಂಡು ಗುತ್ತಿಗೆ ನೀಡುವ ಮೂಲಕ ಹಲವು ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಟೆಂಡರ್ ಕರೆಯದೆ ನೀಡಲಾದ ಕಾಮಗಾರಿಗಳನ್ನು ತಡೆಹಿಡಿಯಲು ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಉ) ಟೆಂಡರ್ ಕರೆಯದೆ ಕೆಲವೇ ಕೆಲವು ಗುತ್ತಿಗೆದಾರರಿಗೆ ನೂರಾರು ಕಾಮಗಾರಿಗಳನ್ನು ಗುತ್ತಿಗೆ ನೀಡಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; ಸದರಿ ಅಧಿಕಾರಿಗಳ

ವಿವರದೊಂದಿಗೆ ; ಈ ಅಕ್ರಮಗಳಿಗೆ ಸಂಬಂಧಪಟ್ಟಂತೆ ಸರ್ಕಾರ ತನಿಖೆಗೆ ಆದೇಶ ನೀಡಿದೆಯೇ ?

## ಚಿಕ್ಕಮಗಳೂರಿನಲ್ಲಿ ಸಿಂಥೆಟಿಕ್ ಟ್ರ್ಯಾಕ್ ನಿರ್ಮಾಣ ಕಾಮಗಾರಿ ಸ್ಥಗಿತಗೊಂಡಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೪ (೮೨೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಸಿಂಥೆಟಿಕ್ ಟ್ರ್ಯಾಕ್ ನಿರ್ಮಾಣ ಮಾಡುವ ಕಾಮಗಾರಿಗೆ ಅನುದಾನ ಮಂಜೂರಾಗಿದ್ದು ಯಾವಾಗ ; ಯಾವ ಯೋಜನೆಯಡಿ ಎಷ್ಟು ಅನುದಾನ ಮಂಜೂರಾಗಿತ್ತು ;

(ಆ) ಕಾಮಗಾರಿ ಪ್ರಾರಂಭಗೊಂಡಿದ್ದು ಯಾವಾಗ ; ಕಾಮಗಾರಿ ಯಾವಾಗ ಪೂರ್ಣಗೊಳ್ಳಬೇಕಾಗಿತ್ತು ;

(ಇ) ಈ ಕಾಮಗಾರಿ ಪ್ರಾರಂಭವಾಗಿ ಸ್ಥಗಿತಗೊಂಡಿರುವುದರಿಂದ ಕ್ರೀಡಾಂಗಣ ಉಪಯೋಗಕ್ಕೆ ಬಾರದೆ ಕ್ರೀಡಾಪಟುಗಳಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಬಂದಿದ್ದರೆ, ಕಾಮಗಾರಿ ಪೂರ್ಣಗೊಳಿಸಲು ಇರುವ ತೊಡಕುಗಳೇನು ;

(ಈ) ಸದರಿ ಕಾಮಗಾರಿಗೆ ಈವರೆಗೂ ಎಷ್ಟು ಅನುದಾನ ವೆಚ್ಚ ಮಾಡಲಾಗಿದೆ ; ಎಷ್ಟು ಹಣ ಉಳಿದಿದೆ ; ಈ ಕಾಮಗಾರಿಗೆ ಹೆಚ್ಚುವರಿ ಅನುದಾನದ ಅಗತ್ಯವಿದೆಯೆ ;

(ಉ) ಇದ್ದಲ್ಲಿ, ಈ ಕಾಮಗಾರಿಗೆ ಅಗತ್ಯವಿರುವ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡಿ ಯಾವ ಕಾಲಮಿತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲಾಗುವುದು ? (ವಿವರ ಒದಗಿಸಿ)

## ಮೈಕ್ರೋ ಫೈನಾನ್ಸ್ ಕಂಪನಿಗಳು ನೀಡುತ್ತಿರುವ ಕಿರುಕುಳಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೦೫ (೭೮೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳು ಸಾಲ ವಸೂಲಾತಿ ಮಾಡಲು ಸಾರ್ವಜನಿಕರಿಗೆ ಬಹಳ ಕಿರುಕುಳ ನೀಡುತ್ತಿದ್ದು, ಇದರಿಂದ ಸಾಲ ಪಡೆದ ಹಲವಾರು ಮೈಕ್ರೋ ಫೈನಾನ್ಸ್ ಕಂಪನಿಗಳ ಕಿರುಕುಳ ತಾಳಲಾರದೆ ಆತ್ಮಹತ್ಯೆಗಳಿಗೆ ಶರಣಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮೈಕ್ರೋ ಫೈನಾನ್ಸ್ ಕಂಪನಿಗಳ ಕಿರುಕುಳ ತಾಳಲಾರದೆ ಆತ್ಮಹತ್ಯೆಗೆ ಒಳಗಾದ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿದೆ ಈ ಪ್ರಕರಣಗಳಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಮೈಕ್ರೋ ಫೈನಾನ್ಸ್ ಕಂಪನಿಗಳು ಸಾಲ ವಸೂಲಾತಿ ಮಾಡಲು ನ್ಯಾಯಯುತ ಮಾರ್ಗಗಳನ್ನು ಅನುಸರಿಸಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ? (ಸಂಪೂರ್ಣ ವಿವರ ನೀಡುವುದು)

## ಅರ್ಕಾವತಿ ನದಿಯ ಪುನಃಶ್ಚೇತನದ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೦೬ (೭೮೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಸುತ್ತಮುತ್ತಲ ಪ್ರದೇಶಗಳಿಗೆ ಜೀವ ಜಲವಾಗಿದ್ದ ಅರ್ಕಾವತಿ ನದಿಯು ನಗರೀಕರಣ ಮತ್ತು ಎಗ್ಗಿಲ್ಲದೆ ತಲೆ ಎತ್ತಿರುವ

ಕೈಗಾರಿಕೆಗಳಿಂದ ಬಹಳಷ್ಟು ಕಲುಷಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬೆಂಗಳೂರು ನಗರದ ಮುಂದಿನ ಭವಿಷ್ಯದ ದೃಷ್ಟಿಯಿಂದ ಕಲುಷಿತಗೊಂಡಿರುವ ಅರ್ಕಾವತಿ ನದಿಯ ಪುನಶ್ಚೇತನಕ್ಕೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಒಳಮೀಸಲಾತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೭ (೭೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾನ್ಯ ಸರ್ವೋಚ್ಚ ನ್ಯಾಯಾಲಯವು ಆಗಸ್ಟ್, ೨೦೨೪ರಂದು ಒಳಮೀಸಲಾತಿ ನೀಡುವ ಪರವಾಗಿ ತೀರ್ಪು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಒಳಮೀಸಲಾತಿ ಜಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಸರ್ಕಾರ ರಚಿಸಿದ ಆಯೋಗ ವರದಿ ನೀಡಿದೆಯೇ; ಇಲ್ಲದಿದ್ದಲ್ಲಿ ಯಾವಾಗ ವರದಿ ಪಡೆಯಲಾಗುವುದು ? (ವಿವರ ನೀಡುವುದು)

## ದೇವಸ್ಥಾನದ ಜಾಗ ಒತ್ತುವರಿಗೆ ನೀರಿನ ಸಂಪರ್ಕ ನೀಡಿರುವ ಬಗ್ಗೆ

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೮ (೭೫೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫, ಜನವರಿ ೯ರ ಬಳಿಕ ಬೆಂಗಳೂರು ನಗರ ಜಿಲ್ಲೆಯ ನೀಲಸಂದ್ರ ಗ್ರಾಮದ ಸರ್ವೇ ನಂ.೭೯ ರಲ್ಲಿ ೧೫ ಎಕರೆ ೧೨

ಗುಂಟೆ ಜಮೀನಿನಲ್ಲಿ ಮನೆ ಕಟ್ಟಲು ಅನುಮತಿ ನೀಡಿದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳುವಂತೆ ಕೋರಿ ಬಿ.ಬಿ.ಎಂ.ಪಿ ಆಯುಕ್ತರಿಗೆ ಮುಜರಾಯಿ ಆಯುಕ್ತರು ಪತ್ರ ಬರೆದಿರುತ್ತಾರೆಯೇ ; (ವಿವರ ನೀಡುವುದು)

(ಆ) ಸದರಿ ಜಮೀನಿನಲ್ಲಿ ಅಕ್ರಮವಾಗಿ ನಿರ್ಮಿಸಿರುವ ಕಟ್ಟಡಗಳಿಗೆ ನೀರಿನ ಸಂಪರ್ಕ ಹಾಗೂ ಒಳಚರಂಡಿ ವ್ಯವಸ್ಥೆಯನ್ನು ನೀಡಿದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳದಿರಲು ಕಾರಣವೇನು ; (ವಿವರ ನೀಡುವುದು)

(ಇ) ಅಧಿಕಾರಿಗಳ ಮೇಲೆ ಅಗತ್ಯ ಇಲಾಖಾ ಕ್ರಮ ಕೈಗೊಳ್ಳುವಂತೆ ಇಲ್ಲವಾದಲ್ಲಿ, ಅಂತಹಾ ಅಧಿಕಾರಿಗಳ ಅಮಾನತ್ತು ಮಾಡಿ ಕ್ರಮ ಕೈಗೊಳ್ಳದಿರಲು ಕಾರಣವೇನು ? (ವಿವರ ನೀಡುವುದು)

## ಕೆರೆ ಒತ್ತುವರಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೯ (೭೫೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಕೆರೆ ಒತ್ತುವರಿ ಪ್ರಕರಣಗಳ ಸಂಖ್ಯೆ ಎಷ್ಟು ; ಸರ್ಕಾರದ ಗಮನಕ್ಕೆ ಬಂದಿದೆಯೇ; ಯಾವ ಯಾವ ಕೆರೆಗಳನ್ನು ಒತ್ತುವರಿ ಮಾಡಲಾಗಿದೆ ; (ವಿವರ ನೀಡುವುದು)

(ಆ) ಪರಪ್ಪನ ಅಗ್ರಹಾರ ಕೆರೆಯ ವಿಸ್ತೀರ್ಣವೆಷ್ಟು; ಪ್ರಸ್ತುತ ಇರುವ ಕೆರೆಯ ವಿಸ್ತೀರ್ಣವೆಷ್ಟು ; (ವಿವರ ನೀಡುವುದು)

(ಇ) ಪರಪ್ಪನ ಅಗ್ರಹಾರ ಕೆರೆಯ ಅಭಿವೃದ್ಧಿಗೆ ಕಳೆದ ೩ ವರ್ಷಗಳಲ್ಲಿ ಎಷ್ಟು ಮೊತ್ತ ವೆಚ್ಚ ಮಾಡಲಾಗಿದೆ ; ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ವಾಕಿಂಗ್ ಟ್ರ್ಯಾಕ್ ಮಾಡಲು ಎಷ್ಟು ಮೊತ್ತ ವೆಚ್ಚ ಮಾಡಲಾಗಿದೆ ;

(ಈ) ಪರಪ್ಪನ ಅಗ್ರಹಾರ ಕೆರೆಯಲ್ಲಿ ಸಂಪೂರ್ಣವಾಗಿ ಗಿಡ ಗಂಟೆಗಳು ಬೆಳೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕೆರೆಯ ಸ್ವಚ್ಛತೆ ಹಾಗೂ ಕಳೆ ತೆಗೆಯಲು ಕಳೆದ ೨ ವರ್ಷದಲ್ಲಿ ವೆಚ್ಚ ಮಾಡಲಾದ ಮೊತ್ತವೆಷ್ಟು ? (ವಿವರ ನೀಡುವುದು)

## ಒಳನಾಡು ಪ್ರವಾಸೋದ್ಯಮದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೧೦ (೭೫೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಳನಾಡು ನೀರಿನಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸಲು ಕೈಗೊಂಡ ಕ್ರಮಗಳೇನು ; ರಾಜ್ಯದಲ್ಲಿ ಒಟ್ಟು ಎಷ್ಟು ಬೋಟ್ ಹೌಸ್‌ಗಳು ನೋಂದಣಿಯಾಗಿದಾವೆ ; (ವಿವರ ನೀಡುವುದು)

(ಆ) ರಾಜ್ಯದ ಕರಾವಳಿ ಸಮುದ್ರ ತೀರವನ್ನು ಗೋವಾ ಮಾದರಿಯಲ್ಲಿ ಪ್ರವಾಸೋದ್ಯಮ ಕೇಂದ್ರವನ್ನಾಗಿ ಬೆಳೆಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕರಾವಳಿ ಭಾಗದ ಸಂಸ್ಕೃತಿ, ಆಚರಣೆ, ದೇವಸ್ಥಾನ, ಸಮುದ್ರ ತೀರ, ಜಾತ್ರೆ, ಕಂಬಳ, ಕೋಲ ಗಳನ್ನೊಳಗೊಂಡ ಸಮಗ್ರ ಪ್ರವಾಸೋದ್ಯಮಗಳ ಅವಕಾಶಗಳನ್ನು ಬಳಸಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಪ್ರವಾಸೋದ್ಯಮ ಕ್ಷೇತ್ರವು ರಾಜ್ಯದಲ್ಲಿ ದೊಡ್ಡ ಪ್ರಮಾಣದಲ್ಲಿ ಪ್ರತ್ಯಕ್ಷ ಮತ್ತು ಪರೋಕ್ಷ ಉದ್ಯೋಗ ಸೃಷ್ಟಿ ಮಾಡುವುದಿದ್ದು, ಈ ಕುರಿತು ಸರ್ಕಾರದ ನಿಲುವೇನು ?

## ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೧೧ (೭೬೦) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಅದರಲ್ಲಿ ಖಾಯಂ ಉದ್ಯೋಗಿಗಳ ಅರಕಾಲಿಕ ಉದ್ಯೋಗಿಗಳ, ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉದ್ಯೋಗಿಗಳ ಹಾಗೂ ಹೊರ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು ; ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಪಿಲಿಕುಳ ನಿಸರ್ಗಧಾಮದಲ್ಲಿ ೨೦ ವರ್ಷಗಳಿಗಿಂತಲೂ ಹೆಚ್ಚು ಸೇವೆ ಸಲ್ಲಿಸಿದ ನೌಕರರನ್ನು ಖಾಯಂಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ಇವರುಗಳನ್ನು ಯಾವ ಕಾಲಮಿತಿಯೊಳಗೆ ಖಾಯಂಗೊಳಿಸಲಾಗುವುದು ; (ವಿವರ ನೀಡುವುದು)

(ಇ) ಪಿಲಿಕುಳ ನಿಸರ್ಗಧಾಮದ ಕಳೆದ ೨ ವರ್ಷಗಳ ಆದಾಯ ಮತ್ತು ವೆಚ್ಚಗಳೆಷ್ಟು ? (ವಿವರ ನೀಡುವುದು)

## ಬೆಂಗಳೂರು ನಗರ ಹಾಗೂ ಹೊರವಲಯದ ಕೆರೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೭೧೨ (೮೨೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿರುವ ಹಾಗೂ ಹೊರವಲಯದಲ್ಲಿರುವ ಕೆರೆಗಳ ಅಭಿವೃದ್ಧಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಕಮ್ಮಸಂದ್ರ ಮತ್ತು ಹೆಬ್ಬಗೋಡಿಯ ಕೆರೆಗಳ ಹೂಳು ತೆಗೆದು ವರ್ಷಗಳೇ ಕಳೆದರೂ ಕೆರೆಗಳಿಗೆ ನೀರು ಹರಿಸದೆ ಅಭಿವೃದ್ಧಿ ಪಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸದರಿ ಕೆರೆಗಳಿಗೆ ನೀರು ಹರಿಸಲು ಯಾವ ಯೋಜನೆಗಳನ್ನು ರೂಪಿಸಲಾಗಿದೆ ;

(ಈ) ರೂಪಿಸಿದ್ದಲ್ಲಿ, ಸದರಿ ಯೋಜನೆಗಳನ್ನು ಕಾರ್ಯರೂಪಕ್ಕೆ ತರಲಾಗುವುದು ಯಾವಾಗ ?

## ರಾಜ್ಯದಲ್ಲಿ ಸೈಬರ್ ಅಪರಾಧ ಮತ್ತು ಆರ್ಥಿಕ ಅಪರಾಧ ಪ್ರಕರಣಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೭೧೩ (೮೩೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಸೈಬರ್ ಅಪರಾಧ ಮತ್ತು ಆರ್ಥಿಕ ಅಪರಾಧ ಪ್ರಕರಣಗಳು ದಾಖಲಾಗಿವೆ: ಅವುಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ಆರೋಪಿಗಳನ್ನು ಪತ್ತೆ ಹಚ್ಚಲಾಗಿದೆ ;

(ಆ) ಸೈಬರ್ ಅಪರಾಧ ಪ್ರಕರಣಗಳು ಹೆಚ್ಚಾಗಿ ವರದಿಯಾಗುತ್ತಿರುವ ಬೆಂಗಳೂರು ನಗರದಲ್ಲಿ ಎಷ್ಟು ಸೈಬರ್ ಮತ್ತು ಆರ್ಥಿಕ ಅಪರಾದಗಳು ಕಂಡು ಬಂದಿವೆ ; ಎಲ್ಲೆಲ್ಲಿ ಪೋಲಿಸ್ ಠಾಣೆಗಳನ್ನು ಸ್ಥಾಪಿಸಲಾಗಿದೆ ;

(ಇ) ಎಲ್ಲಾ ಠಾಣೆಗಳಲ್ಲಿ ಅಗತ್ಯ ಪ್ರಮಾಣದಲ್ಲಿ ಸಿಬ್ಬಂಧಿ ಸಾಧನ ಸಲಕರಣೆ ಮತ್ತು ಯಂತ್ರೋಪಕರಣಗಳು ಮುಂತಾದ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆಯೇ ;

(ಈ) ಸೈಬರ್ ಅಪರಾಧಗಳನ್ನು ಪತ್ತೆಹಚ್ಚಲು ಅಗತ್ಯವಿರುವ ತಾಂತ್ರಿಕ ಪರಿಣಿತರು, ಮಾಹಿತಿ ತಂತ್ರಜ್ಞರ ಸೇವೆ ಅವಶ್ಯಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಹಾಗಿದ್ದಲ್ಲಿ, ಪರಿಣಿತರನ್ನು ನೇಮಕ ಮಾಡಲು ಸರ್ಕಾರವು ಕೈಗೊಂಡ ಕ್ರಮಗಳೇನು ?

## ಬೆಂಗಳೂರು ನಗರದಲ್ಲಿ ದಿನೇ ದಿನೇ ಟ್ರಾಫಿಕ್ ಸಮಸ್ಯೆ ಹೆಚ್ಚಾಗುತ್ತಿರುವ ಕುರಿತು

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೭೧೪ (೮೩೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ದಿನೇ ದಿನೇ ಟ್ರಾಫಿಕ್ ಸಮಸ್ಯೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಟ್ರಾಫಿಕ್ ನಿಯಂತ್ರಣಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಮಡಿವಾಳ ಜಂಕ್ಷನ್ ನಿಂದ ಎಲೆಕ್ಟ್ರಾನಿಕ್ ಸಿಟಿ ಫ್ಲೈ ಓವರ್ ಹತ್ತಲು ಉಂಟಾಗುತ್ತಿರುವ ಟ್ರಾಫಿಕ್ ಸಮಸ್ಯೆ ಬಗೆಹರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ೭ನೇ ವೇತನ ಆಯೋಗದ ವರದಿಯ ಅನುಷ್ಠಾನದ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೭೧೫ (೮೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ನೌಕರರಿಗೆ ೭ನೇ ವೇತನ ಆಯೋಗದ ವರದಿಯನ್ನು ಅನುಷ್ಠಾನಗೊಳಿಸಿದೆಯೇ ;

(ಆ) ೭ನೇ ವೇತನ ಆಯೋಗದ ವರದಿಯನ್ನು ಯು.ಜಿ.ಸಿ., ಐ.ಸಿ.ಎ.ಆರ್., ಎ.ಐ.ಸಿ.ಟಿ.ಇ., ವೇತನ ಶ್ರೇಣಿ ಪಡೆಯುವ ಸ್ವಾಯತ್ತ ಸಂಸ್ಥೆಯ ನಿವೃತ್ತ ನೌಕರರಿಗೂ ವಿಸ್ತರಿಸಿದೆಯೇ ;

(ಇ) ಹಾಗಿದ್ದಲ್ಲಿ, ದಿ:೦೧.೦೭.೨೦೨೨ ರಿಂದ ನಿವೃತ್ತರಾದವರಿಗೆ ಈ ಸೌಲಭ್ಯ ವಿಸ್ತರಿಸಲಾಗಿದೆಯೇ ;

(ಈ) ೭ನೇ ವೇತನ ಆಯೋಗದ ವರದಿ ಕಂಡಿಕೆ ೧೨.೧ ರ ಅನ್ವಯ ಪರಿಷ್ಕೃತ ನಿವೃತ್ತಿ ವೇತನ ನೀಡಲು ಸರ್ಕಾರ ಆದೇಶ ನೀಡಿದೆಯೇ ; ವಿಳಂಬವಾಗಿದ್ದಲ್ಲಿ, ಸಂಬಂಧಪಟ್ಟ ಆದೇಶವನ್ನು ಯಾವಾಗ ಹೊರಡಿಸಲಾಗುವುದು ? (ಮಾಹಿತಿ ಒದಗಿಸುವುದು)

## ಕೆ.ಪಿ.ಎಸ್.ಸಿ. ಯನ್ನು ಯು.ಪಿ.ಎಸ್.ಸಿ. ಮಾದರಿಯಲ್ಲಿ ಪುನರ್ ರಚಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೬ (೭೭೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಇತ್ತೀಚಿನ ದಿನಗಳಲ್ಲಿ ನಡೆಸುತ್ತಿರುವ ಪರೀಕ್ಷೆಗಳಲ್ಲಿ ಹೆಚ್ಚಿನ ಅಪಸ್ವರಗಳು ಬರುತ್ತಿರುವ ಮತ್ತು ಆಯೋಗದ ಲೋಪಗಳು ಸರ್ಕಾರದ ಗಮನಕ್ಕೆ ಬಂದಿವೆಯೇ ; ಇದ್ದಲ್ಲಿ, ಇದಕ್ಕೆ ಸರ್ಕಾರದ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಆ) ಕರ್ನಾಟಕದಲ್ಲಿ ಕನ್ನಡವೇ ಆಡಳಿತ ಭಾಷೆಯಾಗಿಯೂ ಸಹ ಕನ್ನಡ ಭಾಷೆಯಲ್ಲಿನ ಪ್ರಶ್ನೆಗಳಲ್ಲಿಯೇ ತಪ್ಪುಗಳಾಗುತ್ತಿರುವುದು ಎಷ್ಟು ಸರಿ ; ಇದಕ್ಕೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ ಹಾಗೂ ಅವರ ಮೇಲೆ ತೆಗೆದುಕೊಂಡ ಕಠಿಣ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಇ) ಇತ್ತೀಚೆಗೆ ಪರೀಕ್ಷೆಗಳನ್ನು ಬರೆದು ಅದರಲ್ಲಿ ಬಾಧಿತರಾದ ಅಭ್ಯರ್ಥಿಗಳಿಗೆ ನ್ಯಾಯ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಈ) ಕೇಂದ್ರ ಸರ್ಕಾರದ ಯು.ಪಿ.ಎಸ್.ಸಿ ಮಾದರಿಯಲ್ಲಿಯೇ ಪರೀಕ್ಷೆಗಳನ್ನು ನಡೆಸಲು ಮತ್ತು ಅದಕ್ಕೆ ಸಂಬಂಧಿಸಿದ ಕ್ರಮಗಳನ್ನು ತೆಗೆದುಕೊಳ್ಳಲು ಸರ್ಕಾರದ ವತಿಯಿಂದ ಒಂದು ಅಧಿಕಾರಿಗಳ ತಂಡವನ್ನು ಯು.ಪಿ.ಎಸ್.ಸಿ ಗೆ ಕಳುಹಿಸಿ ಅಧ್ಯಯನವನ್ನು ನಡೆಸಲು ಸರ್ಕಾರದ ತೀರ್ಮಾನಗಳೇನು ? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

## ಗಾಂಧಿ ಬಜಾರ್ ಮುಖ್ಯ ರಸ್ತೆಯನ್ನು Directorate of Urban Land Transport ಯೋಜನೆಯಡಿ ಮರು ಅಭಿವೃದ್ಧಿ ಕಾರ್ಯದ ಬಗ್ಗೆ

**ಶ್ರೀ ಹೆಚ್.ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :–**

೭೧೭ (೭೬೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದಿನ ಸರ್ಕಾರದ ಅವಧಿಯಲ್ಲಿ ಗಾಂಧಿಬಜಾರ್ ಮುಖ್ಯರಸ್ತೆಯನ್ನು Directorate of Urban Land Transport ಯೋಜನೆ ಅಡಿ ಮರು ಅಭಿವೃದ್ಧಿ ಕಾರ್ಯವು ಚಾಲನೆಗೊಂಡು ಸದರಿ ಕಾಮಗಾರಿ ಇನ್ನೂ ಮುಗಿಯದಿರುವ ಕಾರಣ ಆ ರಸ್ತೆ ಬಳಸುತ್ತಿರುವ ಎಲ್ಲಾ ಸಾರ್ವಜನಿಕರಿಗೆ ಉಂಟಾಗುತ್ತಿರುವ ಅನಾನುಕೂಲತೆ ಬಗ್ಗೆ ಸರ್ಕಾರಕ್ಕೆ ಅರಿವಿದೆಯೇ ;

(ಆ) ಸದರಿ ಅಭಿವೃದ್ಧಿ ಕಾರ್ಯ ಯಾವಾಗ ಪ್ರಾರಂಭವಾಯಿತು ಹಾಗೂ ಅದರ ಯೋಜನಾ ವೆಚ್ಚವೇನು ;

(ಇ) ಕಾಮಗಾರಿ ಪ್ರಾರಂಭವಾಗಿ ವರ್ಷಗಳೇ ಕಳೆದಿದ್ದರೂ ಅದನ್ನು ಪೂರ್ಣಗೊಳಿಸಲು ವಿಳಂಬವಾಗುತ್ತಿರುವ ಕಾರಣವೇನು ; ಒಂದು ವೇಳೆ ಕಾಮಗಾರಿ ಪೂರ್ಣಗೊಂಡಿದ್ದರೆ, ಮುಕ್ತಾಯಗೊಂಡ ದಿನಾಂಕ ಯಾವುದು ;

(ಈ) ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮುನ್ನ ಉದ್ದೇಶಿತ ಉದ್ದೇಶದಂತೆ ಸದರಿ ರಸ್ತೆಯಲ್ಲಿ ಎಷ್ಟು ಜನ ವರ್ತಕರಿಗೆ ವ್ಯಾಪಾರ ಮಾಡಲು ಅಧಿಕೃತವಾಗಿ ಅನುಮತಿ ನೀಡಲಾಗಿದೆ ; (ವಿವರ ಒದಗಿಸುವುದು)

(ಉ) ಅಭಿವೃದ್ಧಿ ಹೆಸರಿನಲ್ಲಿ ಅವೈಜ್ಞಾನಿಕವಾಗಿ ಕೈಗೊಂಡ ಕಾಮಗಾರಿಯಿಂದಾಗಿ ಅನಾನುಕೂಲಕ್ಕೊಳಗಾದ ಅಲ್ಲಿನ ವರ್ತಕರ ಸಂಘದಿಂದ ಬಿ.ಬಿ.ಎಂ.ಪಿ ಗೆ ಸಲ್ಲಿಸಲಾದ ದಿನಾಂಕ:೦೪.೦೧.೨೦೨೫ರ ದೂರಿನ ಸಂಬಂಧ ಕೈಗೊಳ್ಳಲಾದ ಕ್ರಮವೇನು ? (ವಿವರಣೆ ಒದಗಿಸುವುದು)

## ಬಿಡಿಎ ವತಿಯಿಂದ ಪರಿಹಾರ ರೂಪದಲ್ಲಿ ನಿವೇಶನ ಹಂಚಿಕೆಯಲ್ಲಾಗಿರುವ ಲೋಪದ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೧೮ (೭೯೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಬಿಟಿಎಂ ಲೇಔಟ್‌ನ ೪ನೇ ಹಂತದಲ್ಲಿ ಅಧಿಸೂಚನೆ ಮಾಡದೇ ಖಾಸಗಿಯವರ ಜಮೀನನ್ನು ರಸ್ತೆಗೆ ಬಳಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಪ್ರಾಥಮಿಕ ಹಾಗೂ ಅಂತಿಮ ಅಧಿಸೂಚನೆಯಲ್ಲಿ ಸೇರಿಸದೇ ಜಮೀನನ್ನು ಬಳಸಿಕೊಳ್ಳಲು ಕಾರಣಗಳೇನು ; (ಸದರಿ ಜಮೀನಿನ ವಿವರ ಹಾಗೂ ಮಾಲೀಕರಿಗೆ ಪರಿಹಾರ ರೂಪದಲ್ಲಿ ನೀಡಿದ ನಿವೇಶನದ ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಜಮೀನಿನ ಮಾಲೀಕರಿಗೆ ಪರಿಹಾರ ರೂಪದಲ್ಲಿ ನಿವೇಶನ ಹಂಚಿಕೆ ಮಾಡುವಾಗ ಅನುಸರಿಸಿದ ಕ್ರಮಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸರ್ಕಾರದ ಆರ್ಥಿಕ ನಷ್ಟಕ್ಕೆ ಕಾರಣವಾದ ನೌಕರರು ಹಾಗೂ ಅವರ ಮೇಲೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕೆ.ಎ.ಎಸ್. ಅಭ್ಯರ್ಥಿಗಳಿಗೆ ಆದ ಅನ್ಯಾಯದ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೭೧೯ (೮೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಲೋಕ ಸೇವಾ ಆಯೋಗವು ಡಿಸೆಂಬರ್ ೨೯ರಂದು ನಡೆಸಿದ ಕೆ.ಎ.ಎಸ್. ಪೂರ್ವ ಭಾವಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳಲ್ಲಿ ಸಾಕಷ್ಟು ಲೋಪದೋಷಗಳಿದ್ದರೂ ಸಹ ಅಧಿಕಾರಿಗಳು ತಪ್ಪು ಮಾಹಿತಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೆ.ಎ.ಎಸ್. ಮರು ಪರೀಕ್ಷೆಯಲ್ಲಿ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆ ಅನ್ಯಾಯವಾಗಿ ದೊಡ್ಡ ಮಟ್ಟದಲ್ಲಿ ಅಭ್ಯರ್ಥಿಗಳಿಂದ ಮತ್ತು ವಿವಿಧ ಕನ್ನಡಪರ ಸಂಘಟನೆಗಳಿಂದ ಹೋರಾಟಗಳು ಮತ್ತು ಸುದ್ದಿ ಮಾಧ್ಯಮಗಳಲ್ಲಿ ಬರುತ್ತಿದ್ದರೂ ಇದುವರೆಗೂ ಯಾವುದೇ ನಿರ್ಧಾರ ಕೈಗೊಳ್ಳದೇ ಇರಲು ಕಾರಣವೇನು ;

(ಇ) ಈ ಕೆ.ಎ.ಎಸ್. ಮರು ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳ ಭಾಷಾಂತರದಲ್ಲಿ ಒಟ್ಟು ಎಷ್ಟು ಲೋಪ ದೋಷಗಳಿರುವುದನ್ನು ವಿಷಯ ತಜ್ಞರು ಪತ್ತೆ ಹಚ್ಚಿದ್ದಾರೆ ಹಾಗೂ ಯಾವ ಯಾವ ಪ್ರಶ್ನೆಗಳಿಗೆ ಗ್ರೇಸ್ ಅಂಕಗಳನ್ನು ನೀಡಲಾಗಿದೆ ; (ವಿಷಯ ತಜ್ಞರ ಹೆಸರುಗಳ ಸಮೇತ ಸಮಿತಿಯ ಸಂಪೂರ್ಣ ವಿವರ ನೀಡುವುದು)

(ಈ) ಪ್ರತಿ ಭಾರಿ ಕೆ.ಎ.ಎಸ್. ಪೂರ್ವಭಾವಿ ಪರೀಕ್ಷೆ ಫಲಿತಾಂಶದ ಜೊತೆಗೆ ಕಟ್ ಆಫ್ ಅಂಕಗಳನ್ನು ಕೂಡ ಪ್ರಕಟಿಸಲಾಗುತ್ತಿತ್ತು ಆದರೆ ಆಯೋಗವು ಈ ಬಾರಿ ಕಟ್ ಆಫ್ ಅಂಕಗಳನ್ನು ಬಿಡುಗಡೆ ಮಾಡದೇ ಇರಲು ಕಾರಣವೇನು ;

(ಉ) ಈ ಪರೀಕ್ಷೆಗೆ ಒಟ್ಟು ಎಷ್ಟು ಜನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಾರೆ ; ಸಂಗ್ರಹವಾದ ಒಟ್ಟು ಅರ್ಜಿ ಶುಲ್ಕ ಎಷ್ಟು ; ಎಷ್ಟು ಜನ ಅಭ್ಯರ್ಥಿಗಳು ಪೂರ್ವಭಾವಿ ಪರೀಕ್ಷೆಗೆ ಹಾಜರಾಗಿದ್ದಾರೆ ? (ಪರೀಕ್ಷೆಯ ವೆಚ್ಚದ ಕುರಿತು ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

## ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ವಿವಿಧ ವೃಂದಗಳಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿಗೆ ಮಂಜೂರಾದ ಹುದ್ದೆಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೭೨೦ (೮೭೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ವಿವಿಧ ವೃಂದಗಳಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಸದರಿ ನೇರ ನೇಮಕಾತಿ ಮತ್ತು ಮುಂಬಡ್ತಿಯ ಹುದ್ದೆಗಳಲ್ಲಿ ಕಲ್ಯಾಣ ಕರ್ನಾಟಕದ ರಾಜ್ಯ ಮಟ್ಟದ ಸ್ಥಳೀಯ ವೃಂದದಲ್ಲಿ ಶೇ.೮ ರಷ್ಟು ಮೀಸಲಿರಿಸಿದ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಸದರಿ ವೃಂದಗಳಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಮೂಲಕ ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ಮಾಹಿತಿ ನೀಡುವುದು)

(ಈ) ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ದಾಖಲಾದ ಡಬ್ಲ್ಯೂಪಿ/೧೬೮೬೮/೨೦೨೦ರಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:೦೧.೦೮.೨೦೨೩ರ ತೀರ್ಪಿನನ್ವಯ ಸಚಿವಾಲಯದ ಸಹಾಯಕ ವೃಂದದ ಜೇಷ್ಠತೆಯನ್ನು ಮರು ನಿಗದಿ ಪಡಿಸಿದ್ದು, ಉಳಿದ ವೃಂದಗಳ ಜೇಷ್ಠತೆಯನ್ನು ನಿಗದಿ ಪಡಿಸಿ ಪ್ರಕಟಿಸದಿರಲು ಕಾರಣವೇನು; ಈ ಕುರಿತಂತೆ ಪುನರ್ ಪರಿಶೀಲನಾ ಅರ್ಜಿಯನ್ನು ಮಾನ್ಯ ನ್ಯಾಯಾಲಯದಲ್ಲಿ ಸಲ್ಲಿಸಲು ಸರ್ಕಾರವು ನಿರ್ಧರಿಸಿದೆಯೇ: ಇದರ ಬಗ್ಗೆ ಸರ್ಕಾರದ ಮುಂದಿನ ನಿಲುವೇನು ?

## ಸಂವಿಧಾನದ ಆರ್ಟಿಕಲ್–೩೭೧ (ಜೆ) ತಿದ್ದುಪಡಿ ಅನ್ವಯ ಕಲ್ಯಾಣ ಕರ್ನಾಟಕ ಭಾಗದ ಪೊಲೀಸ್ ಇಲಾಖೆಯ ಸಿಬ್ಬಂದಿಗಳಿಗೆ ಮುಂಬಡ್ತಿಯಾಗದೆ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೭೨೧ (೮೭೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಂವಿಧಾನದ ಆರ್ಟಿಕಲ್–೩೭೧ (ಜೆ) ತಿದ್ದುಪಡಿ ಅಧಿನಿಯಮ ಜಾರಿಯಿಂದ ಕಲ್ಯಾಣ ಕರ್ನಾಟಕ ಪ್ರದೇಶದ ಪೊಲೀಸ್ ಇಲಾಖೆಯ ನೌಕರರಿಗೆ ಮುಂಬಡ್ತಿಯಲ್ಲಿ ಒಂದೊಂದು ಘಟಕಗಳು ಒಂದೊಂದು ರೀತಿಯಾಗಿ ಮೀಸಲಾತಿ ಕಲ್ಪಿಸಿ ಮುಂಬಡ್ತಿಯಲ್ಲಿ ಪರಸ್ಥಳಿಯರಂತೆ ಸ್ಥಳೀಯ ವೃಂದದ ನೌಕರರಿಗೆ ಸಾಮಾನ್ಯ ಮುಂಬಡ್ತಿಗಳು ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಯಾವ ಕ್ರಮಕೈಗೊಳ್ಳಲಾಗಿದೆ ;

(ಆ) ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ವೈರ್‌ಲೆಸ್ ಘಟಕದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ ಹೆಚ್ ಸಿ ವೈರ್‌ಲೆಸ್ ರವರಿಗೆ ಮುಂಬಡ್ತಿಗಳು ದೊರೆಯದೇ

ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ರಾಜ್ಯದ ಎಲ್ಲಾ ಪೊಲೀಸ್ ಕಮಿಷನರೇಟ್ ಕಂಟ್ರೋಲ್ ರೂಮ್‌ಗಳಿಗೆ ೮–೧೦ ಎಎಸ್‌ಐ ವೈರ್‌ಲೆಸ್ ಹಾಗೂ ಜಿಲ್ಲಾ ಕಂಟ್ರೋಲ್ ರೂಮ್‌ಗಳಲ್ಲಿ ೧೦–೧೨ ಎಎಸ್‌ಐ ವೈರ್‌ಲೆಸ್ ಹುದ್ದೆಗಳು ಮಂಜೂರಾತಿ ಇದ್ದು, ಆದರೆ ಕಲ್ಯಾಣ ಕರ್ನಾಟಕ ಪ್ರದೇಶದ ಕಲಬುರಗಿ ನಗರ ಕಂಟ್ರೋಲ್ ರೂಮಿಗೆ ಕೇವಲ ೪ ಎಎಸ್‌ಐ ಹಾಗೂ ಯಾದಗಿರಿ, ವಿಜಯನಗರ ಜಿಲ್ಲಾ ಕಂಟ್ರೋಲ್ ರೂಮಿಗೆ ಕೇವಲ ೬ ಎಎಸ್‌ಐ ವೈರ್‌ಲೆಸ್ ಕಡಿಮೆ ಹುದ್ದೆಗಳಿರುವುದು ಎಲ್ಲಾ ಕಂಟ್ರೋಲ್ ರೂಮ್‌ಗಳಂತೆ ಎಎಸ್‌ಐ ವೈರ್‌ಲೆಸ್ ಹುದ್ದೆಗಳು ಹೆಚ್ಚಿಸಲು ಸರ್ಕಾರ ಏನಾದರು ಕ್ರಮಕೈಗೊಂಡಿದಿಯೇ ;

(ಈ) ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ವೈರ್‌ಲೆಸ್ ಘಟಕದಲ್ಲಿ ಪ್ರಸ್ತುತ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಹಾಗೂ ಕಲ್ಯಾಣ ಕರ್ನಾಟಕೇತರ ವೃಂದದಲ್ಲಿ ಎಷ್ಟು ಎಎಸ್‌ಐ ವೈರ್‌ಲೆಸ್ ಹುದ್ದೆಗಳು ಖಾಲಿ ಇವೆ ; ಎರಡು ವೃಂದದಲ್ಲಿ ಎಷ್ಟು ಹೆಚ್.ಸಿ ವೈರ್‌ಲೆಸ್‌ರವರುಗಳು ಮುಂಬಡ್ತಿಗೆ ಅರ್ಹರಿದ್ದಾರೆ ?

## ಕಲ್ಯಾಣ ಕರ್ನಾಟಕ ವೃಂದದ ೯೭ ಪಿಡಿಓ ಹುದ್ದೆಗಳಿಗೆ ನಡೆದ ಪರೀಕ್ಷೆಯ ವೇಳೆ ಉಂಟಾದ ಗೊಂದಲದ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೭೨೨ (೮೭೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನವೆಂಬರ್ ೧೭, ೨೦೨೪ ರಂದು ರಾಯಚೂರು ಜಿಲ್ಲೆ, ಸಿಂಧನೂರಿನ ಸರ್ಕಾರಿ ಪದವಿ ಕಾಲೇಜು ಪರೀಕ್ಷಾ ಕೇಂದ್ರದಲ್ಲಿ ನಡೆದಿದ್ದ ಕಲ್ಯಾಣ ಕರ್ನಾಟಕ ವೃಂದದ ೯೭ ಪಿಡಿಓ ಹುದ್ದೆಗಳಿಗೆ ನಡೆದ ಪರೀಕ್ಷೆಯ ವೇಳೆ ಉಂಟಾದ ಗೊಂದಲದ ಬಗ್ಗೆ ಸದನದಲ್ಲಿ

ಕೇಳಲಾದ ಪ್ರಶ್ನೆಗೆ ಇಲಾಖೆಯ ಅಧಿಕಾರಿಗಳು ಸದನಕ್ಕೆ ಸುಳ್ಳು ಮಾಹಿತಿ ನೀಡಿದ್ದು ಪರೀಕ್ಷೆಯಲ್ಲಿ ಪ್ರಶ್ನೆ ಪತ್ರಿಕೆ ನೀಡುವಲ್ಲಿ ವಿಳಂಬವೇ ಆಗಿಲ್ಲ ಹಾಗೂ ಯಾವುದೇ ರೀತಿಯ ಪ್ರಶ್ನೆಪತ್ರಿಕೆ ಸೋರಿಕೆಯಾಗಿಲ್ಲವೆಂದು ರಾಜ್ಯದ ಲಕ್ಷಾಂತರ ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳಿಗೆ ಸುಳ್ಳು ಮಾಹಿತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಆ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು ;

(ಆ) ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾದಗಿರಿ ಮೂಲದ ರಾಯಚೂರಿನ ಸಿಂಧನೂರಿನ ಸರ್ಕಾರಿ ಕಾಲೇಜಿನಲ್ಲಿ ಪರೀಕ್ಷೆಗೆ ಹಾಜರಾಗಿದ್ದ ೧೨ ಜನ ಅಭ್ಯರ್ಥಿಗಳ ಮೇಲೆ ದಾಖಲಿಸಿದ ಎಫ್ಐಆರ್ ನ್ನು ರದ್ದುಗೊಳಿಸಿದೆಯೇ ; ಇಲ್ಲ ಎಂದಾದಲ್ಲಿ ಯಾವ ಕಾಲಮಿತಿಯೊಳಗೆ ಎಫ್ಐಆರ್ ಅನ್ನು ರದ್ದುಗೊಳಿಸಿ ಅಭ್ಯರ್ಥಿಗಳನ್ನು ದೋಷಮುಕ್ತರು ಎಂದು ಘೋಷಿಸಲಾಗುತ್ತದೆ ?

## ಕ್ರೀಡಾ ಇಲಾಖೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯುವಕರಿಗಾಗಿ ಇರುವ ಯೋಜನೆಗಳು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೭೨೩ (೮೩೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯುವಕರಿಗಾಗಿ ಯಾವುದಾದರು ಯೋಜನೆಗಳು ಇವೆಯೇ ; ಇದ್ದಲ್ಲಿ, ಯಾವುವು ;

(ಆ) ಸದರಿ ಇಲಾಖೆಯಲ್ಲಿ ಯುವಕರಿಗಾಗಿ ಕ್ರೀಡೆಯಲ್ಲಿ ಆಸಕ್ತಿವಹಿಸುವಂತೆ ಸರ್ಕಾರವು ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಯಾವುವು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಗ್ರಾಮೀಣ ಪ್ರದೇಶಗಳ ಸೈಬರ್ ಪ್ರಕರಣಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೭೨೪ (೮೩೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಗ್ರಾಮೀಣ ಮತ್ತು ಬುಡಕಟ್ಟು ಜನಾಂಗದ ಪ್ರದೇಶಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ದಾಖಲಾದ ಸೈಬರ್ ಪ್ರಕರಣಗಳು ಎಷ್ಟು; ಅವುಗಳಲ್ಲಿ ವಿಲೇವಾರಿ ಮಾಡಲಾದ ಪ್ರಕರಣಗಳು ಎಷ್ಟು; (ವರ್ಷಾವಾರು ಮಾಹಿತಿ ನೀಡುವುದು)

(ಆ) ಸೈಬರ್ ಅಪರಾಧ ನಡೆದ ತಕ್ಷಣ ಪತ್ತೆಗೆ ಕೈಗೊಳ್ಳುವ ನಿಟ್ಟಿನಲ್ಲಿ ಪೊಲೀಸರಿಗೆ ಯಾವ ರೀತಿಯ ತಾಂತ್ರಿಕ ತರಬೇತಿ ಮತ್ತು ಸೌಲಭ್ಯಗಳನ್ನು ನೀಡಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಗ್ರಾಮೀಣ ಮತ್ತು ಬುಡಕಟ್ಟು ಜನಾಂಗಗಳು ವಾಸಿಸುವ ಪ್ರದೇಶಗಳಲ್ಲಿ ಸೈಬರ್ ಅಪರಾಧಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕೋಲಿ/ಕಬ್ಬಲಿಗ/ಬೆಸ್ತ ಸಮುದಾಯಗಳನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೭೨೫ (೬೬೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಿ/ಕಬ್ಬಲಿಗ/ಬೆಸ್ತ ಪರ್ಯಾಯ ಪದಗಳನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಕುರಿತು ಕೇಂದ್ರದ RGI ದಿನಾಂಕ:೩೦–೧೦–೨೦೨೩ ರಂದು ಕಳಿಸಿದ ಪತ್ರ ಮತ್ತು ವರದಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಕೋಲಿ/ಕಬ್ಬಲಿಗ/ಬೆಸ್ತ ಬುಡಕಟ್ಟು ಸಮುದಾಯವು ಮೂಲ ನಿವಾಸಿಗಳು (Aboriginals) ಮತ್ತು ಪ್ರಾಚೀನ ಬುಡಕಟ್ಟು ಜನಾಂಗ (Primitive Tribes) ಎಂದು ಬ್ರಿಟಿಷರ ಕಾಲದಲ್ಲಿರುವ ದಾಖಲೆಗಳನ್ನು ಸೇರಿಸಿ ಈ ಸಮುದಾಯವನ್ನು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರಿಸಲು ಕ್ರಮಕೈಗೊಳ್ಳಲಾಗುವುದೇ ;

(ಇ) ಕರ್ನಾಟಕದ ಎಲ್ಲಾ ಹಿಂದುಳಿದ ವರ್ಗಗಳ ಆಯೋಗಗಳು ಕೋಲಿ/ಕಬ್ಬಲಿಗ/ಬೆಸ್ತ ಬುಡಕಟ್ಟು ಸಮುದಾಯ ಸಾಮಾಜಿಕವಾಗಿ, ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ತೀರಾ ಹಿಂದುಳಿದಿದೆ ಮತ್ತು ಎಸ್.ಟಿ ಪಟ್ಟಿಯಲ್ಲಿ ಸೇರಲು ಅರ್ಹತೆ ಹೊಂದಿವೆ ಎಂದು ಹೇಳಿದರೂ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಈ) ಈಗಾಗಲೇ ಈ ಬುಡಕಟ್ಟು ಸಮುದಾಯದ ಟೋಕರೆ ಕೋಲಿ, ಕೋಲಿ ಧೋರ್, ಕೋಯಾ ಮುಂತಾದವು ಎಸ್.ಟಿ ಪಟ್ಟಿಯಲ್ಲಿದ್ದು ಕೋಲಿ/ಕಬ್ಬಲಿಗ/ಬೆಸ್ತ/ಅಂಬಿಗ/ಬಾರಿಕೇರ ಪದಗಳನ್ನು ಬಿಟ್ಟು ಹೋದ ಪರ್ಯಾಯ ಪದಗಳೆಂದು ಎಸ್.ಟಿ ಪಟ್ಟಿಯಲ್ಲಿ ಸೇರಿಸಬೇಕೆಂದು ಪ್ರಸ್ತಾವನೆ ಕಳಿಸಲು ಸರ್ಕಾರ ಕಾರ್ಯೋನ್ಮುಖವಾಗುವುದೇ ?

## ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುರುತಿಸಿರುವ ಬ್ಯಾಕ್‌ಲಾಗ್ ಹುದ್ದೆ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೬ (೭೭೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುರುತಿಸಿರುವ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು ; (ಇಲಾಖಾವಾರು ಮಾಹಿತಿ ಒದಗಿಸುವುದು)

(ಆ) ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಸಚಿವ ಸಂಪುಟ ಉಪಸಮಿತಿ ಮಾಡಿರುವ ಶಿಫಾರಸ್ಸುಗಳೇನು ;

(ಇ) ಶಿಫಾರಸ್ಸುಗಳನ್ನು ಅನುಷ್ಠಾನಕ್ಕೆ ತರಲು ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಅಗ್ನಿಶಾಮಕ ಠಾಣೆ ಮತ್ತು ವಾಹನಗಳ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೭೨೭ (೮೨೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಅಗ್ನಿಶಾಮಕ ಠಾಣೆಗಳಿವೆ ;

(ಆ) ಸದರಿ ಠಾಣೆಗಳಲ್ಲಿ ದ್ವಿಚಕ್ರ ವಾಹನಗಳು ಕ್ಷಿಪ್ರಕಾರ್ಯಚರಣೆಯ ವಾಹನಗಳು, ಅಗ್ನಿನಂಧಕ ವಾಹನಗಳು ಸೇರಿ ಒಟ್ಟು ಎಷ್ಟು ವಾಹನಗಳಿವೆ ;

(ಇ) ಕೇಂದ್ರ ಸರ್ಕಾರದಿಂದ ವಾಯುಮಾಲಿನ್ಯ ನಿಯಂತ್ರಣಕ್ಕಾಗಿ ೧೫ ವರ್ಷಗಳ ಮೇಲ್ಪಟ್ಟ ವಾಹನಗಳ ಬಳಕೆ ನಿಷೇಧಿಸಿದ ನಂತರ ಎಷ್ಟು ಅಗ್ನಿಶಾಮಕ ವಾಹನಗಳ ಆರ್.ಸಿ ರದ್ದಾಗಿ ನಿರುಪಯುಕ್ತವಾಗಿವೆ ;

(ಈ) ಕೇಂದ್ರ ಸರ್ಕಾರದ ಈ ನಿರ್ಧಾರದಿಂದ ಅಗ್ನಿಶಾಮಕ ವಾಹನಗಳು ಇಲ್ಲದೆಯೆ ತೊಂದರೆಯಾಗಿದೆಯೇ ; ಹಾಗಿದ್ದಲ್ಲಿ, ತೊಂದರೆ ನಿವಾರಣೆಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಉ) ರಾಜ್ಯದಲ್ಲಿ ಅಗ್ನಿಶಾಮಕ ವಾಹನಗಳೇ ಇಲ್ಲದ ಎಷ್ಟು ಠಾಣೆಗಳಿವೆ ?

## ಮಹಿಳೆಯರ ಮೇಲಿನ ದೌರ್ಜನ್ಯದ ಪ್ರಕರಣಗಳ ಕುರಿತು

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೭೨೮ (೮೨೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಮಹಿಳೆಯರ ಮೇಲೆ ನಡೆದ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಎಷ್ಟು;

(ಆ) ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಹಾಗೂ ಅತ್ಯಾಚಾರ ಪ್ರಕರಣಗಳ ಸಂಖ್ಯೆ ಎಷ್ಟು; ಸದರಿ ಪ್ರಕರಣಗಳಲ್ಲಿ ಎಷ್ಟು ಜನ ಆರೋಪಿಗಳನ್ನು ಬಂಧಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಆ ಪೈಕಿ ತಪ್ಪಿತಸ್ಥರಿಗೆ ಶಿಕ್ಷೆಯಾದ ಪ್ರಕರಣಗಳ ಸಂಖ್ಯೆ ಎಷ್ಟು; (ಪ್ರಕರಣವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಈ) ಬೆಂಗಳೂರು ನಗರದಲ್ಲಿ ಅತೀ ಹೆಚ್ಚು ಮಹಿಳೆಯರು ಉದ್ಯೋಗಗಳಲ್ಲಿ ತೊಡಗಿ ಕೊಂಡಿದ್ದು ಇವರ ಸುರಕ್ಷತೆಗೆ ಸರ್ಕಾರ ರೂಪಿಸಿರುವ ಕಾರ್ಯಕ್ರಮ ಯೋಜನೆಗಳಾವುವು ?

## ಬೆಂಗಳೂರು ಜಲಮಂಡಳಿ ನಿರ್ವಹಣೆ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೭೨೯ (೮೨೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಇಲಾಖೆಗಳು ಪಾವತಿಸಬೇಕಾದ ನೀರಿನ ಶುಲ್ಕದ ಒಟ್ಟು ಮೊತ್ತ ಎಷ್ಟು; (ಇಲಾಖಾವಾರು ಬಾಕಿ ಮೊತ್ತದ ಮಾಹಿತಿ ನೀಡುವುದು)

(ಆ) ಜಲಮಂಡಳಿ ನಿರ್ವಹಣೆಗೆ ಸರ್ಕಾರ ಒದಗಿಸುತ್ತಿರುವ ಅನುದಾನ ಎಷ್ಟು; ಕಳೆದ ೩ ವರ್ಷಗಳ ಮಾಹಿತಿ ನೀಡುವುದು;

(ಇ) ಬೆಂಗಳೂರು ನೀರು ಸರಬರಾಜು ಮಂಡಳಿ ಎಷ್ಟು ನೀರಿನ ಸಂಪರ್ಕ ಹೊಂದಿದೆ; ಬಾಕಿ ಶುಲ್ಕ ಪಾವತಿಸದೆ ಉಳಿಸಿಕೊಂಡಿರುವ ಇಲಾಖೆಗಳಿಂದ ವಸೂಲಿಗಾಗಿ ಕೈಗೊಂಡ ಕ್ರಮಗಳೇನು ?

## ಪೊಲೀಸ್ ಇಲಾಖೆಯ ಅಧಿಕಾರಿಗಳ ಅತಿಥಿ ಗೃಹ ಮತ್ತು ಸಂಶೋಧನಾ ಸಂಸ್ಥೆಗಳ ಬಗ್ಗೆ

**ಶ್ರೀ ಅಡಗೂರ್ ಹೆಚ್. ವಿಶ್ವನಾಥ್ (ನಾಮನಿರ್ದೇಶನ ಹೊಂದಿದವರು) :–**

೭೩೦ (೭೪೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೊಲೀಸ್ ಇಲಾಖೆಯಲ್ಲಿರುವ ಹಿರಿಯ ಮತ್ತು ಕಿರಿಯ ಪೊಲೀಸ್ ಅಧಿಕಾರಿಗಳ ಅತಿಥಿ ಗೃಹಗಳ ಮತ್ತು ಸಂಶೋಧನಾ ಸಂಸ್ಥೆಗಳ ಸಂಖ್ಯೆ ಎಷ್ಟು; ಇವುಗಳನ್ನು ಯಾವ ಯಾವ ವರ್ಷಗಳಂದು ನಿರ್ಮಾಣ ಮಾಡಲಾಗಿದೆ; ನಿರ್ಮಾಣ ಮಾಡಲು ಸರ್ಕಾರದ ಪೂರ್ವಾನುಮತಿ ಪಡೆಯಲಾಗಿದೆಯೇ; ಅನುಮತಿ ಪಡೆಯದಿದ್ದಲ್ಲಿ, ಪಡೆಯದಿರಲು ಕಾರಣವೇನು; ಸದರಿ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರದಿಂದ ಮಂಜೂರಾದ ಹಣವೆಷ್ಟು ಮತ್ತು ಇದುವರೆಗೂ ಹಿಂದಿರುಗಿಸಲಾದ ಹಣವೆಷ್ಟು; (ದಾಖಲೆ ನೀಡುವುದು)

(ಆ) ಕಮಾಂಡೆಂಟ್ ಒಂದನೇ ಪಡೆ ಕೆ.ಎಸ್.ಆರ್.ಪಿ. ರವರ ಅಧೀನದಲ್ಲಿರುವ ಹಿರಿಯ ಮತ್ತು ಕಿರಿಯ ಪೊಲೀಸ್ ಅಧಿಕಾರಿಗಳ ಅತಿಥಿ ಗೃಹಗಳಲ್ಲಿ ಮತ್ತು ಸಂತೋಧನಾ ಸಂಸ್ಥೆಗಳಲ್ಲಿ ಲಕ್ಷಾಂತರ ರೂ.ಗಳನ್ನು ಅಂದಿನ ಉಸ್ತುವಾರಿ ಅಧಿಕಾರಿ ಮತ್ತು ಅವರ

ಅಧೀನ ಪೊಲೀಸ್ ಸಿಬ್ಬಂದಿಗಳು ದುರುಪಯೋಗ ಪಡಿಸಿಕೊಂಡ ಬಗ್ಗೆ ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ ಅಪರಾಧ ಮೊಕ್ಕದ್ದಮೆ ಹೂಡದಿರಲು ಕಾರಣವೇನು ;

(ಇ) ಸಹಾಯಕ ಕಮಾಂಡೆಂಟ್ ಹಾಗೂ ಇತರ ಸಂಬಂಧಪಟ್ಟ ಪೊಲೀಸ್ ಸಿಬ್ಬಂದಿಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ನಡೆಸದಿರಲು ಕಾರಣವೇನು ;

(ಈ) ಈ ಪ್ರಕರಣದಲ್ಲಿ ಇಲಾಖಾ ವಿಚಾರಣೆ ನಡೆಸಿದ ಅಧಿಕಾರಿಯು ಅಪಾಧಿತ ಅಧಿಕಾರಿಯಾಗಿ ಹಣ ದುರುಪಯೋಗ ಮಾಡಿಕೊಂಡಿರುವುದಾಗಿ ಸಾಬೀತಾಗಿದೆ ಎಂದು ವರದಿ ನೀಡಿದರೂ ಈ ಅಧಿಕಾರಿಯುನ್ನು ನಿರಪರಾಧಿಯಂದು ಪರಿಗಣಿಸಲು ಕಾರಣವೇನು ? (ಸಂಪೂರ್ಣ ದಾಖಲೆಗಳನ್ನು ನೀಡುವುದು)

## ಪೊಲೀಸ್ ಇಲಾಖೆಯಲ್ಲಿ ಖರೀದಿಸಿರುವ ಉಪಕರಣಗಳ ಬಗ್ಗೆ

**ಶ್ರೀ ಅಡಗೂರ್ ಹೆಚ್. ವಿಶ್ವನಾಥ್ (ನಾಮನಿರ್ದೇಶನ ಹೊಂದಿದವರು) :–**

೭೩೧ (೭೪೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ:೦೧.೦೧.೨೦೧೫ ರಿಂದ ೩೧.೦೧.೨೦೨೫ ರವರೆಗೆ ಪೊಲೀಸ್ ಇಲಾಖೆಯ ಯಾವ ಯಾವ ಘಟಕಗಳ ಎಷ್ಟು ಸೋಲಾರ್ ಲೈಟ್ಗಳನ್ನು ಮತ್ತು ಜೆರಾಕ್ಸ್ ಮಿಷನ್‌ಗಳನ್ನು ಫ್ರಿಡ್ಜ್ ಗಳನ್ನು ಘಟಕವಾರು ಖರೀದಿಸಿ ಅಳವಡಿಸಲಾಗಿದೆ ; ಅವುಗಳಿಗೆ ಪ್ರತ್ಯೇಕವಾಗಿ ಘಟಕವಾರು ತಗುಲಿದ ಒಟ್ಟು ಮೊತ್ತ ಎಷ್ಟು; ಇದನ್ನು ಕೆ.ಟಿ.ಪಿ.ಪಿ. ಕಾಯ್ದೆಯನ್ವಯ ಟೆಂಡರ್ ಮೂಲಕ ಖರೀದಿಸಲಾಗಿದೆಯೇ ಅಥವಾ ದರಪಟ್ಟಿ ಮೂಲಕ ಅಥವಾ ಜಾಹೀರಾತು ನೀಡಿ ಖರೀದಿಸಲಾಗಿದೆಯೇ ; (ವಿವರಗಳನ್ನು ದಾಖಲೆಯೊಂದಿಗೆ ಕಛೇರಿವಾರು, ಘಟಕವಾರು ನೀಡುವುದು)

(ಆ) ಇವುಗಳನ್ನು ಖರೀದಿ ಪೂರ್ವದಲ್ಲಿ ಪ್ರಸ್ತಾಪಿತ ವಸ್ತುಗಳನ್ನು ಖರೀದಿಸಲು ಇಲಾಖಾ ಮುಖ್ಯಸ್ಥರಿಂದ ಆಡಳಿತಾತ್ಮಕ ಮಂಜೂರಾತಿ ಪಡೆದುಕೊಳ್ಳಲಾಗಿದೆಯೇ ; ಪಡೆದುಕೊಳ್ಳದಿದ್ದಲ್ಲಿ, ಕಾರಣವೇನು ; (ಸದರಿ ವಸ್ತುಗಳು ಸುಸ್ಥಿಯಲ್ಲಿ ಇರುವ ಬಗ್ಗೆ, ದಾಖಲೆಗಳೊಂದಿಗೆ ಮಾಹಿತಿ ನೀಡುವುದು) ಹಾಗೂ ಸದರಿ ವಸ್ತುಗಳನ್ನು ಯಾವ ಯಾವ ಅಧಿಕೃತ ಸಂಸ್ಥೆಗಳಿಂದ ಖರೀದಿಸಲಾಗಿದೆ ;

(ಇ) ಇವುಗಳ ವಾರ್ಷಿಕ ನಿರ್ವಹಣೆಗೆ ನೀಡಲಾದ ವರ್ಷವಾರು ಎ.ಎಂ.ಸಿ ಮೊತ್ತವೆಷ್ಟು ; (ಕಛೇರಿ, ಘಟಕ, ವಿಭಾಗವಾರು ದಾಖಲೆಗಳೊಂದಿಗೆ ಮಾಹಿತಿ ನೀಡುವುದು)

(ಈ) ಈ ಕ್ರಮವು ಕಾನೂನುಬಾಹಿರವಾಗಿರುವ ಬಗ್ಗೆ, ಇಲಾಖಾ ಆಂತರಿಕ ಲೆಕ್ಕ ಪರಿಶೋಧನೆ ದಳ ಹಾಗೂ ಮಹಾ ಲೇಖಪಾಲರ ಕಛೇರಿ ಲೆಕ್ಕ ಪರಿಶೋಧನಾ ದಳದವರು ಆಕ್ಷೇಪಣೆ/ನಿಯಮ ಬಾಹೀರವೆಂದು ವರದಿ ನೀಡಿದ್ದಾರೆಯೇ ? (ಸದರಿ ವರದಿಯ ದಾಖಲೆಗಳನ್ನು ನೀಡುವುದು)

## ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ನಿಯೋಜಿಸಿರುವ ಸಿಬ್ಬಂದಿಗಳ ಬಗ್ಗೆ

**ಶ್ರೀ ಅಡಗೂರ್ ಹೆಚ್. ವಿಶ್ವನಾಥ್ (ನಾಮನಿರ್ದೇಶನ ಹೊಂದಿದವರು) :–**

೭೩೨ (೭೪೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೊಲೀಸ್ ಇಲಾಖೆಯಲ್ಲಿ ಯಾವ ಸರ್ಕಾರಿ ಆದೇಶದನ್ವಯ ದಿನಾಂಕ: ೦೧.೦೧.೨೦೧೫ ರಿಂದ ದಿನಾಂಕ: ೩೧.೧೨೨೦೨೩ರ ಅವಧಿಯಲ್ಲಿ ಯಾವ ಅಧಿಕಾರಿಗಳಿಗೆ ಹೋಮ್/ಕಛೇರಿ ಆರ್ಡಲಿಯಾಗಿ ಎಷ್ಟು ; ಸಂಖ್ಯೆಯ (ಅನುಯಾಯಿ/ಪೇದೆ/ಮುಖ್ಯಪೇದೆ/ಎ.ಎಸ್.ಐ.) ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ ;

(ಆ) ಪೊಲೀಸ್ ಅಧಿಕಾರಿಗಳಿಗೆ ನಿಯೋಜಿಸಿರುವ (ಅನುಯಾಯಿ/ಪೇದೆ/ಮುಖ್ಯಪೇದೆ/ಎ.ಎಸ್.ಐ.) ರವರುಗಳಿಗೆ ಹುದ್ದೆಯ ಸಿಬ್ಬಂದಿಗಳ ಹೆಸರು ಮತ್ತು ಸಂಖ್ಯೆ ಯಾವ ನೇಮಕಾತಿ ಪ್ರಾಧಿಕಾರದಿಂದ ಯಾವ ದಿನಾಂಕದಿಂದ ನಿಯೋಜಿಸಲಾಗಿದೆ ; (ಘಟಕವಾರು ಮಾಹಿತಿ ನೀಡುವುದು)

(ಇ) ಪ್ರಸ್ತಾಪಿಸಿದ ದಿನಾಂಕದಲ್ಲಿ ಹೋಮ್/ಕಛೇರಿ ಆಡರ್ಲಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವ (ಅನುಯಾಯಿ/ಪೇದೆ/ಮುಖ್ಯಪೇದೆ/ಎ.ಎಸ್.ಐ) ಹುದ್ದೆಯ ಸಿಬ್ಬಂದಿಗಳಿಗೆ ಪ್ರತಿವರ್ಷ ಪಾವತಿಸಿರುವ ಪೂರ್ಣ ವೇತನ, ಒಂದು ವೇತನ, ಒಂದು ತಿಂಗಳ ಹೆಚ್ಚುವರಿ ವೇತನ (ಹಬ್ಬದ ದಿನಗಳಂದು ಕರ್ತವ್ಯ ನಿರ್ವಹಿಸುವ ಬದಲಿಗೆ) ಗಳಿಕೆ ರಜೆ ನಗದೀಕರಣ, ವೇತನ ಪ್ರಯಾಣ ಭತ್ಯೆ, ರಿಸ್ಕ್ ಭತ್ಯೆ, ಸಮವಸ್ತ್ರ ಭತ್ಯೆ, ವಾಷಿಂಗ್ ಭತ್ಯೆ, ರಿವಾರ್ಡ್ ಭತ್ಯೆ ಮುಂತಾದ ಇತರೆ ಭತ್ಯೆಗಳ ಒಟ್ಟು ಹಣ ಎಷ್ಟು ;

(ಈ) ದಿನಾಂಕ:೦೧.೦೧.೨೦೨೦ ರಿಂದ ૩೧.೦೧.೨೦೨೫ ರವರೆಗೆ ನಿವೃತ್ತಿ ಹೊಂದಿದ ಯಾವ ಯಾವ ಪೊಲೀಸ್ ಅಧಿಕಾರಿಗಳಿಗೆ ಪ್ರತ್ಯೇಕವಾಗಿ ಆಡರ್ಲಿ ಭತ್ಯೆಯನ್ನು ಪಾವತಿಸಲಾಗಿದೆ ? (ದಾಖಲೆಗಳೊಂದಿಗೆ ಮಾಹಿತಿ ನೀಡುವುದು)

## ಪೊಲೀಸ್ ಇಲಾಖೆಯಲ್ಲಿ ಹಣ ದುರುಪಯೋಗವಾಗಿರುವ ಬಗ್ಗೆ

**ಶ್ರೀ ಅಡಗೂರ್ ಹೆಚ್. ವಿಶ್ವನಾಥ್ (ನಾಮನಿರ್ದೇಶನ ಹೊಂದಿದವರು) :–**

೭૩૩ (೭೪೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ:೦೧.೦೧.೨೦೨೫ ರಿಂದ ૩೧.೦૩.೨೦೨೫ ರವರೆಗೆ ಪೊಲೀಸ್ ಇಲಾಖೆಯ ವಿವಿಧ ಘಟಕಗಳಲ್ಲಿ ಕೋಟ್ಯಾಂತರ ರೂ.ಗಳು ಅಧಿಕಾರಿಗಳ ಮತ್ತು ಆಡಳಿತ ಸಿಬ್ಬಂದಿಯವರ ಅಧಿಕಾರ

ದುರುಪಯೋಗ, ನಿಯಮಾವಳಿಗಳ ಉಲ್ಲಂಘನೆ ಮತ್ತು ನಿರ್ಲಕ್ಷತೆಯಿಂದ ಸರ್ಕಾರದ ಬೊಕ್ಕಸಕ್ಕೆ ಉಂಟಾದ ಆರ್ಥಿಕ ನಷ್ಟದ ಬಗ್ಗೆ ಇಲಾಖೆ ಮತ್ತು ಮಹಾ ಲೆಕ್ಕಪರಿಶೋಧಕರ ಲೆಕ್ಕ ಪರಿಶೋಧನೆಯಿಂದ ಎಷ್ಟು ಕೋಟಿ ದುರುವಯೋಗವಾಗಿರುವುದು ಬೆಳಕಿಗೆ ಬಂದಿದೆ ;

(ಆ) ಇತ್ತೀಚೆಗೆ ಎಸ್.ಪಿ. ಮಡಿಕೇರಿ, ಎಸ್.ಪಿ. ತುಮಕೂರು, ಕಮಾಂಡೆಂಟ್, ೧೧ನೇ ಪಡೆ ಕೆ.ಎಸ್.ಆರ್.ಪಿ. ಹಾಸನ ಹಾಗೂ ಇತರೆ ಘಟಕಗಳಲ್ಲಿ ಕೋಟಿ ಗಟ್ಟಲೆ ಹಣ ದುರುಪಯೋಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಘಟಕಾಧಿಕಾರಿಗಳು ಮತ್ತು ಸಹಾಯಕ ಆಡಳಿತ ಅಧಿಕಾರಿಗಳು ಸೇರಿದಂತೆ ಸಿಬ್ಬಂದಿಗಳ ವಿರುದ್ಧ ಅಪರಾಧ ಮೊಕ್ಕದ್ದಮೆಯನ್ನು ಹೂಡದಿರಲು ಕಾರಣವೇನು ?

## ಪತ್ರಕರ್ತರು ಹಾಗೂ ಮಾಧ್ಯಮ ಸಿಬ್ಬಂದಿಗಳ ರಕ್ಷಣೆ ಬಗ್ಗೆ

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩೪ (೮೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಮಾಧ್ಯಮ ಅಕಾಡೆಮಿ ವತಿಯಿಂದ ಜಿಲ್ಲಾ ಮಟ್ಟದ ಹಾಗೂ ಗ್ರಾಮೀಣ ಮಟ್ಟದ ಪತ್ರಕರ್ತರಿಗೆ ವೃತ್ತಿ ನೈಪುಣ್ಯತೆ ಹೆಚ್ಚಿಸಲು ಕೈಗೊಂಡ ಕಾರ್ಯಕ್ರಮಗಳಾವುವು ; (ಮಾಹಿತಿ ನೀಡುವುದು)

(ಆ) ಇತ್ತೀಚಿನ ದಿನಗಳಲ್ಲಿ ಪತ್ರಕರ್ತರ ಮೇಲೆ ದಾಳಿ ಮತ್ತು ಇನ್ನಿತರ ಘಟನೆಗಳು ಸಂಭವಿಸುತ್ತಿರುವುದರಿಂದ ಪತ್ರಿಕಾ/ವಿದ್ಯುನ್ಮಾನ ಮಾಧ್ಯಮಗಳಲ್ಲಿ ನಿರ್ವಹಿಸುತ್ತಿರುವ ಸಿಬ್ಬಂದಿ/ಮಹಿಳಾ ಸಿಬ್ಬಂದಿಗಳಿಗೆ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮವೇನು ; (ಮಾಹಿತಿ ನೀಡುವುದು)

(ಇ) ಗ್ರಾಮೀಣ ಪತ್ರಕರ್ತರಿಗೆ ವಸತಿ ಯೋಜನೆಗೆ ಸರ್ಕಾರ ಕೈಗೊಂಡ ಕ್ರಮವೇನು ? (ಮಾಹಿತಿ ನೀಡುವುದು)

## ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಅರಿವು ಮೂಡಿಸುವ ಕಾರ್ಯಕ್ರಮದ ಬಗ್ಗೆ

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩೫ (೮೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಸರ್ಕಾರ ಕೈಗೊಂಡ ಕ್ರಮವೇನು ; (ಮಾಹಿತಿ ನೀಡುವುದು)

(ಆ) ಕಳೆದ ೨ ವರ್ಷದಲ್ಲಿ ಶಾಲಾ ಕಾಲೇಜಿನಲ್ಲಿ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಎಷ್ಟು ವಿಚಾರ ಸಂಕೀರಣ ಕಾರ್ಯಕ್ರಮ ಕೈಗೊಳ್ಳಲಾಗಿದೆ ; (ಮಾಹಿತಿ ನೀಡುವುದು)

(ಇ) ಶಾಲಾ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲು ಹೊಸದಾಗಿ ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ ; (ಮಾಹಿತಿ ನೀಡುವುದು)

(ಈ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಬೀದಿ ನಾಟಕ ಕಾರ್ಯಕ್ರಮ, ಸಾಕ್ಷ್ಯ ಚಿತ್ರ ತಯಾರಿಸಿ ವಿದ್ಯುನ್ಮಾನ ಮಾಧ್ಯಮಗಳಲ್ಲಿ, ನಾಟಕಗಳಲ್ಲಿ ರೇಡಿಯೋಗಳಲ್ಲಿ ಕಳೆದ ೨ ವರ್ಷದಲ್ಲಿ ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಎಷ್ಟು ಕಾರ್ಯಕ್ರಮಗಳಾಗಿವೆ ? (ಮಾಹಿತಿ ನೀಡುವುದು)

## ವಸತಿ ಗೃಹ ನಿರ್ಮಾಣ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩೬ (೮೦೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆ ವ್ಯಾಪ್ತಿಯಲ್ಲಿ ಪೊಲೀಸ್ ಇಲಾಖೆಯ ವಸತಿ ಗೃಹಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಶಿಥಿಲಾವಸ್ಥೆಯಲ್ಲಿರುವ ವಸತಿ ಗೃಹಗಳ ನವೀಕರಣ ಹಾಗೂ ಹೊಸದಾಗಿ ವಸತಿ ಗೃಹ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮವೇನು ; (ಮಾಹಿತಿ ನೀಡುವುದು)

(ಇ) ಜಿಲ್ಲೆಯ ವ್ಯಾಪ್ತಿಯಲ್ಲಿ ಹೊಸದಾಗಿ ಎಷ್ಟು ವಸತಿ ಗೃಹಗಳನ್ನು ನಿರ್ಮಾಣ ಮಾಡಲಾಗುತ್ತಿದೆ ; ಹೊಸದಾಗಿ ವಸತಿ ಗೃಹ ನಿರ್ಮಾಣಕ್ಕೆ ಪ್ರಸ್ತಾವನೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ? (ಅಂಕಿ ಸಮೇತ ವಿವರ ಒದಗಿಸುವುದು)

## ಮಹಿಳೆಯರು, ಯುವತಿಯರು ನಾಪತ್ತೆ ಪ್ರಕರಣ ಕುರಿತು

**ಡಾ॥ ಚಂದ್ರಶೇಖರ್ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :–**

೭೩೭ (೭೯೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ೨೦೨೩ ರಿಂದ ಇಲ್ಲಿಯವರೆಗೆ ಎಷ್ಟು ಜನ ಮಹಿಳೆಯರು, ಯುವತಿಯರು ನಾಪತ್ತೆಯಾಗಿರುವ ಬಗ್ಗೆ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಆ ಪೈಕಿ ಪತ್ತೆ ಹಚ್ಚಲಾದ ಪ್ರಕರಣಗಳ ಸಂಖ್ಯೆ ಎಷ್ಟು ? (ಕಾರಣ ಸಹಿತ ಜಿಲ್ಲಾವಾರು ವಿವರ ನೀಡುವುದು)

## ಅಕ್ರಮ ಮರಳು ದಂಧೆಕೋರರ ಕುರಿತು

**ಡಾ॥ ಚಂದ್ರಶೇಖರ್ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :–**

೭೩೮ (೭೯೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ೨೦೨೩–೨೪ ಹಾಗೂ ೨೦೨೪–೨೫ನೇ ಸಾಲಿನಲ್ಲಿ ಅಕ್ರಮ ಮರಳು ದಂಧೆಕೋರರ ವಿರುದ್ಧ ದಾಖಲಿಸಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಸದರಿ ಪ್ರಕರಣಗಳಲ್ಲಿ ಸರ್ಕಾರದ ವಶಕ್ಕೆ ಪಡೆದ ಮರಳಿನ ಮೌಲ್ಯ ಎಷ್ಟು ?

## ಕ್ರೀಡಾಪಟುಗಳ ವಿವಿಧ ಯೋಜನೆಗಳ ಕುರಿತು

**ಡಾ॥ ಚಂದ್ರಶೇಖರ್ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :–**

೭೩೯ (೭೯೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಎಷ್ಟು ಜನ ಕ್ರೀಡಾಪಟುಗಳು ವಿವಿಧ ಕ್ರೀಡೆಗಳಲ್ಲಿ ರಾಜ್ಯ ಮತ್ತು ಅಂತರರಾಜ್ಯಕ್ಕೆ ಆಯ್ಕೆಯಾಗಿದ್ದಾರೆ ; (ವಿವರ ನೀಡುವುದು)

(ಆ) ಕ್ರೀಡಾಪಟುಗಳಿಗೆ ಉತ್ತೇಜನ ನೀಡುವ ದೃಷ್ಟಿಯಿಂದ ಸರ್ಕಾರ ಯಾವ ಯಾವ ಯೋಜನೆ ಕೈಗೊಂಡಿದೆ ? (ಮಾಹಿತಿ ನೀಡುವುದು)

## ಅನುದಾನ ಕುರಿತು

**ಡಾ॥ ಚಂದ್ರಶೇಖರ್ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :–**

೭೪೦ (೭೯೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಯಾವ ಯಾವ ಯೋಜನೆಗೆ ಅನುದಾನ ಬಿಡುಗಡೆ ಮಾಡಲಾಗಿದೆ ಹಾಗೂ ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಯೋಜನೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ;

(ಆ) ಬಿಡುಗಡೆಯಾದ ಅನುದಾನದಲ್ಲಿ ಇಲ್ಲಿಯವರೆಗೆ ಯಾವ ಯಾವ ಕಾಮಗಾರಿ ಕೈಗೊಳ್ಳಲಾಗಿದೆ ; (ವಿವರ ಒದಗಿಸುವುದು)

(ಇ) ಸರ್ಕಾರಕ್ಕೆ ಹೊಸ ಕಾಮಗಾರಿಗಳ ಬಗ್ಗೆ ಪ್ರಸ್ತಾವನೆ ಬಂದಿದೆಯೇ ? ಬಂದಿದ್ದಲ್ಲಿ, ವಿವರ ನೀಡುವುದು ;

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅಂತರ್ಜಲ ಕುಸಿದಿರುವ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೪೧ (೭೮೬) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ಅತ್ಯಂತ ಅಪಾಯದ ಮಟ್ಟಕ್ಕೆ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ತಾಲ್ಲೂಕುಗಳಲ್ಲಿ ಅಂತರ್ಜಲ ಮಟ್ಟ ಕುಸಿದಿದೆ ; (ವಿವರ ನೀಡುವುದು)

(ಆ) ಅಂತರ್ಜಲ ಮಟ್ಟ ಕುಸಿದ ತಾಲ್ಲೂಕುಗಳಲ್ಲಿ ಹೊಸದಾಗಿ ಕೊಳವೆ ಬಾವಿಗಳನ್ನು ಕೊರೆಯಲು ನಿರ್ಬಂಧ ವಿಧಿಸಲಾಗಿದೆಯೇ ;

(ಇ) ಸದರಿ ಜಿಲ್ಲೆಗಳಲ್ಲಿ ಕುಸಿಯುತ್ತಿರುವ ಅಂತರ್ಜಲ ಮಟ್ಟವನ್ನು ಕಾಪಾಡಿಕೊಳ್ಳಲು ರಾಜ್ಯ ಸರ್ಕಾರ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಯಾವುವು ; ಇದಕ್ಕಾಗಿ ಮೀಸಲಿಟ್ಟ ಅನುದಾನವೆಷ್ಟು ? (ವಿವರ ನೀಡುವುದು)

## ಹೈದರಾಬಾದ್ ಕರ್ನಾಟಕ ಭಾಗದ ಪ್ರವಾಸಿ ತಾಣಗಳ ಅಭಿವೃದ್ಧಿ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೪೨ (೭೮೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್ ಕರ್ನಾಟಕ ಭಾಗದ ವಿವಿಧ ಪ್ರಸಿದ್ಧ ತಾಣಗಳ ತಾಲ್ಲೂಕು ಪ್ರದೇಶದ ವ್ಯಾಪ್ತಿಯಲ್ಲಿ ಅಭಿವೃದ್ಧಿಪಡಿಸಿದ ಯೋಜನಾ ಮತ್ತು ಅನುಷ್ಠಾನಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿನ ಪ್ರೇಕ್ಷಣೀಯ ಸ್ಥಳಗಳನ್ನು ಗುರುತಿಸಿ ಅಭಿವೃದ್ಧಿ ಪಡಿಸದಿರುವ ತಾಣಗಳ ಸಂಖ್ಯೆ ಎಷ್ಟು; ಅಭಿವೃದ್ಧಿ ಪಡಿಸದಿರುವ ತಾಣಗಳ ಅಭಿವೃದ್ಧಿಗಾಗಿ ಸರ್ಕಾರದ ಮುಂದಿರುವ ಪ್ರಸ್ತಾವನೆಗಳು ಯಾವುವು ; (ವಿವರ ನೀಡುವುದು)

(ಇ) ಈ ಜಿಲ್ಲೆಗಳ ಭಾಗದ ವಿವಿಧ ಪ್ರಸಿದ್ಧ ತಾಣಗಳನ್ನು ಅಭಿವೃದ್ಧಿಪಡಿಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ಹಾಗೂ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲು ಸರ್ಕಾರಕ್ಕಿರುವ ಅಡೆತಡೆಗಳೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ "ಯುವ ನಿಧಿ" ಫಲಾನುಭವಿಗಳ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೪೩ (೭೮೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸರ್ಕಾರ ಘೋಷಿಸಿದ ಪಂಚ ಗ್ಯಾರಂಟಿಗಳ ಪೈಕಿ ಯುವನಿಧಿ ಯೋಜನೆಯು ಒಂದಾಗಿದ್ದು, ಈ ಜಿಲ್ಲೆಗಳಲ್ಲಿ ಯೋಜನೆ ಘೋಷಿಸಿದ ದಿನಾಂಕದಿಂದ ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳು ಅರ್ಜಿ ಸಲ್ಲಿಸಿದ್ದಾರೆ ; (ವಿವರ ನೀಡುವುದು)

(ಆ) ಯುವನಿಧಿಗೆ ಅರ್ಜಿ ಸಲ್ಲಿಸಿದ ಫಲಾನುಭವಿಗಳಲ್ಲಿ ಎಷ್ಟು ಫಲಾನುಭವಿಗಳಿಗೆ ನಿರುದ್ಯೋಗ ಭತ್ಯೆ ದೊರೆತಿದೆ ಹಾಗೂ ಸರ್ಕಾರ ನಿಗದಿಪಡಿಸಿರುವ ಭತ್ಯೆ ಎಷ್ಟು ; (ವಿವರ ನೀಡುವುದು)

(ಇ) ಯುವನಿಧಿ ದೊರೆಯದೆ ನಿರಾಸೆಯಾಗಿರುವ ಯುವ ಜನರಿಗೆ ಸರ್ಕಾರ ಕಲ್ಪಿಸಿರುವ ಪರ್ಯಾಯ ಯೋಜನೆಗಳು ಯಾವುವು ?

## ಅಬಕಾರಿಯಿಂದ ಬಂದ ಆದಾಯದ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೪ (೭೭೧) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಅಬಕಾರಿ ಇಲಾಖೆಯಿಂದ ಬಂದ ಆದಾಯದ ಮೊತ್ತವೆಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ಎಷ್ಟು ಎಂ.ಎಸ್.ಐ.ಎಲ್ ಮಳಿಗೆ ತೆರೆಯಲು ಅನುಮತಿ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಎಂ.ಎಸ್.ಐ.ಎಲ್ ಮಳಿಗೆ ತೆರೆಯಲು ಅನುಮತಿ ನೀಡಲು ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ ? (ಮಾಹಿತಿ ನೀಡುವುದು)

## ರಾಜ್ಯ ಮಟ್ಟದ ಜ್ಯೇಷ್ಠತಾ ಪಟ್ಟಿ ತಯಾರಿಸುವ ಬಗ್ಗೆ

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೪೫ (೮೦೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಒಂದೇ ದಿನಾಂಕದಂದು ಜಿಲ್ಲಾವಾರು ಕೇಡರುಗಳಿಗೆ ನೇರ ನೇಮಕಾತಿ ಮುಖಾಂತರ ನೇಮಕಗೊಂಡ ನೌಕರರನ್ನು ಒಗ್ಗೂಡಿಸಿ ಒಂದು ರಾಜ್ಯ ಮಟ್ಟದ ಜ್ಯೇಷ್ಠತಾ ಪಟ್ಟಿಯನ್ನು ತಯಾರಿಸುವಾಗ, ಸದರಿ ನೌಕರರ ನಡುವಿನ ಸಾಪೇಕ್ಷ ಜ್ಯೇಷ್ಠತೆ ಯನ್ನು ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಠತಾ) ನಿಯಮಗಳು, ೧೯೫೭ ರ ನಿಯಮ ೭–ಎ(1)(i) ಪ್ರಕಾರ ಸಿದ್ಧಪಡಿಸಬೇಕಾಗುವುದೇ ; ಅಥವಾ ನಿಯಮ ೭–ಎ ಎ(1)(ii) ಪ್ರಕಾರ ಸಿದ್ಧಪಡಿಸಬೇಕೆ ; (ವಿವರ ನೀಡುವುದು)

(ಆ) ಮಾನ್ಯ ರಾಜ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ ೪೬೮೫/-೪೬೮೮/೧೯೯೫ Lingaiah K and other Vs. State and Others, ರ ಆದೇಶದ ಪ್ಯಾರಾ ೩೩ರ ಪ್ರಕಾರ ಎರಡು ವರ್ಷಗಳಲ್ಲಿ ಹಾಗೂ ಎರಡು ವರ್ಷಗಳ ನಂತರ ವಿಸ್ತರಿಸಿದ ಪರಿವೀಕ್ಷಣಾ ಅವಧಿ ಪೂರೈಸಿ, ಹುದ್ದೆ ಸ್ಥಿರೀಕರಣ ಹೊಂದಿದ ಸರ್ಕಾರಿ ನೌಕರರ ನಡುವಿನ ಸಾಪೇಕ್ಷ ಜ್ಯೇಷ್ಠತೆಯನ್ನು ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಠತಾ) ನಿಯಮಗಳು, ೧೯೫೭ರ ನಿಯಮದ ಪ್ರಕಾರ ಸಿದ್ಧಪಡಿಸಲಾಗಿದೆಯೇ ? (ಸದರಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಆದೇಶದ ಪ್ರತಿಯನ್ನು ನೀಡುವುದು)

## ರಾಜ್ಯದಲ್ಲಿ ಪ್ರವಾಸೋದ್ಯಮ ಇಲಾಖೆಯಲ್ಲಿ ರೆಸಾರ್ಟ್ ಮತ್ತು ಹೋಂ ಸ್ಟೇಗಳ ಮಾಹಿತಿ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)(ಶಿಕ್ಷಕರ ಕ್ಷೇತ್ರ) :-**

೨೪೬ (೮೧೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರವಾಸೋದ್ಯಮ ಇಲಾಖೆ ಮತ್ತು ಅಭಿವೃದ್ಧಿ ನಿಗಮದ ಅಡಿಯಲ್ಲಿ ಬರುವ ಹೋಟೆಲ್, ರೆಸಾರ್ಟ್‌ಗಳು ಮತ್ತು ಹೋಂ ಸ್ಟೇಗಳು ಎಷ್ಟು ;

(ಆ) ಪ್ರವಾಸೋದ್ಯಮ ಇಲಾಖೆಯಿಂದ ಮತ್ತು ಅಭಿವೃದ್ಧಿ ನಿಗಮದಿಂದ ಹೋಟೆಲ್, ರೆಸಾರ್ಟ್ ಮತ್ತು ಹೋಂ ಸ್ಟೇಗಳನ್ನು ಎಷ್ಟು ವರ್ಷದ ಅವಧಿಯವರೆಗೆ ಗುತ್ತಿಗೆ ನೀಡಲಾಗಿದೆ ;

(ಇ) ಈ ರೀತಿಯಾಗಿ ಗುತ್ತಿಗೆ ನೀಡಿದ್ದಲ್ಲಿ, ಪ್ರವಾಸೋದ್ಯಮ ಮತ್ತು ನಿಗಮದಿಂದ ಅತೀ ಹಿಂದುಳಿದ ವರ್ಗಗಳ ಗುತ್ತಿಗೆದಾರರಿಗೆ ಪ್ರಾಶಸ್ತ್ಯವನ್ನು ನೀಡಲಾಗಿದೆಯೇ ;

(ಈ) ನೀಡದೇ ಇದ್ದಲ್ಲಿ, ಯಾವ ಕಾರಣಕ್ಕಾಗಿ ಅತೀ ಹಿಂದುಳಿದ ಗುತ್ತಿಗೆದಾರರಿಗೆ ನೀಡದೇ ಇರಲು ಕಾರಣವೇನು ?

## ಸಣ್ಣ ನೀರಾವರಿ ಇಲಾಖೆಯಲ್ಲಿ ಟೆಂಡರ್ ಆಹ್ವಾನಿಸಿರುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)(ಶಿಕ್ಷಕರ ಕ್ಷೇತ್ರ) :–**

೭೪೭ (೮೧೩) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ನೀರಾವರಿ ಇಲಾಖೆಯಲ್ಲಿ ಇದುವರೆಗೂ ಟೆಂಡರ್ ಆಹ್ವಾನಿಸಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಈ ಪೈಕಿ ಸರ್ಕಾರದ ಆದೇಶ ಅನುಸಾರ ಅತೀ ಹಿಂದುಳಿದ ವರ್ಗಗಳ ಗುತ್ತಿಗೆದಾರರಿಗೆ ನೀಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ;

(ಇ) ಸರ್ಕಾರಿ ಆದೇಶ ಮತ್ತು ನಿಯಮಾನುಸಾರ ಅತೀ ಹಿಂದುಳಿದ ವರ್ಗದ ಗುತ್ತಿಗೆದಾರರಿಗೆ ಟೆಂಡರ್ ನೀಡದೇ ಇದ್ದಲ್ಲಿ, ಕಾರಣಗಳೇನು ?

## ರಾಯಚೂರು ಜಿಲ್ಲೆಯ ಯರಮರಸ ಉಷ್ಣ ವಿದ್ಯುತ್ ಸ್ಥಾವರದ ನಿರ್ವಹಣೆ ಕುರಿತು (ವೈಟಿಪಿಸಿಎಲ್)

**ಶ್ರೀ ಎ. ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೮ (೮೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ, ರಾಯಚೂರು ತಾಲ್ಲೂಕಿನಲ್ಲಿರುವ "ಯರಮರಸ ಉಷ್ಣ ವಿದ್ಯುತ್ ಸ್ಥಾವರದಲ್ಲಿ" ಹೊರಗುತ್ತಿಗೆ ಆಧಾರದ

ಮೇಲೆ ಟೆಕ್ನಿಕಲ್ ಮತ್ತು ನಾನ್ ಟೆಕ್ನಿಕಲ್ ಹುದ್ದೆಗಳಿಗೆ ನೇಮಕಾತಿಯಲ್ಲಿ ಸರ್ಕಾರದ ನೂತನ ಆದೇಶವನ್ನು ಪಾಲಿಸಲಾಗಿದೆಯೇ ; (ಮಾಹಿತಿ ನೀಡುವುದು)

(ಆ) ನೇಮಕಾತಿಯನ್ನು ೩೭೧ (ಜೆ) ಯಡಿ ಮಾಡಲಾಗಿದೆಯೇ ;

(ಇ) ೩೭೧ (ಜೆ) ನಿಯಮದ ಪ್ರಕಾರ ನೇಮಕಾತಿಯಲ್ಲಿ ಸ್ಥಳೀಯರಿಗೆ ಶೇ.೮೦% ಮೀಸಲಾತಿಯನ್ನು ನೀಡಲಾಗಿದೆಯೇ ; ನೀಡದಿದ್ದಲ್ಲಿ, ಕಾರಣವೇನು ;

(ಈ) ನೇಮಕಾತಿಯಲ್ಲಿರುವ ಒಟ್ಟು ಟೆಕ್ನಿಕಲ್ ಮತ್ತು ನಾನ್ ಟೆಕ್ನಿಕಲ್ ಹುದ್ದೆಗಳೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ರಾಯಚೂರು ಜಿಲ್ಲೆಯ ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಯ ಕುರಿತು

**ಶ್ರೀ ಎ. ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೯ (೮೦೬) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಸಣ್ಣ ನೀರಾವರಿ ಇಲಾಖೆಯಡಿಯಲ್ಲಿ ಕೈಗೊಂಡ ಕಾಮಗಾರಿಗಳಾವುವು ; (ವರ್ಷವಾರು ವಿವರ ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಕೈಗೊಂಡ ಕಾಮಗಾರಿಗಳು ಯಾವ ಹಂತದಲ್ಲಿವೆ ; ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿ ನಿರ್ವಹಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ?

## ರಾಜ್ಯದಲ್ಲಿ ಪೊಲೀಸ್ ರಕ್ಷಣೆ ಒದಗಿಸಲಾಗಿರುವ ವ್ಯಕ್ತಿಗಳ ವಿವರ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೦ (೭೪೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂತ್ರಿಗಳು, ಸರ್ಕಾರಿ ಅಧಿಕಾರಿಗಳು (ಮಾಜಿ ಮಂತ್ರಿಗಳು ಮತ್ತು ನಿವೃತ್ತರು) ಶಾಸಕರು ಸಂಸದರು (ಹಾಲಿ ಮತ್ತು ಮಾಜಿ)ಗಳು, ಮಠಾಧೀಶರುಗಳನ್ನು ಹೊರತುಪಡಿಸಿ ರಾಜ್ಯದಲ್ಲಿ ವಿಶಲ್ ಬ್ಲೋಯರ್, ಪಿಟಿಷನರ್ಸ್ ಮತ್ತು ಮಾಹಿತಿ ಹಕ್ಕು ಕಾರ್ಯಕರ್ತರಿಗೆ ಕೊಲೆ ಬೆದರಿಕೆ, ಹತ್ಯೆಯ ಸಂಚು ಹಿನ್ನೆಲೆಯಲ್ಲಿ ಪೊಲೀಸ್ ರಕ್ಷಣೆ ಒದಗಿಸಲಾಗಿದೆಯೇ ; ಒದಗಿಸಲಾಗಿರುವ ವ್ಯಕ್ತಿಗಳ ಹೆಸರು, ವಿವರ ಮತ್ತು ಒಟ್ಟು ಸಂಖ್ಯೆ ಎಷ್ಟು ;

(ಆ) ರಾಷ್ಟ್ರೀಯ ಸ್ವಯಂಸೇವಕ ಸಂಘ(RSS)ವು ನೋಂದಾಯಿತವಲ್ಲದ ಹಾಗೂ ಸ್ವಂತ ಅಥವಾ ಬಾಡಿಗೆ ಕಛೇರಿಗಳು ಇಲ್ಲವೆಂಬ ಮಾಹಿತಿ ಇದ್ದು, ಸರ್ಕಾರದಿಂದ ಕೇಶವಕೃಪ, ರಾಷ್ಟ್ರೋತ್ಥಾನ ಮತ್ತು ಯಾದವಸ್ಮೃತಿ ಕಟ್ಟಡಗಳಿಗೆ ಪೊಲೀಸ್ ರಕ್ಷಣೆ ಕೊಟ್ಟಿರುವುದು ನಿಜವೇ ; ಈ ಕಟ್ಟಡಗಳಿಗೆ ಪೊಲೀಸ್ ರಕ್ಷಣೆ ಕೊಟ್ಟಿರುವ ಉದ್ದೇಶವೇನು ?

## ರಾಜ್ಯದಲ್ಲಿ ಸಂಘ–ಸಂಸ್ಥೆಗಳಿಂದ ನಡೆಸುವ ಸಭೆ–ಸಮಾರಂಭ ಕಾರ್ಯಕ್ರಮಕ್ಕೆ ಅನುಮತಿ ಕಡ್ಡಾಯದ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೧ (೭೪೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾನೂನು ಸುವ್ಯವಸ್ಥೆ ಕಾಪಾಡಲು ರಾಜ್ಯದಲ್ಲಿ ಸಾರ್ವಜನಿಕವಾಗಿ ನಡೆಯುವ ಯಾವುದೇ ಸಭೆ–ಸಮಾರಂಭ ಕಾರ್ಯಕ್ರಮ, ಮೆರವಣಿಗೆಗಳು ನಡೆಸುವ ಮೊದಲು ಕಾರ್ಯಕ್ರಮಗಳಲ್ಲಿ ಮೈಕ್ ಬಳಕೆಗೆ ಮತ್ತು ಮೆರವಣಿಗೆಗಳಿಗೆ ಪೊಲೀಸ್ ಅನುಮತಿ

ಕಡ್ಡಾಯುವಾಗಿ ಪಡೆಯುಬೇಕು ಎಂಬ ಸೂಚನೆಯುನ್ನು ಸಾರ್ವಜನಿಕರು ಪಾಲಿಸುವಂತೆ ಪೊಲೀಸ್ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆಯೇ ;

(ಆ) ರಾಜ್ಯದಲ್ಲಿ ಸಂಘ–ಸಂಸ್ಥೆಗಳಿಂದ ನಡೆಸುವ ಸಭೆ–ಸಮಾರಂಭ ಕಾರ್ಯಕ್ರಮ, ಮೆರವಣಿಗೆಗಳಿಗೆ ಪೊಲೀಸ್ ಅನುಮತಿ ಪಡೆಯುತ್ತಿಲ್ಲ ಎಂಬ ಬಗ್ಗೆ ಸಾರ್ವಜನಿಕರಿಂದ ಬಂದ ದೂರುಗಳು ಸರ್ಕಾರದ ಗಮನಕ್ಕೆ ಬಂದಿವೆಯೇ ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ರಾಷ್ಟ್ರೀಯ ಸ್ವಯಂಸೇವಕ ಸಂಘವು (RSS) ನೋಂದಾಯಿತವಲ್ಲದ ಸಂಸ್ಥೆಯಾಗಿರದೆ ನೂರಾರು ಸಭೆ ಸಮಾರಂಭ ಕಾರ್ಯಕ್ರಮಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) RSS ನ ಈ ಕಾರ್ಯಕ್ರಮಗಳಿಗೆ ಅನುಮತಿ ಕೇಳದೆ ಮಾಹಿತಿಗಾಗಿ ಎಂದು ಕೊಟ್ಟ ಪತ್ರದ ಆಧಾರದ ಮೇಲೆ ಪೊಲೀಸ್ ಅಧಿಕಾರಿಗಳು ಮೈಕ್ ಅನುಮತಿಯಾಗಲಿ ಕೊಡದೆ ಭದ್ರತೆ ಕೊಡುತ್ತಿದ್ದಾರೆಂಬ ಬಗ್ಗೆ ಸರ್ಕಾರಕ್ಕೆ ಅರಿವಿದೆಯೇ ;

(ಉ) ಈ ಕಾರ್ಯಕ್ರಮಗಳಿಗೆ ಅನುಮತಿಗಾಗಿ ಮನವಿ ಕೊಟ್ಟರೂ ಪೊಲೀಸ್ ಅಧಿಕಾರಿಗಳು RSS ನವರಿಗೆ ಪರೋಕ್ಷವಾಗಿ ಸಹಕರಿಸುತ್ತಿರುವಂತೆ ಅನುಮತಿ ಕೊಡದೆ ಪೊಲೀಸ್ ಭದ್ರತೆ ಒದಗಿಸುತ್ತಿದ್ದಾರೆಂಬ ಆರೋಪಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆದ ವಿಷಯಗಳು ಗುಪ್ತಚರ ವಿಭಾಗದಿಂದ ಸರ್ಕಾರಕ್ಕೆ ಸಿಕ್ಕಿದೆಯೇ ; ಸಿಕ್ಕಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O241/500 ಪ್ರತಿಗಳು/05–03–2025